ಸಂಪುಟ: 13 Volume ಸಂಚಿಕೆ: 238 Issue ಪುಟಗಳು: 08 Pages ಶುಕ್ರವಾರ 07 ನವೆಂಬರ 2025 ₹2 PRGINO. 120927(RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

‘ಉತ್ಸಾಹವಿಲ್ಲದೆ ಯಾವ ಮಹತ್ತರವಾದ ಕೆಲಸವೂ ನಡೆದಿಲ್ಲ‘
ಸುಭಾಷ್ ಚಂದ್ರ ಬೋಸ್

4 ರಾಷ್ಟ್ರೀಯ ಲೋಕ್ ಅದಾಲತ್ | 2 ಸಾಹಿತ್ಯ ಮತ್ತು ಪ್ರಕಾಶನ ಜಗತ್ತು | 8 ಹಮ್ಜ್‌ಟೆರ್ ನಾಥ್ ಸ್ಪರ್ಧೆ



ಬಾಗಲಕೋಟೆ : ಜಿಲ್ಲೆಯ ಮುಧೋಳ ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಗುರುವಾರ ರಸ್ತೆ ಬಂದ್ ಮಾಡಿ ಕಬ್ಬು ಬೆಳೆಗಾರರು ಕಬ್ಬಿನದರ ಏರಿಕೆಗೆ ರೈತರು ಪ್ರತಿಭಟನೆ ನಡೆಸಿದರು. ಮಲ್ಲಮ್ಮ ನುಡಿ ಚಿತ್ರ.

## ಜಿಲ್ಲಾ ಮಟ್ಟದ ಎಸ್ಸಿಎಸ್ಟಿ, ಟಿಎಸ್ಪಿ ಅನುದಾನ ಬಳಕೆ ಮಾಡದ ಅಧಿಕಾರಿಗಳ ಮೇಲೆ ಡಿಸಿ ಗರಂ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.06: ಪರಿಶಿಷ್ಟರ ಆರ್ಥಿಕ ಸ್ಥಿತಿ ಸುಧಾರಣೆಯಾಗಲು, ಅವರ ಪ್ರಮಾಣಕ್ಕನುಸಾರವಾಗಿ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ವಿಶೇಷ ಅನುದಾನ ಮೀಸಲಿಡಲಾಗುತ್ತಿದ್ದು, ಅಧಿಕಾರಿಗಳು ಅವರಿಗಾಗಿಯೇ ಪೂರ್ಣ ಪ್ರಮಾಣದಲ್ಲಿ ವ್ಯಯಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲೆಯಲ್ಲಿ ಎಸ್ಸಿ ಎಸ್ಪಿ ಮತ್ತು ಟಿಎಸ್ಪಿ ಯೋಜನೆ ಕಾರ್ಯಕ್ರಮಗಳ ಅನುಷ್ಠಾನ ಕುರಿತು ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಎಸ್ಸಿ ಎಸ್ಪಿ ಮತ್ತು ಟಿಎಸ್ಪಿ ಪ್ರಗತಿ ಪರಿಶೀಲನೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ವೈಯಕ್ತಿಕ ಅಭಿವೃದ್ಧಿಗಾಗಿ ಅನುಷ್ಠಾನ ಮಾಡುವ ಕಾರ್ಯಕ್ರಮಗಳಿಗೆ

2ನೇ ಪುಟನೋಡಿ

## ಸರ್ಕಾರದಿಂದ ರೈತರ ನಿರ್ಲಕ್ಷ್ಯ ಬಿ.ವೈ ವಿಜಯೇಂದ್ರ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ



ಬೆಂಗಳೂರು.ನ.6 - ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದ ಇಂದಿನವರೆಗೂ ರೈತಪರವಾದ ಒಂದೇ ಒಂದು ಯೋಜನೆಯನ್ನೂ ರೂಪಿಸಲಿಲ್ಲ. ನೆರೆ ಸಂಕಷ್ಟಿತರಿಗೆ ಪರಿಹಾರ ನೀಡಲಿಲ್ಲ, ಕನಿಷ್ಠಪಕ್ಷ ರೈತರ ಸಂಕಷ್ಟಗಳನ್ನೂ ಆಲಿಸಲಿಲ್ಲ, ರೈತರನ್ನು ವಿಪರೀತ ತಾತ್ಸಾರದಿಂದ ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಎಕ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರೈತರೆಂದರೆ ಕಾಂಗ್ರೆಸ್ ಸರ್ಕಾರಕ್ಕೆ ಅಸಡ್ಡೆಯಾಗಿದೆ. ಸರ್ಕಾರ ರೈತರನ್ನು ಅತ್ಯಂತ ನಿಕೃಷ್ಟವಾಗಿ ಕಾಣುತ್ತಿರುವ ಧೋರಣೆಯಿಂದಾಗಿ ರೈತ ಸಮುದಾಯ ಹತಾಶೆಯ ಹಂಚಿಕೆ ತಲುಪಿದೆ. ರೈತರ ಬದುಕನ್ನು ಹಸನು ಮಾಡುತ್ತೆ?ವೆಂದು ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ, ಅಧಿಕಾರಕ್ಕೆ ಬಂದ ಬಳಿಕ ತಮ ಕುರ್ಚಿ ಕಿತ್ತಾಟದಲ್ಲಿ ಮುಳುಗಿ ಆಡಳಿತ ವ್ಯವಸ್ಥೆಯನ್ನೆ ತುಕ್ಕು ಹಿಡಿಸಿ, ಭ್ರಷ್ಟಾಚಾರದ ಕೂಪವಾಗಿಸಿದ ಪರಿಣಾಮ ರೈತರು ಕಚೇರಿಗಳಿಗೆ ನಿತ್ಯವೂ ಅಲೆಯುವ ದುಸ್ಥಿತಿ ಬಂದೊದಗಿದೆ ಎಂದು ಕಿಡಿಕಾರಿದ್ದಾರೆ.

ಸರ್ಕಾರಿ ಕಚೇರಿಗಳಿಗೆ ನಿತ್ಯವೂ ಅಲೆದು ತಮ ಕೆಲಸಗಳಾಗದೇ ಮನನೊಂದು ಜಿಲ್ಲಾಧಿಕಾರಿ ಕಚೇರಿ ಮುಂದೆಯೇ ಆತಹತ್ಯೆಗೆ ಯತ್ನಿಸಿ ಸಾವಿಗೀಡಾಗಿರುವ ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯ ರೈತ ಮಂಜೇಗೌಡರ ಸಾವು ಆಘಾತ ತಂದಿದೆ. ಗದಗ ಜಿಲ್ಲೆಯ ನರಗುಂದ ತಾಲ್ಲೂಕಿನಲ್ಲಿ ಬೆಳೆ ಹಾನಿ ಪರಿಹಾರ ಸಿಗದಿದ್ದಕ್ಕೆ ರೈತ ಸಿದ್ದನಗೌಡ ಹಿರೇಗೌಡ್ರ ಆತಹತ್ಯೆಗೆ ಯತ್ನಿಸಿ ಸಾವು ಬದುಕಿನ ನಡುವೆ ಹೋರಾಡುತ್ತಿರುವುದು ದುರ್ದೈವದ ಸಂಗತಿ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ರೈತ ವಿದ್ಯಾನಿಧಿ, ರೈತಶಕ್ತಿ ಯೋಜನೆ, ಕಿಸಾನ್ ಸಮಾನ್ ನಿಧಿಯನ್ನು ನಿಲ್ಲಿಸಿದೆ. 25 ಸಾವಿರಕ್ಕೆ ಸಿಗುತ್ತಿದ್ದ ಟಿಸಿ ಸಂಪರ್ಕ ಇಂದು ಕನಿಷ್ಠ 3 ಲಕ್ಷ ಬೇಕಾಗಿದೆ. ಇದಕ್ಕಾಗಿ ರೈತರು ಸಾಲ ಮಾಡಬೇಕಾದ ಪರಿಸ್ಥಿತಿಯನ್ನು ಸರ್ಕಾರ ತಂದೊಡ್ಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

2ನೇ ಪುಟನೋಡಿ

# ಆಸ್ತಿ ದಾಯಿತ್ವ ವಿವರ ಸಲ್ಲಿಕೆ ವೈಫಲ್ಯ

## ಕಾನೂನು ಪ್ರಕಾರ ವಿವರ ಸಲ್ಲಿಕೆ ಕಡ್ಡಾಯ. ವಿಧಾನಸಭಾ ಸದಸ್ಯರಿಂದ ಕಣ್ಣುಮುಚ್ಚಾಲೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ನವೆಂಬರ್ 06 :ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 (ಅಧಿನಿಯಮ) ರ ಕಲಂ 22(1), ಕಲಂ 7ರ ಉಪ ಕಲಂ (1)ರಲ್ಲಿ ಉಲ್ಲೇಖಿಸಿರುವ ಸರ್ಕಾರಿ ನೌಕರನಲ್ಲದ ಪ್ರತಿಯೊಬ್ಬ ಸಾರ್ವಜನಿಕ ನೌಕರನು 30ನೇ ಜೂನ್‌ಗಿಂತ ಮುಂಚಿತವಾಗಿ ಪ್ರತಿ ವರ್ಷವೂ ತನ್ನ ಮತ್ತು ತನ್ನ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ವಿವರಣಾ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಲೋಕಾಯುಕ್ತರಿಗೆ ಸಲ್ಲಿಸಬೇಕೆಂದು ಅಧ್ಯಾದೇಶಿಸುತ್ತದೆ.

ಮೇಲ್ಕಂಡ ವಿವರಣಾ ಪಟ್ಟಿಯನ್ನು ಸಲ್ಲಿಸುವಲ್ಲಿ ವೈಫಲ್ಯತೆ ಉಂಟಾದಲ್ಲಿ, ಈ ಅಧಿನಿಯಮದಲ್ಲಿ ನಿಗದಿಪಡಿಸಿರುವಂತೆ ಆಸ್ತಿ ಮತ್ತು ದಾಯಿತ್ವಗಳ ವಿವರಣಾ ಪಟ್ಟಿಯ ಸಲ್ಲಿಸದಿರುವಿಕೆಯ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ಲೋಕಾಯುಕ್ತರು ವರದಿ ಮಾಡಬೇಕೆಂದು ಅಧಿನಿಯಮದ ಕಲಂ 22(2)ರಲ್ಲಿ ಅಧ್ಯಾದೇಶಿಸಲಾಗಿದೆ. ಅದರಂತೆ ಸಂಬಂಧಪಟ್ಟ ಸಾರ್ವಜನಿಕ ನೌಕರನಿಗೆ ಆ ವರದಿಯ ಪ್ರತಿಯನ್ನು ಕಳುಹಿಸುವುದೂ ಕೂಡಾ ಅವಶ್ಯಕವಾಗಿರುತ್ತದೆ. ಸಂಬಂಧಪಟ್ಟ ಸಾರ್ವಜನಿಕ ನೌಕರನಿಗೆ ಅಧಿನಿಯಮದ ಕಲಂ 22(1) ರಲ್ಲಿರುವಂತೆ ಮೇಲ್ಕಂಡ ವರದಿಯನ್ನು ಕಳುಹಿಸಿದ್ದಾಗಿಯೂ ಅಂತಹ ವರದಿಯನ್ನು ಕಳುಹಿಸಿದ ಎರಡು ತಿಂಗಳೊಳಗೆ ಸಂಬಂಧಪಟ್ಟ ಸಾರ್ವಜನಿಕ ನೌಕರರು ಅಧಿನಿಯಮದ ಕಲಂ 22(2) ಅನ್ನು ಪಾಲಿಸುವಲ್ಲಿ ವಿಫಲನಾದಲ್ಲಿ, ಲೋಕಾಯುಕ್ತರು ಅಂತಹ ತಪ್ಪಿತಸ್ಥ ಸಾರ್ವಜನಿಕ ನೌಕರರ ಹೆಸರುಗಳನ್ನು ರಾಜ್ಯದಲ್ಲಿ ಪ್ರಚಲಿತವಾಗಿರುವ ಮೂರು ವೃತ್ತಪತ್ರಿಕೆಗಳಲ್ಲಿ ಪ್ರಕಟಿಸಬಹುದು ಅಥವಾ ಪ್ರಕಟಿಸುವಂತೆ ಮಾಡಬಹುದು.

ಅಧಿನಿಯಮದ ಕಲಂ 22ರಲ್ಲಿ ಉಲ್ಲೇಖಿಸಿರುವ ಸಾರ್ವಜನಿಕ ನೌಕರ ಎಂಬ ವ್ಯಾಖ್ಯಾನದ ಅಡಿಯಲ್ಲಿ ವಿಧಾನಸಭಾ ಮತ್ತು ವಿಧಾನಪರಿಷತ್ ಎಲ್ಲಾ ಸದಸ್ಯರೂ ಸೇರಿರುತ್ತಾರೆ. ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಿರುವ ದಿನಾಂಕ 28/08/2025 ರ ವರದಿಯ ಪ್ರತಿ ಈ ಕೆಳಕಂಡ ಸಾರ್ವಜನಿಕ ನೌಕರರಿಗೆ ಜಾರಿಯಾಗಿದ್ದಾಗ್ಯೂ, ಸಕ್ಷಮ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸಿದ ಎರಡು ತಿಂಗಳುಗಳೊಳಗಾಗಿ ಸದರಿ ಸಾರ್ವಜನಿಕ ನೌಕರರು 2024-25ನೇ ಸಾಲಿನ ತಮ್ಮ ಆಸ್ತಿ ಮತ್ತು ದಾಯಿತ್ವಗಳ ವಿವರಣಾ ಪಟ್ಟಿಯನ್ನು ಸಲ್ಲಿಸಲು ವಿಫಲರಾಗಿರುವುದರಿಂದ ಅವರ ಹೆಸರುಗಳನ್ನು ಅಧಿನಿಯಮದ ಕಲಂ 22ರ ಉಪ ಕಲಂ (2) ರಂತೆ ಈ ಮೂಲಕ ಮೂರು ವೃತ್ತಪತ್ರಿಕೆಗಳಲ್ಲಿ ಪ್ರಕಟಿಸಲಾಗಿದೆ.

## ನ,ಕ್ರಾಂತಿ ಇಲ್ಲ ಕ್ರಾಂತಿ ಏನಿದ್ದರೂ 2028ಕ್ಕೆ



**ಪಕ್ಷವು ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ವರ್ಷಗಳ ಕಾಲ ಇರಬೇಕೆಂದು ಹೇಳಿದರೆ, ಅವರು ಐದು ವರ್ಷಗಳ ಕಾಲ ಇರುತ್ತಾರೆ.**

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ನವೆಂಬರ್ ಕ್ರಾಂತಿ ಭಾರಿ ಸದ್ದು ಮಾಡುತ್ತಿದೆ. ಆದರೆ ನಾಯಕತ್ವ ಬದಲಾವಣೆಯ ಈ ಕ್ರಾಂತಿಯನ್ನು ಸ್ಪಷ್ಟವಾಗಿ ತಳ್ಳಿಹಾಕಿದ ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಅವರು, 2028 ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಮರಳಿದಾಗ ಮಾತ್ರ ಕ್ರಾಂತಿ ಎಂದು ಗುರುವಾರ ಹೇಳಿದ್ದಾರೆ.

ತಾವು ಪಕ್ಷದ ಶಿಸ್ತಿನ ಸಿಪಾಯಿ ಎಂದು ಹೇಳಿಕೊಂಡಿರುವ ರಾಜ್ಯ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಡಿಕೆಶಿವಕುಮಾರ್, ತಾವು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಪಕ್ಷದ ಹೈಕಮಾಂಡ್ ನಿರ್ಧಾರಕ್ಕೆ ಬದ್ಧರಾಗಿದ್ದೇವೆ ಎಂದು ಹೇಳಿದರು. ಈ ತಿಂಗಳು ಕಾಂಗ್ರೆಸ್ ಸರ್ಕಾರ ಎರಡೂವರೆ ವರ್ಷ ಪೂರ್ಣಗೊಳಿಸಲಿದ್ದು, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಊಹಾಪೋಹಗಳಿವೆ. ಇದನ್ನೇ ನವೆಂಬರ್ ಕ್ರಾಂತಿ ಎಂದು ಕರೆಯಲಾಗುತ್ತಿದೆ.

ನಾನು (ಹೈಕಮಾಂಡ್) ಯಾರನ್ನೂ ಭೇಟಿಯಾಗುತ್ತಿಲ್ಲ. ಸಚಿವಸಂಪುಟ ಪುನರ್ರಚನೆ ಬಗ್ಗೆ ನನ್ನೊಂದಿಗೆ ಯಾವುದೇ ಚರ್ಚೆ ನಡೆದಿಲ್ಲ. ಅದು ಸಿಎಂ ಅವರ ವಿಶೇಷ ಹಕ್ಕು. ಅವರು ಅದನ್ನು ಮಾಡಲಿ ಎಂದರು

## ಕನ್ನಡದ ಖ್ಯಾತ ಖಳನಟ ಹರೀಶ್ ರಾಯ್ ಇನ್ನಿಲ್ಲ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ನ.6 - ಕೆಲವು ತಿಂಗಳಿನಿಂದ ಕ್ಯಾನ್ಸರ್‌ನಿಂದ ಬಳಲಿ ನಗರದ ಕಿದ್ವಾಯಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಸ್ಯಾಂಡಲ್‌ವುಡ್‌ನ ಖ್ಯಾತ ಖಳನಟ ಹರೀಶ್ ರಾಯ್ ಅವರು ಇಂದು ನಿಧನರಾಗಿದ್ದಾರೆ.

ಇತ್ತೀಚೆಗೆ ತಾವು ಕ್ಯಾನ್ಸರ್‌ನಿಂದ ಬಳಲುತ್ತಿದ್ದು ಚಿಕಿತ್ಸೆಗಾಗಿ ಆರ್ಥಿಕ ಸಹಾಯ ಮಾಡುವಂತೆ ವಿಡಿಯೋವೊಂದನ್ನು ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದ ಹರೀಶ್ ರಾಯ್ ಅವರ ಮನವಿಗೆ ಸ್ಪಂದಿಸಿದ ಕ್ವನ್ ಪ್ರಿನ್ ಧ್ರುವಸರ್ಜಾ, ಸುದೀಪ್, ಶಿವರಾಜ್‌ಕುಮಾರ್ ಸೇರಿದಂತೆ ಹಲವರು ಕಲಾವಿದರು ಆರ್ಥಿಕ ಸಹಾಯ ಮಾಡಿದ್ದರೂ ಕೂಡ ಚಿಕಿತ್ಸೆ ಫಲಿಸದೆ ಇಂದು ನಿಧನರಾಗಿದ್ದಾರೆ.

ಓಂ, ಜೋಡಿಹಕ್ಕಿ, ಕೆಜಿಎಫ್ 1, ಕೆಜಿಎಫ್ 2 ಸೇರಿದಂತೆ ಹಲವಾರು ಚಿತ್ರಗಳಲ್ಲಿ ಹರೀಶ್ ರಾಯ್ ಅವರು ತಮ ಅಭಿಮಾನದಿಂದ ಗಮನ ಸೆಳೆದಿದ್ದರು. ಅವರ ನಿಧನಕ್ಕೆ ಚಂದನವನದ ಹಲವು ಕಲಾವಿದರು, ತಂತ್ರಜ್ಞರು ಕಂಬನಿ ಮಿಡಿದಿದ್ದಾರೆ.

### ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಸಡಗರದಿಂದ ಜರುಗಿದ ರಥೋತ್ಸವ

## ವೀರಭದ್ರೇಶ್ವರ ದೇವಾಲಯ ಮಾದರಿ ಶ್ರೀಕ್ಷೇತ್ರವಾಗಿದೆ: ಪಾಟೀಲ್




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಬೇಡಿದವರಿಗೆ ಬೇಡಿದ ವರ ನೀಡುವ ಚಾಂಗಲೇರಾ ಶ್ರೀ ವೀರಭದ್ರೇಶ್ವರ ಮಹಿಮೆ ಅಪಾರವಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ತಾಲೂಕಿನ ಚಾಂಗಲೇರಾ ಗ್ರಾಮದ ಶ್ರೀ ವೀರಭದ್ರೇಶ್ವರ ರಥೋತ್ಸವ ಮತ್ತು ಶಿವನುಭವ ಗೋಷ್ಠಿ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಚಾಂಗಲೇರಾ ಶ್ರೀ ವೀರಭದ್ರೇಶ್ವರ ದೇವಾಲಯ ಜಿಲ್ಲೆಯಲ್ಲಿಯೇ ಮಾದರಿ ಶ್ರೀಕ್ಷೇತ್ರವಾಗಿದೆ. ಭಕ್ತಾಧಿಗಳ ಮತ್ತು ಜನಪ್ರತಿನಿಧಿಗಳ ಸಹಕಾರದಿಂದ ಅಭಿವೃದ್ಧಿಯತ್ತ ಮುನ್ನಡೆದಿದೆ. ಲಿಂಗೈಕ್ಯ ಬಸವರಾಜ ಪಾಟೀಲ್ ಅವರು ಈ ಕ್ಷೇತ್ರದ ಶಾಸಕರಾಗಿ ದೇವಾಲಯದ ಅಭಿವೃದ್ಧಿಗು, ಗ್ರಾಮದ ಅಭಿವೃದ್ಧಿಗು ಹೆಚ್ಚಿನ ಆದ್ಯತೆ ನೀಡಿದ್ದಾರೆ ಎಂದು ಸ್ಮರಿಸಿದರು. ಈ ಭಾಗದ ಶಾಸಕನಾಗಿ ಸೇವೆ



ಸಲ್ಲಿಸುವ ಅವಕಾಶ ದೊರಕಿದಾಗ ಈ ದೇವಾಲಯದ ಅಭಿವೃದ್ಧಿಗೆ ಸಹಾಯ ಮಾಡಿದ್ದೇನೆ. ದೇವಸ್ಥಾನದ ಆವರಣದಲ್ಲಿ ಮಿನಿ ಉದ್ಯಾನವನ ನಿರ್ಮಿಸಲಾಗಿದೆ ಎಂದು ತಿಳಿಸಿದರು. ಈ ದೇವಾಲಯದ ಅಭಿವೃದ್ಧಿಯ ಸಹಕಾರಕ್ಕೆ ಯಾವಾಗಲೂ ನಾನು ಶ್ರಮಿಸಲು ಸದಾ ಸಿದ್ಧನಿದ್ದೇನೆ ಎಂದರು. ವಿಧಾನಪರಿಷತ್ ಸದಸ್ಯ ಭೀಮರಾವ ಪಾಟೀಲ್ ಮಾತನಾಡಿ, ವೀರಭದ್ರೇಶ್ವರ ಮೇಲೆ ಭಕ್ತಿ ಇಟ್ಟರೆ ಕಷ್ಟಗಳು ದೂರವಾಗುತ್ತವೆ ಎಂದರು. ನನ್ನ ವಿಧಾನಪರಿಷತ್ ನಿಧಿಯಿಂದ ದೇವಾಲಯದ ಆವರಣದಲ್ಲಿ ಸೋಲಾರ್ ದೀಪ ಅತೀಶೀಘ್ರದಲ್ಲೇ ಅಳವಡಿವುದಾಗಿ ತಿಳಿಸಿದರು. ಚಾಂಗಲೇರಾ ಮತ್ತು ಚಿಟಗುಪ್ಪ ಹಿರೇಮಠ ಸಂಸ್ಥಾನ ಮಠದ ಗುರುಲಿಂಗ ಶಿವಾಚಾರ್ಯರು, ಮರುಳಾರಾಧ್ಯ ಶಿವಾಚಾರ್ಯರು, ತಡೋಳ ಸಂಸ್ಥಾನ ಮಠದ ರಾಜೇಶ್ವರ ಶಿವಾಚಾರ್ಯರು, ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಅನಂತರಾವ ಕುಲಕರ್ಣಿ, ಕಾರ್ಯದರ್ಶಿ ಸಂಜುಕುಮಾರ್ ದೇಸಾಯಿ, ಜೈಸಿಂಗ್ ರಾಠೋಡ, ಶಿವಪುತ್ರಪ್ಪ ಸಾದಾ, ವಿಜಯಕುಮಾರ್ ವಾಲಿ, ರವಿ ಗಾರಲ, ರಾಜಶೇಖರ ಮಳ್ಳಿ, ವೀರಯ್ಯಾ ಪೂಜಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರೈಲ್ವೆ ಕಾಮಗಾರಿಸುತ್ತಿರುವ ಕಂಪನಿ ವಿರುದ್ಧ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ: ಇಂದು ವಾಡಿ ಮತ್ತು ಗದಗ ರೈಲ್ವೆ ಕಾಮಗಾರಿಕೆ ಎಂ ಕೆ ಸಿ ಕಂಪನಿ ಅವ್ಯವಸ್ಥೆ ವಿರುದ್ಧ ಎಂಕೆಸಿ ಕಂಪನಿಯವರು ಅಕ್ರಮವಾಗಿ ಮರಳು ಕೆಂಪು ಮುರುಮು ಸಾಗಿಸುತ್ತಿದ್ದು ಮತ್ತು ಕೊಂಗಂಡಿ ಗ್ರಾಮದಲ್ಲಿ ಸಿಸಿ ರಸ್ತೆ ಹಾಳಾಗಿದ್ದು ಹೆಚ್ಚಿನ ವಾಹನಗಳ ಸಂಚಾರ ಮಾಡುವುದರಿಂದ ಶಾಲೆ ವಿದ್ಯಾರ್ಥಿಗಳಿಗೆ ಸಾರ್ವಜನಿಕರಿಗೆ ತುಂಬಾ ತೊಂದರೆ ಆಗುತ್ತಿದ್ದು

ಈ ವ್ಯವಸ್ಥೆಯನ್ನು ಸರಿಪಡಿಸುವಂತೆ ಎಂದು ತಹಶೀಲದಾರರು ತಾಲೂಕು ದಂಡಾಧಿಕಾರಿಗಳಿಗೆ ಕಂಪನಿ ವಿರುದ್ಧ ಕ್ರಮ ಕೈಗೊಳ್ಳದಂತೆ ಒತ್ತಾಯಿಸಿ ತಶೀಲ್ದಾರರು ಕಛೇರಿ ಮುಂದೆ



ಪ್ರತಿಭಟನೆ ಮಾಡಿ ಮನವಿ ಸಲ್ಲಿಸಿ ಈ ವ್ಯವಸ್ಥೆ ಸರಿಪಡಿಸದಿದ್ದರೆ ಎಂಕೆಸಿ ಕಂಪನಿ ಮುಂದೆ ಧರಣಿ ಸತ್ಯಾಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗದೆಂದು ತಹಸಿಲ್ದಾರರಿಗೆ ಮನವಿ ಸಲ್ಲಿಸಲಾಯಿತು

ಈ ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರಾದ ಮಹದೇವ ದಿಗ್ಗಿ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣರೆಡ್ಡಿ ಹತ್ತಿಗೂಡುರ್. ಭೀಮರಾಯ ಬಡಿಗೇರ. ಅಂಬರೀಶ ದಿಗಿ. ಖ ಜಿಲ್ಲಾಧ್ಯಕ್ಷರು. ತಾಲೂಕ ಅಧ್ಯಕ್ಷರಾದ ಶರಣಪ್ಪ ಚೆಲುವಾದಿ. ವಡಿಗೇರ ತಾಲೂಕು ಅಧ್ಯಕ್ಷರಾದ. ಸಿದ್ದಪ್ಪ ಹೊಸಮನಿ. ಗೌರಕ್ಷರಾದ. ಮಲ್ಲಿಕಾರ್ಜುನ್ ಗುಂಡಗುರ್ತಿ. ಮರಿಯಪ್ಪ ಹೊಸ್ಮನಿ. ಶರಣಗೌಡ ಕೊಂಗಂಡಿ. ಹನುಮಂತ ಕೊಂಗಂಡಿ. ವಿಶ್ವ ಚಲವಾದಿ. ಭೀಮಶಂಕರ್. ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ 9ನೇ ಘಟಿಕೋತ್ಸವ

## 27 ಪದವಿ, 18 ಪಿಹೆಚ್‌ಡಿ 1 ಎಂಫಿಲ್ ಪದವಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ನ 06 : ಜಿಲ್ಲೆಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ)ದ 9ನೇ ಘಟಿಕೋತ್ಸವ ಕಾರ್ಯಕ್ರಮವನ್ನು ನವೆಂಬರ 8ರಂದು ಬೆಳಗ್ಗೆ 10 ಗಂಟೆಗೆ ವಿವಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸುಪ್ರಿಂಕೋರ್ಟ್ ವಿಶ್ರಾಂತ ನ್ಯಾಯಮೂರ್ತಿ ಹಾಗೂ ಭಾರತದ ಕಾನೂನು ಆಯೋಗದ ಅಧ್ಯಕ್ಷ ದಿನೇಶ್ ಮಹೇಶ್ವರಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು

2ನೇ ಪುಟನೋಡಿ

ವರದಿಗಾರರು ಬೇಕಾಗಿದ್ದಾರೆ

ಕನ್ನಡ ಕಿರಣ

ಮಲ್ಲಮ್ಮ ನುಡಿ
ಪ್ರಾದೇಶಿಕ ಕನ್ನಡ ದಿನಪತ್ರಿಕೆ | ಸಂಪಾದಕರು: ರಮೇಶರೆಡ್ಡಿ | 9448 604450
Mallammanudi Regional News Paper | Editor: Ramesh Reddy | RNI NO:KARKAN/2011/48371

ಪ್ರಾದೇಶಿಕ ಕನ್ನಡ ದೈನಿಕ

ಬೀದರ, ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟವಾಗುತ್ತಿರುವ ನಮ್ಮ ಪತ್ರಿಕೆಗೆ ಮೇಲಿನ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲೆ ಹಾಗೂ ತಾಲೂಕುಗಳಿಗೆ ಅರೆಕಾಲಿಕ ವರದಿಗಾರರು ಬೇಕಾಗಿದ್ದಾರೆ. ಆಸಕ್ತರು ಕೂಡಲೆ ಈ ಕೆಳಗಿನ ಇಮೇಲ್ ಗೆ ತಮ್ಮ ಪೂರ್ಣ ವಿವರದೊಂದಿಗೆ ಅರ್ಜಿ ಕಳುಹಿಸಿ ಕೊಡಬಹುದು.

mallammanudi@gmail.com

ಅನುಭವ ಇರುವವರಿಗೆ ಮೊದಲ ಆದ್ಯತೆ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
ಮೋ : 9901216023

ನಾಲ್ಕನೆ ಟಿ :20 ಪಂದ್ಯ ಆಸ್ಟ್ರೇಲಿಯಾದ ವಿರುದ್ಧ ಭಾರತಕ್ಕೆ ಭರ್ಜರಿ ಜಯ

## ಒಂದನೇ ಪುಟದಿಂದ

### ಸರ್ಕಾರದಿಂದ ರೈತರ ನಿರ್ಲಕ್ಷ್ಯ

ಈ ಕೂಡಲೇ ಆತಹತ್ಯೆ ಗೀಡಾದ ರೈತ ಮಂಜೇಗೌಡ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ಕಲ್ಪಿಸಿ, ಗದಗ ಜಿಲ್ಲೆಯ ರೈತ ಸಿದ್ದನಗೌಡ ಹಿರೇಗೌಡ್ರರ ಬೆಳೆ ಪರಿಹಾರ ನೀಡಿ, ಅವರ ಚಿಕಿತ್ಸೆ ಗೆ ಸೂಕ್ತ ನೆರವು ಕಲ್ಪಿಸಲಿ. ಈ ರೀತಿಯ ಘಟನೆಗಳು ಮರುಕಳಿಸದಂತೆ ಅಧಿಕಾರಿ ವರ್ಗಕ್ಕೆ ಸರ್ಕಾರ ಬಿಸಿ ಮುಟ್ಟಿಸುವ ಕೆಲಸಕ್ಕೆ ಮುಂದಾಗಲಿ ಎಂದು ವಿಜಯೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

### ಬಳಕೆಮಾಡದ ಅಧಿಕಾರಿಗಳ ಮೇಲೆ ಡಿಸಿ ಗರಂ

ಅನುದಾನ ಹಂಚಿಕೆ ಮಾಡಲಾಗುತ್ತದೆ. ಅವರನ್ನು ಮುನ್ನಲೆಗೆ ತರಲು ಅಧಿಕಾರಿಗಳು ಪ್ರಾಮಾಣಿಕವಾಗಿ ಸೌಲಭ್ಯ ವಿತರಿಸಿ ಅನುದಾನ ವೆಚ್ಚ ಮಾಡಬೇಕು ಎಂದು ತಿಳಿಸಿದರು. ಜಿಲ್ಲೆಯಲ್ಲಿನ ಪರಿಶಿಷ್ಟ ರೈತರ ಮಾಹಿತಿ ನೀಡಬೇಕು. ಕೃಷಿ, ತೋಟಗಾರಿಕೆ ಇಲಾಖೆ ವತಿಯಿಂದ ಎಸ್ಸಿ ಎಸ್ಟಿ, ಟಿಎಸ್ಪಿ ಅನುದಾನದಡಿ ಅನುಷ್ಠಾನಗೊಳ್ಳುವ ವಿವಿಧ ಸೌಲಭ್ಯ ಮತ್ತು ಉಪಕರಣಗಳನ್ನು ಯುವ ರೈತರಿಗೆ ವಿತರಿಸಬೇಕು. ಅವರಿಗೆ ಪ್ರೋತ್ಸಾ ಹನೆರವು ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳಲ್ಲಿ ಎಸ್ಸಿ ಎಸ್ಟಿ, ಟಿಎಸ್ಪಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗುವುದು. ಇದರ ಮೇಲ್ವಿಚಾರಣೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿ, ಪ್ರಗತಿ ನಡೆಸಲಾಗುವುದು. ಕೊನೆಯಲ್ಲಿ ರಾಜ್ಯ ಮಟ್ಟದ ಎಸ್ಸಿ ಎಸ್ಪಿ ಟಿಎಸ್ಪಿ ಅನುದಾನ ಕುರಿತು ಪರಿಶೀಲನೆಯಾಗಲಿದೆ. ಹಾಗಾಗಿ ಪೂರಕ ಮಾಹಿತಿ ಇಟ್ಟುಕೊಳ್ಳಬೇಕು ಎಂದು ನೋಡಲ್ ಅಧಿಕಾರಿ ಆದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು. ಬಳಕೆಯಾಗದ ಅನುದಾನದ ಮರುಹಂಚಿಕೆ: ಎಸ್ಸಿ ಎಸ್ಟಿ ಮತ್ತು ಟಿಎಸ್ಪಿ ಯೋಜನೆಯಡಿ ಹಂಚಿಕೆ ಮಾಡಿರುವ ಮೊತ್ತವು ಖರ್ಚಾಗದೇ ಉಳಿದ ಸಂದರ್ಭದಲ್ಲಿ ಮಾರ್ಚ್ ಅಂತ್ಯದೊಳಗೆ ಅನುದಾನ ಖರ್ಚು ಮಾಡಬೇಕು. ಇಲ್ಲವಾದಲ್ಲಿ ಲೆಕ್ಕ ಪರಿಶೋಧನೆಯಾದ ಬಳಿಕ ಅದರ ಮುಂದಿನ ಹಣಕಾಸು ವರ್ಷಕ್ಕೆ ರಾಜ್ಯ ಸರ್ಕಾರದಿಂದ ಸೇರ್ಪಡೆಯಾಗುತ್ತದೆ. ಆದರೆ ಕೇಂದ್ರದ ಹಣ ಮರಳುವುದಿಲ್ಲ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು. ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಅನುಷ್ಠಾನವಾಗುವ ಕಾರ್ಯಕ್ರಮಗಳನ್ನು ಉದ್ದೇಶಪೂರ್ವಕವಾಗಿ ನಿರ್ಲಕ್ಷಿಸಿದಲ್ಲಿ ಶಿಸ್ತು ಕ್ರಮಕ್ರಮಕ್ಕೆ ಒಳಪಡುತ್ತಾರೆ ಎಂದು ಅವರು ತಿಳಿಸಿದರು. ಮುಖ್ಯವಾಗಿ ಎಸ್.ಸಿ.ಎಸ್.ಟಿ/ಟಿ.ಎಸ್.ಪಿ ಯೋಜನೆಯಡಿ ಒದಗಿಸಿದ ಅನುದಾನವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ವಿನಿಯೋಗಿಸಬೇಕು. ಅಧಿಕಾರಿಗಳು ತಮ್ಮ ಇಲಾಖೆಗಳಿಗೆ ಒದಗಿಸಿದ ಎಸ್.ಸಿ.ಎಸ್.ಟಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟರ ಏಳಿಗೆಗಾಗಿ ತಲುಪಿಸುವಲ್ಲಿ ತೊಂದರೆಗಳಿದ್ದಲ್ಲಿ ತಿಳಿಸಬೇಕು. ಈ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು. ★ ಅಧಿಕಾರಿಗಳ ವಿರುದ್ಧ ಗರಂ: ★ ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದ ಜಿಲ್ಲಾಧಿಕಾರಿಯವರು, ಅನುದಾನ ಬಳಕೆ ಮಾಡದ ಅಧಿಕಾರಿಗಳ ವಿರುದ್ಧ ಗರಂ ಆದರು. ಜಿಲ್ಲೆಯಲ್ಲಿ ಜೆಜೆಎಂ ಕಾಮಗಾರಿ ಪ್ರಗತಿ ಪರಿಶೀಲಿಸಿದ ಅವರು, ರಾಜ್ಯ ಸರ್ಕಾರದಿಂದ ಎರಡು ಬಾರಿ ಅನುದಾನ ಬಿಡುಗಡೆಯಾಗಿದ್ದರೂ, ಯಾವುದೇ ರೀತಿಯ ಹಣ ಬಳಕೆಯಾಗಿಲ್ಲ ಮತ್ತು ಕಾಮಗಾರಿ ಪ್ರಗತಿಯಾಗಿಲ್ಲ. ಯೋಜನೆಯ ಮೇಲೆ ಉದಾಸೀನತೆ ತೋರುತ್ತಿದ್ದೀರಿ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳ ಮೇಲೆ ಅಸಮಾಧಾನ ವ್ಯಕ್ತಪಡಿಸಿದರು. ಇದೇ ವೇಳೆ ವಿವಿಧ ಇಲಾಖಾವಾರು ನೀಡುವ ಸೌಲಭ್ಯಗಳು ಮತ್ತು ಉಪಕರಣಗಳ ಬಗ್ಗೆ ವಿಚಾರಿಸಿ ಮಾಹಿತಿ ಪಡೆದುಕೊಂಡರು. ಸಭೆಯಲ್ಲಿ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಪದವಿ ಪ್ರದಾನ

ಘಟಿಕೋತ್ಸ ವ ಭಾಷಣ ಮಾಡಲಿದ್ದಾರೆ ಎಂದು ಸಿಯುಕೆಯ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ತಿಳಿಸಿದರು.

ಇಂದು ಸಿಯುಕೆಯಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು ಈ ಬಾರಿ ವಿಶ್ವವಿದ್ಯಾಲಯದ 27 ಪದವಿ ಕೋರ್ಸ್‌ಗಳಲ್ಲಿ ಪ್ರಥಮ ರ‍್ಯಾಂಕ್ ಪಡೆದ ತಲಾ ಒಬ್ಬ ವಿದ್ಯಾರ್ಥಿಗೆ ಚಿನ್ನದ ಪದಕ ಪಡೆಯಲಿದ್ದಾರೆ. ಇದರೊಂದಿಗೆ ಎಲೆಕ್ಟ್ರಾನಿಕ್ಸ ಮತ್ತು ಕಮುನಿಕೇಶನ್ ಇಂಜಿನಿಯರಿಂಗನ ವಿದ್ಯಾರ್ಥಿ ಶಿವಾ ಶಾಹಿತಿ ಸೋಮಿಶೆಟ್ಟಿ, ಪ್ರೊ.ಎ.ಎಂ.ಪಠಾಣ ಚಿನ್ನದ ಪದಕ ಪಡೆಯಲಿದ್ದಾನೆ. 18 ವಿದ್ಯಾರ್ಥಿಗಳು ಪಿಹೆಚ್‌ಡಿ ಪದವಿ ಹಾಗೂ ಒಬ್ಬ ವಿದ್ಯಾರ್ಥಿ ಎಂಫಿಲ್ ಪದವಿ ಪ್ರದಾನ ಮಾಡಲಾಗುವುದು ಎಂದು ಹೇಳಿದರು. ಒಟ್ಟು 756 ವಿದ್ಯಾರ್ಥಿಗಳು ಪದವಿ ಪಡೆಯಲು ಅರ್ಹರಿದ್ದು ಅದರಲ್ಲಿ 628 ವಿದ್ಯಾರ್ಥಿಗಳು ಪದವಿ ಪಡೆಯಲು ಅರ್ಜಿ ಸಲ್ಲಿಸಿದ್ದಾರೆ. ಈ ಪೈಕಿ 487 ವಿದ್ಯಾರ್ಥಿಗಳು ಭೌತಿಕವಾಗಿ ಹಾಗೂ 141 ವಿದ್ಯಾರ್ಥಿಗಳು ಅನುಪಸ್ಥಿತಿಯಲ್ಲಿ ತಮ್ಮ ಪದವಿ ಪ್ರಮಾಣ ಪತ್ರಗಳನ್ನು ಸ್ವೀಕರಿಸಲಿದ್ದಾರೆ ಎಂದು ಅವರು ಹೇಳಿದರು. ಇದೆ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಪ್ರಗತಿಯ ಕುರಿತು ಮಾತನಾಡಿದ ಅವರು ಶಿಕ್ಷಕರು ವಿಶ್ವವಿದ್ಯಾಲಯಗಳ ಜೀವಾಳ. ಇಲ್ಲಿವರೆಗೆ 176 ಖಾಯಂ ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಸರಕಾರ 29 ಶಿಕ್ಷಕರ ನೇಮಕಾತಿಗೆ ಅನುಮತಿಯೊಂದಿಗೆ ಗ್ರಂಥಾಲಯ ವಿಜ್ಞಾನ, ಜೀವಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ, ಸಂಖ್ಯಾ ಶಾಸ್ತ್ರ, ಕಂಪೂಟರ ವಿಜ್ಞಾನ, ಜೆನೆಟಿಕ್ಸ ಮತ್ತು ಜಿನೋಮ ಮತ್ತು ಬಿಎ ಎಲ್‌ಎಲ್‌ಬಿ ಸೇರಿ 7 ಹೊಸ ವಿಭಾಗಗಳಿಗೆ ಅನುಮತಿ ನೀಡಿದ್ದು ಈಗಾಗಲೇ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು ಈ ಕೋರ್ಸಗಳನ್ನು 2026-27 ಸಾಲಿನಿಂದ ಪ್ರಾರಂಭಿಸಲಾಗುವುದು. ಇದಲ್ಲದೆ ಮತ್ತೆ ನಾವು ಇನ್ನೂ 7 ಹೊಸ ವಿಭಾಗಗಳಿಗೆ ಬೇಡಿಕೆ ಸಲ್ಲಿಸಲಿದ್ದೇವೆ ಎಂದು ತಿಳಿಸಿದರು.

ಸಂಶೋಧನೆ ಮತ್ತು ನಾವಿನ್ಯತೆಯ ಕುರಿತು ಮಾತನಾಡಿದ ಅವರು ವಿಶ್ವವಿದ್ಯಾಲಯವು ಎ.ಎನ್ ಆರ್. ಎಫ್ ಪೇರ್ಡ ಪ್ರೋಜೆಕ್ಟನಲ್ಲಿ ರೂ.12.1 ಕೋಟಿ ಅನುದಾನ ಪಡೆದಿದೆ.

ಅದೇ ರೀತಿ ಸುಸ್ಥಿರ ಕ್ಯಾಂಪಸ್ ಅಭಿವೃದ್ದಿಗಾಗಿ ರೂ 1.2 ಕೋಟಿ, ವಿಶ್ವೇಶ್ವರಯ್ಯ ಸಂಶೋಧನಾ ಯೋಜನೆಯಲ್ಲಿ ರೂ. 3 ಕೋಟಿ, ಸಿರಿಧಾನ್ಯ ಸಂಶೋಧನೆಗಾಗಿ ರೂ. 30 ಲಕ್ಷ ಹಾಗೂ ಐಸಿಎಆರ್ ನಿಂದ 7 ಯೋಜನೆಗಳಿಗೆ 1.05 ಕೋಟಿ ಅನುದಾನ ಪಡೆದಿದೆ ಎಂದರು ಮೂಲಸೌಕರ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಯಲ್ಲಿ ಶೈಕ್ಷಣಿಕ ಸಮುಚ್ಚಯ, ಶಿಕ್ಷಕರ ವಸತಿ ಗೃಹ ಹಾಗೂ 1000 ವಿದ್ಯಾರ್ಥಿಗಳ ವಸತಿ ನಿಲಯಕ್ಕಾಗಿ ಸರಕಾರ 201 ಕೋಟಿ ರೂ ಗಳನ್ನು ನೀಡಿದೆ. ಈಗಾಗಲೇ ಟೆಂಡರ ಕರೆಯಲಾಗಿದ್ದು ಮುಂದಿನ 15 ತಿಂಗಳಲ್ಲಿ ಇವು ಪೂರ್ಣಗೊಳ್ಳಲಿವೆ ಎಂದರು. ಶಿಕ್ಷಣದ ಗುಣಮಟ್ಟ ಹೆಚ್ಚಳಕ್ಕೆ ಭಾರತೀಯ ಭೋಗೋಳ ಸಂಸ್ಥೆ, ಅಪ್ರೆಂಟಿಶಿ

ಫ್ ಬೋರ್ಡ್, ಕೀಸೈಟ್ ಟೆಕ್ನಾಲೋಜಿ, ಲಾಟ್ವಿಯ ವಿಶ್ವವಿದ್ಯಾಲಯ ಹೀಗೆ ಅನೇಕ ಸಂಸ್ಥೆಗಳೊಂದಿಗೆ ಶೈಕ್ಷಣಿಕ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದರು.

ಬೆಂಗಳೂರಿನಲ್ಲಿ ಪ್ರಾರಂಭಿಸಲು ಉದ್ದೇಶಿಸಿದ್ದ ಸೆಂಟರ್ ಆಫ್ ಎಕ್ಸ ಲೆನ್ಸ ನ್ನು ಇಲ್ಲಿಯೇ ಈ ಭಾಗದಲ್ಲಿ ಸಂಶೋಧನೆಗೆ ಒತ್ತು ಕೊಡಲು (ಸಿಯುಕೆ ಕ್ಯಾಂಪಸನಲ್ಲಿ) ಪ್ರಾರಂಭಿಸಲಾಗುತ್ತಿದೆ, ಇದರೊಂದಿಗೆ ಪಿಸಿಬಿ ಲ್ಯಾಬ್ ಪ್ರಾರಂಭಿಸಲಾಗಿದೆ, ಇನ್ಸ್ಟ್ರುಮೆಂಟೇಶನ್ ಲಾಬ್‌ಗಳನ್ನು ಪ್ರಾರಂಭಿಸಲಾಗಿದೆ ಎಂದರು. ಈ ಎಲ್ಲಾ ಕಾರ್ಯಗಳಿಂದ ನಮ್ಮ ವಿಶ್ವವಿದ್ಯಾಲಯ ರಾಷ್ಟ್ರಮಟ್ಟದ ಎನ್ ಐ ಆರ್ ಎಫ್ ರ‍್ಯಾಂಕ್ ನಲ್ಲಿ 150-200 ರ‍್ಯಾಂಕ್ ಮದ್ಯದಲ್ಲಿ ಸ್ಥಾನ ಪಡೆದಿದೆ. ಇದು ನಮ್ಮ ವಿಶ್ವವಿದ್ಯಾಲಯದ ಹೆಚ್ಚುತ್ತಿರುವ ಶೈಕ್ಷಣಿಕ ಗುಣಮಟ್ಟದ ಸಂಕೇತವಾಗಿದೆ. ಆದರೆ ನಮ್ಮ ವಿವಿಯಲ್ಲಿ ಕ

'ರ್ನಾಟಕದ ವಿದ್ಯಾರ್ಥಿಗಳ ಸಂಖ್ಯೆ ಬಹಳ ಕಡಿಮೆ ಇದೆ ಎಂದು ಕಳವಳ ವ್ಯಕ್ತಪಡಿಸಿದ ಅವರು ಅದಕ್ಕಾಗಿ ಕಳೆದ ವರ್ಷ ಕರ್ನಾಟಕದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಲು ರಾಜ್ಯದ್ಯಂತ ವಿವಿಧ ಮುಖ್ಯ ನಗರಗಳಲ್ಲಿ 10 ಪತ್ರಿಕಾ ಘೋಷ್ಠಿಗಳನ್ನು ಮಾಡಿದ್ದೇವೆ. ಆದರೂ ನಿರೀಕ್ಷಿತ ಸಂಖ್ಯೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿಲ್ಲ. ಮಾಧ್ಯಮಗಳು ಹೆಚ್ಚು ಪ್ರಚಾರ ಕೊಟ್ಟು ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ಬರುವಂತೆ ಮಾಡಬೇಕು ಎಂದು ಮನವಿ ಮಾಡಿದರು.

## ಇಂಡಿಯಾ ಮೆರಿಟೈಮ್ ವೀಕ್ 2025 ರಲ್ಲಿ ಕರ್ನಾಟಕ ಜಲಸಾರಿಗೆ ಮಂಡಳಿ ಸಹಿ ಮಾಡಿದ ಒಪ್ಪಂದ ಪತ್ರಗಳು (MoUs)

ಬೀದರ, ನವೆಂಬರ್.06 (ಕರ್ನಾಟಕ ವಾರ್ತೆ): ಇಂಡಿಯಾ ಮೆರಿಟೈಮ್ ವೀಕ್ (India Maritime Week - IMW) 2025ರ ಸಂದರ್ಭದಲ್ಲಿ, ಮುಂಬೈಯಲ್ಲಿ ನಡೆದ ರಾಜ್ಯ ಅಧಿವೇಶನವನ್ನು ಕರ್ನಾಟಕ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಈ ಅಧಿವೇಶನವನ್ನು ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್. ವೈದ್ಯ ಅವರು ಅಧ್ಯಕ್ಷತೆ ವಹಿಸಿದ್ದರು. ಇಂಡಿಯಾ ಮೆರಿಟೈಮ್ ವೀಕ್ ದೇಶದ ಅಗ್ರಮಟ್ಟದ ಜಾಗತಿಕ ವೇದಿಕೆ ಆಗಿದ್ದು, ಭಾರತವನ್ನು ಜಾಗತಿಕ ಸಾಗರ ಜಲಸಾರಿಗೆಯ ಕೇಂದ್ರವಾಗಿ ಮತ್ತು ಬ್ಲೂ ಎಕಾನಮಿ ಕ್ಷೇತ್ರದಲ್ಲಿ ಮುಂಚೂಣಿಯ ರಾಷ್ಟವನ್ನಾಗಿ ರೂಪಿಸುವ ದಿಶೆಯಲ್ಲಿನ ಮುನ್ನೋಟವನ್ನು ಪ್ರದರ್ಶಿಸಿದೆ.

ಕರ್ನಾಟಕದ ರಾಜ್ಯ ಅಧಿವೇಶನವು 'Exploring PPP Synergies for a Sustainable Blue Economy,' ಎಂಬ ವಿಷಯದ ಮೇಲೆ ಕೇಂದ್ರೀಕೃತವಾಗಿತ್ತು. ಈ ಅಧಿವೇಶನವು ಸುಮಾರು ರೂ.4,500 ಕೋಟಿ ಮೌಲ್ಯದ ಪ್ರಮುಖ ಒಪ್ಪಂದ ಪತ್ರಗಳ (ಒಂಗ) ವಿನಿಮಯದೊಂದಿಗೆ ಯಶಸ್ವಿಯಾಗಿ ಮುಕ್ತಾಯವಾಯಿತು.

ಒಪ್ಪಂದಗಳ ವಿನಿಮಯದ ಪ್ರಮುಖ ಅಂಶಗಳು- ಸಂಪರ್ಕತೆ ವೃದ್ಧಿ, ಮೂಲಸೌಕರ್ಯ ಅಭಿವೃದ್ಧಿ, ಮತ್ತು ನವೀಕೃತ ಮಾನವ ಸಂಪನ್ಮೂಲ ನಿರ್ಮಾಣಕ್ಕೆ ಕೇಂದ್ರೀಕೃತವಾಗಿದ್ದವು.

ಜೆಎಸ್‌ಡಬ್ಲ್ಯೂ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಕಂಪನಿಯೊಂದಿಗೆ, ಕೆನಿಯಲ್ಲಿ ಪಿಪಿಪಿ ಆಧಾರದ ಮೇಲೆ ನಿರ್ಮಿಸಲ್ಪಡುವ ಸರ್ವಋತು ಡೀಪ್ ವಾಟರ್ ಗ್ರೀನ್‌ಫೀಲ್ಡ್ ಬಂದರು ಅಭಿವೃದ್ಧಿಗೆ ಸಂಬಂಧಿಸಿದ ಕನ್ಸೆಶನ್ ಒಪ್ಪಂದ ರೂ. 4,118 ಕೋಟಿ ಮೌಲ್ಯ.

ಕೊಂಕಣ ರೈಲ್ವೆ ಕಾರ್ಪೊರೇಶನ್ ಲಿಮಿಟೆಡ್ (KRCL) ಸಂಸ್ಥೆಯೊಂದಿಗೆ ಅಮದಳ್ಳಿ ರೈಲು ಸೈಡಿಂಗ್ ಅಭಿವೃದ್ಧಿಗೆ ಸಂಬಂಧಿಸಿದ ಒಪ್ಪಂದ ರೂ. 45.88 ಕೋಟಿ ಮೌಲ್ಯ.

ಭಾರತ ಆಂತರಿಕ ಜಲಮಾರ್ಗ ಪ್ರಾಧಿಕಾರ (IWAI) ಯೊಂದಿಗೆ ರಾಜ್ಯದ ರಾಷ್ಟ್ರೀಯ ಜಲಮಾರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದ ಒಪ್ಪಂದ ಅಂದಾಜು ರೂ. 300 ಕೋಟಿ ಮೌಲ್ಯ.

ನ್ಯಾಷನಲ್ ಇನ್‌ಲ್ಯಾಂಡ್ ನ್ಯಾವಿಗೇಶನ್ ಇನ್ಸ್ಟಿಟ್ಯೂಟ್ (NINI), ಪಾಟ್ನಾ ಯೊಂದಿಗೆ ಮಂಗಳೂರು ನಗರದಲ್ಲಿ ಇನ್‌ಲ್ಯಾಂಡ್ ವಾಟರ್ ಟ್ರಾನ್ಸ್‌ಪೋರ್ಟ್ ಮತ್ತು ನ್ಯಾವಿಗೇಶನ್‌ನಲ್ಲಿ ಶ್ರೇಷ್ಠತೆ ಕೇಂದ್ರ (COE-IWTN) ಸ್ಥಾಪನೆಗೆ ಒಪ್ಪಂದ ಅಂದಾಜು ರೂ. 50 ಕೋಟಿ ಮೌಲ್ಯ.

ಕರ್ನಾಟಕ ಸರ್ಕಾರದ ಮೀನುಗಾರಿಕೆ ಇಲಾಖೆಯೊಂದಿಗೆ ಬಳ್ಳಾರಿ ಜಿಲ್ಲೆಯಲ್ಲಿ ತಂಪು ಸಂಗ್ರಹಣೆ, ಸಂಸ್ಕರಣಾ ಘಟಕಗಳು ಮತ್ತು ಪರೀಕ್ಷಾ ಪ್ರಯೋಗಾಲಯ ಸ್ಥಾಪನೆ ಸೇರಿದಂತೆ ವಿವಿಧ ಯೋಜನೆಗಳಿಗಾಗಿ ಒಪ್ಪಂದ- ಅಂದಾಜು ರೂ.12 ಕೋಟಿ ಮೌಲ್ಯ.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಸಮುದ್ರ ಮತ್ತು ಜಲಮಾರ್ಗ ಮಾಸ್ಟರ್ ಪ್ಲಾನ್ (KSMWMP) ಕುರಿತಾಗಿ ಚರ್ಚಿಸಲಾಯಿತು. ಈ ಯೋಜನೆ ಒಟ್ಟು ರೂ.23,000 ಕೋಟಿ ಮೌಲ್ಯದ 126 ಯೋಜನೆಗಳನ್ನು ಒಳಗೊಂಡಿದ್ದು, ರಾಜ್ಯದ ಸಮುದ್ರ ಮತ್ತು ಜಲಮಾರ್ಗ ಅಭಿವೃದ್ಧಿಗೆ ಸಮಗ್ರ ದೃಷ್ಟಿಕೋನವನ್ನು ನೀಡುತ್ತದೆ. ಈ ಪೈಕಿ ರೂ. 7,500 ಕೋಟಿಗೂ ಹೆಚ್ಚು ಮೌಲ್ಯದ 10 ಪ್ರಮುಖ ಸಾರ್ವಜನಿಕ-ಖಾಸಗಿ ಸಹಭಾಗಿತ್ವ (PPP) ಯೋಜನೆಗಳು ತಕ್ಷಣದ ಪ್ರಾರಂಭಕ್ಕೆ ಸಿದ್ಧವಾಗಿವೆ. ಇವುಗಳಲ್ಲಿ ಮಂಗಳೂರು ವಾಟರ್ ಮೆಟ್ರೋ ಮತ್ತು ರಾಜ್ಯದ ಮೊದಲ ಸಮುದ್ರ ಸಂಗ್ರಹಾಲಯ (Maritime Museum) ಮಂಗಳೂರು ನಗರದಲ್ಲಿ ಸ್ಥಾಪನೆಯಾಗುತ್ತಿರುವುದು ಹೆಮ್ಮೆಯ ಸಂಗತಿ.

## ಕರ್ತವ್ಯ ಲೋಪದ ಹಿನ್ನೆಲೆ ಹುಲಸೂರ ಗ್ರಾಮ ಪಂಚಾಯತ್ ಪಿಡಿಒ ಅಮಾನತು



ಬೀದರ್. ನ. 06 :- ಸರ್ಕಾರದ ಮಹತ್ವಕಾಂಕ್ಷಿ ಯೋಜನೆ 15ನೇ ಹಣಕಾಸು ಯೋಜನೆ ಮಾರ್ಗಸೂಚಿ ಹಾಗೂ ಕೆಟಿಪಿಪಿ ನಿಯಮ ಉಲ್ಲಂಘಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಹುಲಸೂರ ಗ್ರಾಮ ಪಂಚಾಯತ್ ಪಿಡಿಒ ರಮೇಶ ಮಿಲಿಂದಕರ ಅವರನ್ನು ಸೇವೆಯಿಂದ ಅಮಾನತುಗೊಳಿಸಿ, ಜಿ.ಪಂ ಸಿಇಒ ಡಾ.ಗಿರೀಶ ಬದೋಲೆ ಆದೇಶಿಸಿದ್ದಾರೆ.

ಕಳೆದ ಸಾಲಿನಲ್ಲಿ ನಡೆದ 38 ಕಾಮಗಾರಿಗಳ ಪೈಕಿ, 34 ಕಾಮಗಾರಿಗಳನ್ನು ಗ್ರಾ.ಪಂ ಸದಸ್ಯರ ಗಮನಕ್ಕೆ ತಾರದೆ, ಸಾಮಾನ್ಯ ಸಭೆ ಹಾಗೂ ತುರ್ತು ಸಭೆಯಲ್ಲಿ ಚರ್ಚಿಸಿಲ್ಲ. ಕಾಮಗಾರಿಗಳಗೆ ತಾಂತ್ರಿಕ ಹಾಗೂ ಆಡಳಿತಾತ್ಮಕ ಅನುಮೋದನೆ ಪಡೆದಿಲ್ಲ. ಆದರೂ ಮನಬಂದಂತೆ ಕ್ರಿಯಾ ಯೋಜನೆ ಸಿದ್ಧಪಡಿಸಿ, ಸದಸ್ಯರಿಗೆ ಮಾಹಿತಿ ನೀಡದೆ ಇ-ಗ್ರಾಮ ಸ್ವ-ರಾಜ್ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಲಾಗಿದೆ. ಜಿ.ಪಂ ಕಚೇರಿಯಲ್ಲೂ ಪರಿಶೀಲನೆಗೆ ಒಳಪಡಿಸಿಲ್ಲ. ಅಲ್ಲದೆ, ನಗದು ಹಾಗೂ ಸಭೆ ನಡಾವಳಿ ಪುಸ್ತಕ, ದಾಸ್ತಾನು ನಿರ್ವಹಿಸಿಲ್ಲ. ಅಲ್ಲದೆ ಕೆಟಿಟಿಪಿ ಹಾಗೂ ಪಂಚಾಯತ್ ಅಧಿನಿಯಮ ಉಲ್ಲಂಘಿಸಿರುವುದು, 15ನೇ ಹಣಕಾಸು ಯೋಜನೆಯ ಅನುದಾನ ದುರ್ಬಳಕೆ ಮಾಡಿಕೊಂಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ ಎಂದು ಜಂಟಿ ಪರಿಶೀಲನೆ ವರದಿಯಲ್ಲಿ ತಿಳಿಸಿದ್ದಾರೆ.

ಕರ್ತವ್ಯ ಲೋಪವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಅವರ ವಿರುದ್ಧ ಕ್ರಮ ಜರುಗಿಸಲು ತಾ.ಪಂ. ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ ಸಿಇಒಗೆ ವರದಿ ಸಲ್ಲಿಸಿದ್ದರು. ಪಿಡಿಒ ವಿರುದ್ಧ ಇಲಾಖೆ ವಿಚಾರಣೆ ಕಾಯ್ದಿರಿಸಿ, ಕರ್ನಾಟಕ ನಾಗರಿಕ ಸೇವಾ ನಿಯಮದಡಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಆದೇಶಿಸಲಾಗಿದೆ.

## ಡಾ. ಶೇಖ್ ಸೈಫುದ್ದೀನ್ ಅವರಿಗೆ ಅಂತರರಾಷ್ಟ್ರೀಯ ವೈದ್ಯಕೀಯ ಸಂಘದ ಸದಸ್ಯತ್ವದೊರೆತಿದೆ



ಬೀದರ್. 5/ನವೆಂಬರ್. ನಿವೃತ್ತ ಸೂಪರಿಂಟೆಂಡೆಂಟ್ ಎಂಜಿನಿಯರ್ ಕೆಆಡಿಎಲ್ ಶೇಖ್ ಸಲೀಮುದ್ದೀನ್ ಅವರ ಪುತ್ರ ಬೀದರ್ ಮೂಲದ ಮಕ್ಕಳ ತಜ್ಞಡಾ. ಶೇಖ್ ಸೈಫುದ್ದೀನ್, ಮಕ್ಕಳ ಆರೋಗ್ಯ ಮತ್ತು ಅಂತರರಾಷ್ಟ್ರೀಯ ವೈದ್ಯಕೀಯ ಅಭ್ಯಾಸಕ್ಷೇತ್ರದಲ್ಲಿ ಎರಡು ಪ್ರತಿಷ್ಠಿತ ಅರ್ಹತೆಗಳಾದ ರಾಯಲ್ ಕಾಲೇಜ್ ಆಫ್ ಪೀಡಿಯಾಟ್ರಿಕ್ಸ್ ಅಂಡ್ ಚೈಲ್ಡ್ ಹೆಲ್ತ್ (ಎಂಆರ್ಸಿಪಿಸಿಎಚ್, ಯುಕೆ) ಮತ್ತು ದುಬೈ ಹೆಲ್ತ್ ಅಥಾರಿಟಿ (ಡಿಎ) ಪೀಡಿಯಾಟ್ರಿಕ್ಸ್ ಪರೀಕ್ಷೆಗಳ ಸದಸ್ಯತ್ವ ಪಡೆಯುವ ಮೂಲಕ ಬೀದರ್ ಜಿಲ್ಲೆ ಮತ್ತು ವೈದ್ಯಕೀಯ ಸಮುದಾಯಕ್ಕೆ ಕೀರ್ತಿ ತಂದಿದ್ದಾರೆ. ಡಾ. ಸೈಫುದ್ದೀನ್ ದಾವಣಗೆರೆಯ ಜೆಜೆಎಂ ವೈದ್ಯಕೀಯ ಕಾಲೇಜಿನಿಂದ ಎಂಬಿಬಿಎಸ್ ಪೂರ್ಣಗೊಳಿಸಿದರು, ನಂತರ ವಿಜಯಪುರದ ಅಲ್-ಅಮೀನ್ ವೈದ್ಯಕೀಯ ಕಾಲೇಜಿನಿಂದ ಪೀಡಿಯಾಟ್ರಿಕ್ಸ್‌ನಲ್ಲಿ ಎಂಡಿ ಪದವಿ ಪಡೆದರು. ನಂತರ, ಬೆಂಗಳೂರಿನ ಸೇಂಟ್ ಜಾನ್ಸ್ ವೈದ್ಯಕೀಯ ಕಾಲೇಜಿನಲ್ಲಿ ಹಿರಿಯ ರೆಸಿಡೆನ್ಸಿ ಮಾಡಿದರು. ಅವರು ಅಮೇರಿಕನ್ ಹಾರ್ಟ್ ಅಸೋಸಿಯೇಷನ್ನಿಂದ ಪಿಎಎಸ್ (ಪೀಡಿಯಾಟ್ರಿಕ್ ಅಡ್ವಾನ್ಸ್ಡ್ ಲೈಫ್ ಸಪೋರ್ಟ್) ನಲ್ಲಿಯೂ ಪ್ರಮಾಣೀಕರಿಸಲ್ಪಟ್ಟಿದ್ದಾರೆ. ಡಾ. ಶೇಖ್ ಸೈಫುದ್ದೀನ್ ಮಕ್ಕಳ ಹೃದ್ರೋಗಶಾಸ್ತ್ರದಲ್ಲಿ ವ್ಯಾಪಕ ಅನುಭವವನ್ನು ಹೊಂದಿದ್ದಾರೆ. ಎಂಆರ್ಸಿಪಿಸಿಎಚ್ (ಯುಕೆ) ಅರ್ಹತೆಯು ಮಕ್ಕಳ ವೈದ್ಯಕೀಯದಲ್ಲಿ ಅಂತರರಾಷ್ಟ್ರೀಯವಾಗಿ ಗುರುತಿಸಲ್ಪಟ್ಟ ಮಾನದಂಡವಾಗಿದ್ದು, ಇದ 'ನ್ನು ಯುನೈಟೆಡ್ ಕಿಂಗ್ಡಮ್ನ ರಾಯಲ್ ಕಾಲೇಜ 'ಆಫ್ ಪೀಡಿಯಾಟ್ರಿಕ್ಸ್ ಅಂಡ್ ಚೈಲ್ಡ್ ಹೆಲ್ತ್ ನೀಡುತ್ತದೆ. ಇದು ಮಕ್ಕಳ ಆರೈಕೆಗೆ ಉನ್ನತ ಮಟ್ಟದ ಪರಿಣತಿ ಮತ್ತು ಬದ್ಧತೆಯನ್ನು ಸೂಚಿಸುತ್ತದೆ. ಮತ್ತೊಂದೆಡೆ, ಆಊಂ ಪೀಡಿಯಾಟ್ರಿಕ್ಸ್ ಪರವಾನಗಿ ಪರೀಕ್ಷೆಯು ಅರ್ಹ ವೈದ್ಯರು ದುಬೈ ಆರೋಗ್ಯ ಪ್ರಾಧಿಕಾರದ ಅಡಿಯಲ್ಲಿ ವೈದ್ಯಕೀಯ ಅಭ್ಯಾಸ ಮಾಡಲು ಅನುವು ಮಾಡಿಕೊಡುತ್ತದೆ, ಇದು ಎಮಿರೇಟ್ (ದುಬೈ) ನಲ್ಲಿ ಆರೋಗ್ಯ ಮಾನದಂಡಗಳನ್ನು ಮೇಲ್ವಿಚಾರಣೆ ಮಾಡುವ ನಿಯಂತ್ರಕ ಸಂಸ್ಥೆಯಾಗಿದೆ. ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದ ಡಾ. ಶೇಖ್ ಸೈಫುದ್ದೀನ್, "ಈ ಸಾಧನೆಯು ಪ್ರತಿ ಹಂತದಲ್ಲೂ ನನಗೆ ಬೆಂಬಲ ನೀಡಿದ ನನ್ನ ಶಿಕ್ಷಕರು, ಮಾರ್ಗದರ್ಶಕರು ಮತ್ತು ಕುಟುಂಬ ಸದಸ್ಯರಿಗೆ ಸಮರ್ಪಿಸಲಾಗಿದೆ. ಈ ಮೈಲಿಗಲ್ಲು ಬೀದರ್‌ನ ಹೆಚ್ಚಿನ ಯುವ ವೈದ್ಯರಿಗೆ ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ರಕ್ಷಣೆಯ 'ಲ್ಲಿ ಅಂತರರಾಷ್ಟ್ರೀಯ ಮಾನದಂಡಗಳನ್ನು ಅನುಸರಿಸಲು ಸ್ಫೂರ್ತಿ ನೀಡುತ್ತದೆ ಎಂದು ನಾನು ಭಾವಿಸುತ್ತೇನೆ."

## ನಾಳೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರ ಬೀದರ ಜಿಲ್ಲಾ ಪ್ರವಾಸ

ಬೀದರ, ನವೆಂಬರ್.06 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ್ ಕೋಸಂಬೆ ಅವರು ನವೆಂಬರ್.8 ರಿಂದ 11 ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ನವೆಂಬರ್.8 ರಂದು ಮಧ್ಯಾಹ್ನ 2 ರಿಂದ 6 ಗಂಟೆಗೆಯವರೆಗೆ ಬೀದರ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ವಸತಿ ನಿಲಯ, ಶಾಲೆ, ಅಂಗನವಾಡಿ, ಪೊಲೀಸ್ ಠಾಣೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ ನಂತರ ಭಾಲ್ಕಿಯಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ನವೆಂಬರ್.10 ರಂದು ಬೆಳಿಗ್ಗೆ 8 ರಿಂದ 6 ರವರೆಗೆ ಬೀದರ ಜಿಲ್ಲೆಯಲ್ಲಿರುವ ವಸತಿ ನಿಲಯ, ಶಾಲೆ, ಅಂಗನವಾಡಿ, ಪೊಲೀಸ್ ಠಾಣೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ಮತ್ತು ಪರಿಶೀಲನೆ ನಡೆಸಲಿದ್ದಾರೆ. ನಂತರ ಬೀದರನಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ನವೆಂಬರ್.11 ರಂದು ಬೆಳಿಗ್ಗೆ 8 ಗಂಟೆಗೆ ಬೀದರನಿಂದ ಬೆಂಗಳೂರಿಗೆ ವಿಮಾನ ಮೂಲಕ ಪ್ರಯಾಣ ಮಾಡಲಿದ್ದಾರೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ದೀಕ್ಷಾ ಪ್ರತಿಜ್ಞಾ ರಥಕ್ಕೆ ಅದ್ದೂರಿ ಸ್ವಾಗತ




ಮಲ್ಲಮ್ಮ ನುಡಿ ವಾರ್ತೆ

ಬೀದರ್. ನ. 06 :- ಕಮಲನಗರ ಬೀದರ್ ನಗರದ ಚನ್ನಬಸವ ಪಟ್ಟದ್ದೇವರ ರಂಗ ಮಂದಿರದಲ್ಲಿ ಕರವೇ ವತಿಯಿಂದ ನ.7ರಂದು ನಡೆಯಲಿರುವ ಕನ್ನಡ ದೀಕ್ಷಾ ಪ್ರತಿಜ್ಞಾ ಸ್ವೀಕಾರ ಸಮಾರಂಭದ ನಿಮಿತ್ತ ಮಂಗಳವಾರ ಕಮಲನಗರ ಪಟ್ಟಣದ ಅಲ್ಲಮಪ್ರಭು ವೃತ್ತದ ಬಳಿ ಆಗಮಿಸಿದ ಕನ್ನಡ ದಿಕ್ಷಾ ಪ್ರತಿಜ್ಞಾ ಸ್ವೀಕಾರ ಕಾರ್ಯಕ್ರಮದ ರಥಕ್ಕೆ ಕರವೇ ತಾಲ್ಲೂಕು ಘಟಕದ ವತಿಯಿಂದ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಕಸಾಪ ತಾಲ್ಲೂಕು ಅಧ್ಯಕ್ಷ ಪ್ರಶಾಂತ ಮಠಪತಿ ಮಾತನಾಡಿ, 'ಕರವೇ ಸಂಘಟನೆ ಕೈಗೊಂಡ ಕನ್ನಡ ದೀಕ್ಷೆ ಕಾರ್ಯಕ್ರಮದ ಮೂಲಕ ಕನ್ನಡದ ಅಸ್ಮಿತೆ, ಕನ್ನಡಾಭಿಮಾನ, ಕನ್ನಡದ ಇತಿಹಾಸವನ್ನು ಪ್ರತಿಯೊಬ್ಬ ಕನ್ನಡಿಗರು ಅರಿತುಕೊಳ್ಳಬೇಕು ಎಂಬ ಸದುದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಕನ್ನಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು

ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಕರವೇ ಪ್ರಧಾನ ಕಾರ್ಯದರ್ಶಿ ಪ್ರಶಾಂತ ಖಾನಾಪುರೆ ಮಾತನಾಡಿ, 'ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಅವರ ಅಧ್ಯಕ್ಷತೆಯಲ್ಲಿ ಬೀದರ್ ನಗರದಲ್ಲಿ ಸಾವಿರಾರು ಕನ್ನಡ ಹೋರಾಟಗಾರರು, ಕರವೇ ಕಾರ್ಯಕರ್ತರು ಒಂದಾಗಿ ಕನ್ನಡ ದೀಕ್ಷೆ ಸ್ವೀಕರಿಸುವ ಐತಿಹಾಸಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಾಭಿಮಾನಿಗಳು ಭಾಗವಹಿಸಿ ಯಶಸ್ವಿಗೊಳಿಸಬೇಕು' ಎಂದು ಮನವಿ ಮಾಡಿದರು.

ಗ್ರಾ.ಪಂ. ಅಧ್ಯಕ್ಷೆ ಸುಶೀಲಾ ಮಹೇಶ, ಕರವೇ ಜಿಲ್ಲಾ ಉಪಾಧ್ಯಕ್ಷ ಸುಭಾಷ ಗಾಯಕವಾಡ, ಕರವೇ ತಾಲ್ಲೂಕು ಅಧ್ಯಕ್ಷ ಮಂಜುನಾಥ ಸ್ವಾಮಿ, ಪ್ರಶಾಂತ ಖಾನಾಪುರೆ, ಶಿವಾನಂದ ವಡ್ಡೆ, ಸಂಗಮೇಶ ಬಿರಾದಾರ, ಅಯೂಬ್ ಖುರೇಷಿ, ಸುರೇಶ ಮೇತ್ರೆ, ಆಕಾಶ ಸ್ವಾಮಿ, ಬಸವರಾಜ ಶೆಟಕಾರ, ಬಬನ್ ರಾಠೋಡ ಇನ್ನಿತರರಿದ್ದರು.

## ಸಾಹಿತ್ಯ ಮತ್ತು ಪ್ರಕಾಶನ ಜಗತ್ತು ವಿಷಯದ ಕುರಿತು ಅತಿಥಿ ಉಪನ್ಯಾಸ



ಮಲ್ಲಮ್ಮ ನುಡಿ ವಾರ್ತೆ ಬೀದರ: 6. ನ..2025 ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದ ಹಿಂದಿ ವಿಭಾಗದ ವತಿಯಿಂದ "ಸಾಹಿತ್ಯ ಮತ್ತು ಪ್ರಕಾಶನ ಜಗತ್ತು" ವಿಷಯದ ಕುರಿತು ಅತಿಥಿ ಉಪನ್ಯಾಸ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ದೆಹಲಿಯ ಪ್ರಸಿದ್ಧ ಪ್ರಕಾಶನ ಸಂಸ್ಥೆ ಸಾನಿಧ್ಯ ಪ್ರಕಾಶನದ ಶ್ರೀ ಲಲಿತ ಶರ್ಮಾ ಅವರು ಭಾಗವಹಿಸಿದರು.

ಶ್ರೀ ಲಲಿತ ಶರ್ಮಾ ತಮ್ಮ ಉಪನ್ಯಾಸದಲ್ಲಿ ಇಂದಿನ ಸಾಹಿತ್ಯ ಲೋಕದಲ್ಲಿ ಪ್ರಕಾಶನ ಕ್ಷೇತ್ರದ ಪಾತ್ರವನ್ನು ವಿಶ್ಲೇಷಿಸಿದರು. ಅವರು ಪುಸ್ತಕ ಪ್ರಕಟಣೆ, ಡಿಜಿಟಲ್ ಪ್ರಕಾಶನದ ಬೆಳವಣಿಗೆ, ಹೊಸ ಬರಹಗಾರರಿಗೆ ಅವಕಾಶಗಳು ಹಾಗೂ ಸವಾಲುಗಳು ಮುಂತಾದ ವಿಷಯಗಳ ಕುರಿತು ವಿವರಣೆ ನೀಡಿದರು. ವಿದ್ಯಾರ್ಥಿಗಳಿಗೆ ಬರವಣಿಗೆಯ ಪ್ರಾರಂಭ, ಸಂಪಾದನೆ ಹಾಗೂ ಪ್ರಕಾಶನದ ಪ್ರಕ್ರಿಯೆ ಕುರಿತು ಪ್ರಾಯೋಗಿಕ ಸಲಹೆಗಳನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ದೀಪಾ ರಾಗಾ ಅವರು ವಹಿಸಿ ಪ್ರಕಾಶನ ಜಗತ್ತಿನ ಸ್ಥಿತಿಗತಿ, ಸಾಹಿತ್ಯ ಬೆಳವಣಿಗೆಯಲ್ಲಿ ಪ್ರಕಾಶನದ ಮಹತ್ವ ಕುರಿತು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಹಿಂದಿ ವಿಭಾಗದ ಮುಖ್ಯಸ್ಥರಾದ ಮಾರುತಿ ಭೀಮಣ್ಣ ಅವರು ಅತಿಥಿಗಳನ್ನು ಸ್ವಾಗತಿಸಿ, ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು.

ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಅತಿಥಿಯೊಂದಿಗೆ ಸಂವಾದ ನಡೆಸಿ ತಮ್ಮ ಪ್ರಶ್ನೆಗಳನ್ನು ಕೇಳಿದರು. ಕಾರ್ಯಕ್ರಮದ ಕೊನೆಯಲ್ಲಿ ಶ್ರೀ ನೂರ ಪಾಶಾ ಅವರು ವಂದನೆಯನ್ನು ಸಲ್ಲಿಸಿದರು.

ಕಾರ್ಯಕ್ರಮವು ಜ್ಞಾನವರ್ಧಕ ಮತ್ತು ಪ್ರೇರಣಾದಾಯಕವಾಗಿದ್ದು, ವಿದ್ಯಾರ್ಥಿಗಳು ಸಾಹಿತ್ಯ ಹಾಗೂ ಪ್ರಕಾಶನ ಕ್ಷೇತ್ರದ ಕುರಿತು ಹೊಸ ದೃಷ್ಟಿಕೋಣವನ್ನು ಪಡೆದರು.

## ಕಬ್ಬು ಬೆಲೆಯಲ್ಲಿ ನ್ಯಾಯ ಲಾಭದಾಯಕ ದರ ನಿಗದಿಪಡಿಸಲು ಅಖಿಲ ಭಾರತ ಕಿಸಾನ್ ಸಭಾ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬೀದರ ಜಿಲ್ಲೆಯ ಕಬ್ಬು ಬೆಳೆಗಾರರ ಸಮಸ್ಯೆಗಳ ಪರಿಹಾರ ಹಾಗೂ ಕಬ್ಬಿಗೆ ನ್ಯಾಯಯುತವಾದ ಮತ್ತು ಲಾಭದಾಯಕ ದರ ನಿಗದಿಪಡಿಸುವಂತೆ ಅಖಿಲ ಭಾರತ ಕಿಸಾನ್ ಸಭಾ (ಂಋಏಖ) ಜಿಲ್ಲಾ ಮಂಡಳಿ ಕರ್ನಾಟಕ ಸರಕಾರಕ್ಕೆ ಮನವಿ ಸಲ್ಲಿಸಿದೆ. ಈ ಮನವಿಯನ್ನು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿರವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಕಳುಹಿಸಲಾಗಿದೆ.

ಪ್ರತಿವರ್ಷ ಸಕ್ಕರೆ ಕಾರ್ಖಾನೆ ಮಾಲಿಕರು ಕಬ್ಬಿನ ದರವನ್ನು ಸರಿಯಾಗಿ ನಿಗದಿಪಡಿಸದೇ, ರೈತರಿಗೆ ಹಣವನ್ನು ಸಮಯಕ್ಕೆ ನೀಡದೇ ಇರುವುದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಇದ್ರಲ್ಲದೇ, ಕೆಲವು ಕಾರ್ಖಾನೆ ಮಾಲಕರು ರೈತರ ಪಹಾಣಿ ಪತ್ರದ ಮೂಲಕ ಬ್ಯಾಂಕ್‌ಗಳಿಂದ ಸಾಲ ಪಡೆದುಕೊಳ್ಳುತ್ತಿರುವುದು ಹಾಗೂ ಬ್ಯಾಂಕ್‌ಗಳು ರೈತರ ಮೇಲೆ ಸಾಲ ಮರುಪಾವತಿಗೆ ಒತ್ತಡ ಹೇರುತ್ತಿರುವುದನ್ನು ಸಂಘಟನೆ ಟೀಕಿಸಿದೆ. ಕೇಂದ್ರೀಯ ಸರ್ಕಾರ ಕಬ್ಬಿಗೆ ಕನಿಷ್ಟ ಬೆಂಬಲ ಬೆಲೆ (MSP) ವನ್ನು ಡಾಕ್ಟರ್ ಸ್ವಾಮಿನಾಥನ್ ಆಯೋಗದ ಶಿಫಾರಸುಗಳಂತೆ ನಿಗದಿಪಡಿಸದಿರುವುದನ್ನು ವಿರೋಧಿಸುವ ಮೂಲಕ, ಕಬ್ಬಿಗೆ ರೂ. 355 ಪ್ರತಿ ಕ್ವಿಂಟಲ ದರ ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಒಟ್ಟು ರೂ. 5325 ಪ್ರತಿ ಟನ್ ದರ ನಿಗದಿ ಮಾಡಬೇಕೆಂದು ಅಖಿಲ ಭಾರತ ಕಿಸಾನ್ ಸಭಾ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅಖಿಲ ಭಾರತ ಕಿಸಾನ್ ಸಭಾ ರಾಜ್ಯ ಉಪಾಧ್ಯಕ್ಷ ಬಾಬುರಾವ ಹೊನ್ನ ಅವರು, "ರೈತರು ಮಣ್ಣಿನಿಂದ ಸಕ್ಕರೆ ಪೋಷಿಸುತ್ತಿದ್ದಾರೆ. ಆದರೆ ಸಕ್ಕರೆ ಕಾರ್ಖಾನೆ ಗುತ್ತಿಗೆದಾರರು ಮತ್ತು ಸರ್ಕಾರದ ನೀತಿಗಳಿಂದ ರೈತರು ದುರಸ್ತಿತಿಯಲ್ಲಿ ಸಿಲುಕಿದ್ದಾರೆ. ಕಬ್ಬಿಗೆ ನ್ಯಾಯಯುತ ದರ ನೀಡದಿದ್ದರೆ ಹೋರಾಟ ತೀವ್ರಗೊಳ್ಳಲಿದೆ" ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ನಜೀರ್ ಅಹ್ಮದ್ ಚೊಂಡಿ (ಜಿಲ್ಲಾ ಅಧ್ಯಕ್ಷರು), ಎಂ.ಡಿ. ಖಮರ ಪಟೇಲ್ (ತಾಲ್ಲೂಕಾ ಅಧ್ಯಕ್ಷರು), ಬಸವರಾಜ ಪಟೇಲ್ (ಸದಸ್ಯರು) ಉಪಸ್ಥಿತರಿದ್ದರು.

# ಕಾರ್ಮಿಕ ಇಲಾಖೆದಿಂದ ಹಠಾತ್ ದಾಳಿ ವಾಹನ ಚಾಲಕ, ಪಾಲಕರಿಗೆ ಜಾಗೃತಿ ನೀಡಿದರು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 06, (ಕ.ವಾ) : ಮಕ್ಕಳನ್ನು ಮತ್ತೊಮ್ಮೆ ಕೂಲಿಗೆ ಕಳುಹಿಸದೆ ಶಾಲೆಗೆ ಕಳುಹಿಸುವಂತೆ ಪಾಲಕ, ಪೋಷಕರು ಹಾಗೂ ಆಟೋ, ಟಂಟಂಗಳ ಚಾಲಕರಿಗೆ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ1986, ತಿದ್ದುಪಡಿ 2016"ರ ಕುರಿತು ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಹೇಳಿದರು.

ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಗುಂಜನೂರು, ಚಿನ್ನಕಾರ್ ಕ್ರಾಸ್, ಬೆಟ್ಟದಹಳ್ಳಿ ರಸ್ತೆಯ ಮಾರ್ಗವಾಗಿ ನ.5 ರಂದು ಆಟೋ, ಟಂಟಂಗಳಲ್ಲಿ ಮಕ್ಕಳನ್ನು ಕೆಲಸಕ್ಕೆ ಕರೆದುಕೊಂಡು ಹೋಗುತ್ತಿದ್ದಾರೆಂಬ ಎಂಬ ಮಾಹಿತಿಯ ಮೇರೆಗೆ ಹಠಾತ್ ದಾಳಿಯನ್ನು ಕೈಗೊಂಡು ಕೂಲಿ ಕೆಲಸಕ್ಕಾಗಿ ಆಟೋಗಳಲ್ಲಿ ತೆರಳಿದ್ದ ಸುಮಾರು 12ಕ್ಕೂ ಹೆಚ್ಚು ಮಕ್ಕಳನ್ನು ರಕ್ಷಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಿಂದ ನಿರಂತರವಾಗಿ ಜನ ಜಾಗೃತಿ, ಕಾನೂನು ಅರಿವು, ನೆರವು ಕಾರ್ಯಕ್ರಮ, ಬೀದಿನಾಟಕ, ಆಟೋ-ಪ್ರಚಾರ ಕಾರ್ಯಕ್ರಮಗಳನ್ನು ಏರ್ಪಡಿಸುವ ಮೂಲಕ ನಿರಂತರವಾಗಿ ಬಾಲ/ಕಿಶೋರ ಕಾರ್ಮಿಕ ಪದ್ಧತಿ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಇದರ ಹೊರತಾಗಿಯೂ ಆಟೋ, ಟಂಟಂಗಳ ಮೂಲಕ ಕೃಷಿ ಹಾಗೂ ಇನ್ನಿತರೆ ಕೆಲಸಗಳಿಗೆ ಮಕ್ಕಳನ್ನು ಕರೆದುಕೊಂಡು ಹೋಗುವ ವಾಹನಗಳ ಚಾಲಕರ ವಿರುದ್ಧ ಆರ್.ಟಿ.ಓ ಅಧಿಕಾರಿಗಳ ಮೂಲಕ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಯಾದಗಿರಿ ಕಾರ್ಮಿಕ ನಿರೀಕ್ಷಕರಾದ ಶ್ರೀಮತಿ ಸಂಗೀತಾ ಹೊನ್ನೂರು ಅವರು ಮಾತನಾಡಿ, ಓದುವ ಮಕ್ಕಳನ್ನು ಕೂಲಿಗೆ ಕಳುಹಿಸಿ ಮಕ್ಕಳ ಭವಿಷ್ಯವನ್ನು ಕುಗ್ಗಿಸಬೇಡಿ ಎಂದು ಪಾಲಕ, ಪೋಷಕರಿಗೆ ತಿಳಿಸಿ, ಮಕ್ಕಳ ಸಹಾಯವಾಣಿ 1098ಗೆ ಸಂಪರ್ಕಿಸಿ ಎಂದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆಯ ನಿರೀಕ್ಷಕರಾದ ಅಯ್ಯಾಳಪ್ಪ, ಶಿಕ್ಷಣ ಸಂಯೋಜಕರಾದ ಪ್ರಕಾಶ್ ವೀರಶಾಸ್ತ್ರಿ, ಸಿ,ಆರ್,ಪಿ ಜೈಪಾಲ್ ರೆಡ್ಡಿ, ಸರಕಾರಿ ಹಿರಿಯ ಪ್ರೌಢ ಶಾಲೆ ಗುಂಜನೂರು ಮುಖ್ಯೋಪಾಧ್ಯಾಯರಾದ ಆಶಿರೆಡ್ಡಿ ಮಕ್ಕಳ ರಕ್ಷಣ ಘಟಕ 1098ನ ಮಹೇಶ್ ಕುಮಾರ, ಕಾರ್ಮಿಕ ಇಲಾಖೆಯ ಲೆಕ್ಕಿಗರಾದ ಬಾಲು ನಾಯಕ, ಪ್ರಾದೇಶಿಕ ಸಾರಿಗೆ ಇಲಾಖೆಯ ಚಾಲಕರಾದ ಮಾಳಪ್ಪ ಪೂಜಾರಿ, ಗೃಹ ರಕ್ಷಕ ದಳದ ಚಂದ್ರಶೇಖರ್ ಮುದ್ನಾಳ ಉಪಸ್ಥಿತರಿದ್ದರು.

# ನಂದವಾಡಗಿ ಶ್ರೀಮಠದಿಂದ ಅಯ್ಯಾಚಾರ ದೀಕ್ಷೆ ಪಲ್ಲಕ್ಕಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಇಳಕಲ್ ತಾಲೂಕ ನಂದವಾಡಗಿ ಗ್ರಾಮದಲ್ಲಿ ಗೌರಿ ಹುಣ್ಣಿಮೆ ಪ್ರಯುಕ್ತ ಪ್ರತಿವರ್ಷದಂತೆ ಅಯ್ಯಾಚಾರ ಲಿಂಗದೀಕ್ಷೆ ಪಲ್ಲಕ್ಕಿ ಉತ್ಸವ ಜರಗಿತು. ಬೆಳಗಿನ ಜಾವ ಗದ್ದುಗೆಗೆ ಅಭಿಷೇಕದ ಮೂಲಕ ಪ್ರಾರಂಭವಾದ ಪೂಜಾಕೈಂಕರ್ಯಗಳು ಬೆಳಗ್ಗೆ ಡೊಳ್ಳು ಕಳಸದೊಂದಿಗೆ ಶ್ರೀಮಠದಿಂದ ಪಲ್ಲಕ್ಕಿ ಉತ್ಸವ ಪ್ರಾರಂಭವಾಗಿ ಮಧ್ಯಾಹ್ನದವರೆಗೆ ಗ್ರಾಮದ ಪ್ರಮುಖ ಬೀದಿಯಲ್ಲಿ ಸಂಚರಿಸಿ ಪಲ್ಲಕ್ಕಿ ಶ್ರೀಮಠಕ್ಕೆ ಮರಳಿತು ಪರಮಪೂಜ್ಯ ಶ್ರೀ ಮಹಾಂತಲಿಂಗ ಶಿವಾಚಾರ್ಯರು ಹಾಗೂ ಶ್ರೀ ಷ.ಬ್ರ ಚನ್ನಬಸವ ಶಿವಾಚಾರ್ಯರು ಮಕ್ಕಳಿಗೆ ಅಯ್ಯಾಚಾರ ಮಾಡಿ ಲಿಂಗ ದೀಕ್ಷೆ ನೀಡಿದರು. ಕಾರ್ಯಕ್ರಮಕ್ಕೆ ಆಗಮಿಸಿದ್ದ ಸರ್ವಭಕ್ತರಿಗೂ ಶ್ರೀಮಠದಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು ಪಲ್ಲಕ್ಕಿ ಉತ್ಸವಕ್ಕೆ ಆಗಮಿಸಿದ ಸಕಲ ಭಕ್ತರು ಪ್ರಸಾದ ಸೇವಿಸಿದರು.



ಕಲಬುರಗಿ: ನಗರದ ಕೇಂದ್ರ ಬಸ್‌ನಿಲ್ದಾಣವನ್ನು ಕೆಕೆಆರ್‌ಟಿಸಿ ನಿಗಮ ಮಂಡಳಿಯ ಅಧ್ಯಕ್ಷರಾದ ಅರುಣಕುಮಾರ ಎಂ.ವೈ ಪಾಟೀಲ್ ಅವರು ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮೇಯರ್ ವರ್ಷಾ ಜಾನೆ, ಕೆಕೆಆರ್‌ಟಿಸಿ ಎಂ.ಡಿ. ಶುಶೀಲಾ ಬಿ ಸೇರಿದಂತೆ ವಿವಿಧ ಅಧಿಕಾರಿಗಳಿದ್ದರು.

ಮಲ್ಲಮ್ಮ ನುಡಿ ಚಿತ್ರ

# ವಿಶ್ವ ವಿಕಲಚೇತನರ ದಿನಾಚರಣೆ :ರಾಜ್ಯ ಪ್ರಶಸ್ತಿಗೆ ಆಹ್ವಾನ

ಯಾದಗಿರಿ : ನವೆಂಬರ್ 06, (ಕ.ವಾ) : 2025ನೇ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ರಾಜ್ಯ ಪ್ರಶಸ್ತಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ತಿಳಿಸಿದ್ದಾರೆ.

ವಿಶ್ವ ವಿಕಲಚೇತನರ ದಿನಾಚರಣೆ 2025ರ ಅಂಗವಾಗಿ ವಿಕಲಚೇತನರು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದವರನ್ನು ಗುರುತಿಸಿ ಸನ್ಮಾನಿಸಲು, ರಾಜ್ಯ ಪ್ರಶಸ್ತಿಗಳಿಗೆ 2025ರ ಅಕ್ಟೋಬರ್ 9ರ ಒಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಡಳಿತ ಭವನ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರೂಂ.ನಂ.ಬಿ11, ಬಿ12, ನೆಲಮಹಡಿ ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.13 ರಂದು ರಾಷ್ಟ್ರೀಯ ಲೋಕ್ ಅದಾಲತ್

ಯಾದಗಿರಿ : ನವೆಂಬರ್ 06, (ಕ.ವಾ) : 2025ರ ಡಿಸೆಂಬರ್ 13 ರಂದು ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರಿಯಪ್ಪ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅವರ ನಿರ್ದೇಶನದ ಮೇರೆಗೆ ಸಾರ್ವಜನಿಕರ ಗಮನಕ್ಕೆ ಡಿ.13 ರಂದು ರಾಷ್ಟ್ರೀಯ ಲೋಕ್ ಅದಾಲತ್‌ನ್ನು, ಯಾದಗಿರಿ ಜಿಲ್ಲೆಯ ಮತ್ತು ತಾಲ್ಲೂಕಿನ ಎಲ್ಲಾ ನ್ಯಾಯಾಲಯಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ರಾಷ್ಟ್ರೀಯ ಲೋಕ್ ಅದಾಲತ್‌ನ ಹಿನ್ನೆಲೆ ರಾಜೀಯಾಗುವಂತಹ ಎಲ್ಲಾ ರೀತಿಯ ಪ್ರಕರಣಗಳನ್ನು ಲೋಕ್ ಅದಾಲತ್‌ನಲ್ಲಿ ಇತ್ಯರ್ಥ ಪಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಆಹಾರ ಬಿಡುಗಡೆ

ಯಾದಗಿರಿ : ನವೆಂಬರ್ 06, (ಕ.ವಾ) : 2025ರ ನವೆಂಬರ್ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಯಾದಗಿರಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 5ಕೆ.ಜಿ, ಉಚಿತವಾಗಿ ವಿತರಿಸುತ್ತಿದೆ ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತುಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 5 ಕೆ.ಜಿ ಹೆಚ್ಚುವರಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ, ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಿದೆ. ಯಾವುದೇ ನ್ಯಾಯಬೆಲೆ ಅಂಗಡಿ-ಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ಸಹಾಯವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬೇಕು. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿ-ದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಮಹಿಳೆಯರಿಗೆ ಐದು ವಾರದ ದೇಶಿ ಕೋಳಿಮರಿ ಉಚಿತವಾಗಿ ವಿತರಣೆಗೆ ಅರ್ಜಿ ಆಹ್ವಾನ

ಯಾದಗಿರಿ : ನವೆಂಬರ್ 06, (ಕ.ವಾ) : ಯಾದಗಿರಿ ಜಿಲ್ಲೆಯಾದ್ಯಂತ 2025-26ನೇ ಸಾಲಿನ ಸಹಾಯಕ ನಿರ್ದೇಶಕರು ಪಶು ಪಾಲನಾ ಇಲಾಖೆದಿಂದ ರೈತ ಮಹಿಳೆಯರಿಗೆ ಐದು ವಾರದ ದೇಶಿ ಕೋಳಿಮರಿಗಳನ್ನು ಉಚಿತವಾಗಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಪಶು ಪಾಲನಾ ಇಲಾಖೆ ಉಪ ನಿರ್ದೇಶಕರು (ಆಡಳಿತ) ರಾಜುದೇಶಮುಖ ಅವರು ತಿಳಿಸಿದ್ದಾರೆ.

ದಾಖಲಾತಿಗಳು : ಫೋಟೋ ಸಹಿತ ಗುರುತಿನ ಚೀಟಿ, ಆಧಾರ್ ಕಾರ್ಡ್ ಪ್ರತಿ ಲಗತ್ತಿಸಬೇಕು, ಬಿ.ಪಿ.ಎಲ್ ಕಾರ್ಡ್ ಕಡ್ಡಾಯ ಪ್ರತಿ ಲಗತ್ತಿಸಬೇಕು, ಅರ್ಜಿ ನಮೂನೆಯನ್ನು ಸಂಪೂರ್ಣವಾಗಿ ಭರ್ತಿಮಾಡಿ ಸಲ್ಲಿಸಬೇಕು, ಅರ್ಜಿ ಮತ್ತು ದಾಖಲಾತಿಗಳನ್ನು ಕಡ್ಡಾಯವಾಗಿ ದ್ವಿಪ್ರತಿಯಲ್ಲಿ ಸಲ್ಲಿಸಬೇಕು. ಸಾಮಾನ್ಯ ಫಲಾನುಭವಿ ಹೊರತುಪಡಿಸಿ, ಮಿಸಲಾತಿ ಬಯಸುವವರು ಜಾತಿ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.

ಕರ್ನಾಟಕ ಕುಕ್ಕುಟ ಮಹಾಮಂಡಳಿ ನಿಯಮಿತದಿಂದ ಗ್ರಾಮೀಣ ರೈತ ಮಹಿಳೆಯರಿಗೆ ಪರಿಶಿಷ್ಟ ಜಾತಿ ಶೇ.17 ರಷ್ಟು, ಪರಿಶಿಷ್ಟ ಪಂಗಡ ಶೇ.7 ರಷ್ಟು ಹಿಂದುಳಿದ ವರ್ಗಕ್ಕೆ ಶೇ.32 ರಷ್ಟು ಸಾಮಾನ್ಯ ಶೇ.44 ರಂತೆ ಆಯ್ಕೆ ಮಾಡಿಕೊಳ್ಳುವಂತೆ ಐದು ವಾರದ ದೇಶಿ ಕೋಳಿಮರಿಗಳನ್ನು ತಲಾ 20 ರಂತೆ ಕೋಳಿ ಮರಿಗಳನ್ನು ವಿತರಿಸಿ ಅವರ ಆದಾಯ ಹೆಚ್ಚಿಸುವ ಕಾರ್ಯಕ್ರಮಕ್ಕೆ ಸಂಬಂಧಿಸಿದ ಮಹಿಳಾ ರೈತರಿಂದ 2025ರ ನವೆಂಬರ್ 5ರ ಒಳಗೆ ಅರ್ಜಿ ಸಲ್ಲಿಸಬೇಕು. ಯಾದಗಿರಿ ತಾಲ್ಲೂಕಿಕ್ಕೆ ಮಾತ್ರ ಮುಖ್ಯ ಪಶು ವೈದ್ಯಾಧಿಕಾರಿಗಳು (ಆಡಳಿತ) ಅಥವಾ ಸಹಾಯಕ ನಿರ್ದೇಶಕರು ಕಚೇರಿ ಸಮಯದಲ್ಲಿ 2025ರ ನವೆಂಬರ್ 15ರ ಒಳಗೆ ಅಗತ್ಯ ದಾಖಲಾತಿಗಳೊಂದಿಗೆ ಭರ್ತಿಮಾಡಿ ಅರ್ಜಿ ಸಲ್ಲಿಸಬೇಕು. ಪಶುವೈದ್ಯಕೀಯ ಸಂಸ್ಥೆ ಅಥವಾ ತಾಲ್ಲೂಕು ಸಹಾಯಕ ನಿರ್ದೇಶಕರು ಇಲ್ಲಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಕರ್ನಾಟಕ ಸ್ಟೇಟ್ ಮಾರ್ಕೆಂಟಿಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಕಂಪನಿಯ ವಿಶೇಷ ಲಾಭಾಂಶ ರೂ. 34.13 ಕೋಟಿ ಮೊತ್ತದ ಚೆಕ್ ಅನ್ನು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಶ್ರೀ ಎಂ.ಬಿ. ಪಾಟೀಲ್, ಕೆಎಸ್‌ಎಂಸಿಎ ಮಾನ್ಯ ಅಧ್ಯಕ್ಷರಾದ ಶ್ರೀ ಸತೀಶ ಕೃಷ್ಣ ಸೈಲ್ ಮತ್ತು ಮಾನ್ಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಮೊಹಮದ್ ಅತೀಕುಯಿಲ್ಲಾ ಶರೀಫ್ ರವರು ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ನವರಿಗೆ ಹಸ್ತಾಂತರಿಸುತ್ತಿರುವರು. ಈ ಸಂದರ್ಭದಲ್ಲಿ ಕಂಪನಿಯ ಉಪ ಪ್ರಧಾನ ವ್ಯವಸ್ಥಾಪಕರಾದ ಶ್ರೀ ಪಿ.ಎಸ್. ನಂದೀಶ ರವರು ಉಪಸ್ಥಿತರಿರುವರು.

ಮಲ್ಲಮ್ಮ ನುಡಿ ಚಿತ್ರ




ಕಲಬುರಗಿ: ಪ್ರಗತಿ ಎಜುಕೇಷನ್ ಆಂಡ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಪಾಳಾ ಹಾಳ ತಾಂಡಾದಲ್ಲಿ ಶಾಲಾ ಮಕ್ಕಳಿಗೆ ಮತ್ತು ತಾಂಡಾದ ನಾಗರಿಕರಿಗೆ ಕಿಟ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಪ್ರಗತಿ ಎಜುಕೇಷನ್ ಆಂಡ್ ಚಾರಿಟೇಬಲ್ ಟ್ರಸ್ಟ್‌ನ್ ಅಧ್ಯಕ್ಷೆ ಅಂಜನಾ ಡಿ ರಾಠೋಡ, ನಿವೃತ ಸರ್ಕಲ್ ಇನ್ಸ್‌ಪೆಕ್ಟರ್ ಟಿ. ಆರ್. ಪವ್ವಾರ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ಸಂಪನ್ಮೂಲ ವ್ಯಕ್ತಿ ಲಕ್ಷ್ಮಣ ರಾಠೋಡ, ಯುವ ಮುಖಂಡ ಮಲ್ಲಿಕಾರ್ಜುನ, ಮುಖ್ಯಗುರು ಶಿಲ್ಪಾ, ಸಹ ಶಿಕ್ಷಕಿ ನಾಗಮಣಿ, ಎಸ್ ಡಿ ಎಂ ಸಿ ಅಧ್ಯಕ್ಷ ಚಂದ್ರಕಾಂತ ಜಾಧವ ಸೇರಿದಂತೆ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಪಾಳಾ ಹಾಳ ತಾಂಡಾ ಹಾಗೂ ತಾಂಡಾದ ನಾಯಕ, ಕಾರಭಾರಿ, ತಾಂಡಾದ ನಿವಾಸಿಗಳು ಉಪಸ್ಥಿತರಿದ್ದರು.

ಮಲ್ಲಮ್ಮ ನುಡಿ ವಾರ್ತೆ

# "ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್' ಕಾರ್ಮಿಕ ಸೇವಾ ಕೇಂದ್ರಗಳ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ನವೆಂಬರ್ 06 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಿ ಅವರ ಸದಸ್ಯತ್ವವನ್ನು ನವೀಕರಿಸಿ ವಿವಿಧ ಸೌಲಭ್ಯಗಳನ್ನು ನೀಡಲು ಅನುಕೂಲವಾಗುವಂತೆ ರಾಜ್ಯದ 43 ಕಾರ್ಮಿಕ ಅಧಿಕಾರಿಗಳ ವ್ಯಾಪ್ತಿಯಲ್ಲಿ ಸುಸಜ್ಜಿತವಾದ ಎ.ಐ ಆಧಾರಿತ ತಂತ್ರಾಂಶದೊಂದಿಗೆ "ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್" ಕಾರ್ಮಿಕ ಸೇವಾ ಕೇಂದ್ರಗಳನ್ನು ಮಂಡಳಿಯ ವತಿಯಿಂದ ಸ್ಥಾಪಿಸಲಾಗುತ್ತಿದೆ.

ವೃತ್ತಿಸಂಘಗಳ ಕಾಯ್ದೆ-1926ರಡಿ ನೋಂದಣಿಯಾದ ಕಾರ್ಮಿಕ ಸಂಘಗಳು ಈ ತಂತ್ರಾಂಶದಲ್ಲಿ ಕಟ್ಟಡ ಮತ್ತು ಇತರೆ ಕಾರ್ಮಿಕರನ್ನು ಫಲಾನುಭವಿಗಳಾಗಿ ನೋಂದಣಿ / ನವೀಕರಣ ಮಾಡಿಸಲು ಉದ್ಯೋಗ ಪ್ರಮಾಣಪತ್ರವನ್ನು ನೀಡುವ ವಿಧಾನ ಹಾಗೂ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಸೌಲಭ್ಯಗಳನ್ನು ಒದಗಿಸಲು ಕಾರ್ಮಿಕ ಸಂಘಗಳಿಗೆ ೦ ಯೂನಿಯನ್ ಮಾಡ್ಯೂಲ್ ಅನ್ನು ವಿನ್ಯಾಸಗೊಳಿಸಲಾಗಿರುತ್ತದೆ.

ಸಂಬಂಧಪಟ್ಟ ಕಾರ್ಮಿಕ ಸಂಘಗಳು ಮಂಡಳಿಯ ತಂತ್ರಾಂಶದ ಗRL: https://www.kbocwwb.karnataka.gov.in ಮೂಲಕ ಅರ್ಜಿ ಸಲ್ಲಿಸಲು ನೂತನ ತಂತ್ರಾಂಶದಲ್ಲಿ ನೋಂದಾಯಿಸಲು ಸೂಚಿಸಿದೆ.

ಅರ್ಜಿ ಸಲ್ಲಿಸಲು ಸಂಘದ ನೋಂದಣಿ ಪ್ರಮಾಣಪತ್ರ, ಸಂಘದ ಉಪನಿಯಮಗಳ ಪ್ರತಿ. ಕಳೆದ ಕನಿಷ್ಠ 2 ವರ್ಷಗಳ ಸಂಘದ ವಾರ್ಷಿಕ ವರದಿಗಳನ್ನು ಸಂಬಂಧಪಟ್ಟ ಪ್ರಾಧಿಕಾರಕ್ಕೆ ಸಲ್ಲಿಸಿದ ಸ್ವೀಕೃತಿಯೊಡನೆ (ನಮೂನೆ-ಇ), ಸಂಘದ

ಪಧಾಧಿಕಾರಿಗಳಾಗಿ ಆಯ್ಕೆಯಾಗಿರವುದಕ್ಕೆ ಸಂಬಂಧಿಸಿದಂತೆ ಸಂಘದ ಸಾಮಾನ್ಯ ಸಭೆಯ ನಡಾವಳಿಗಳು/ಚುನಾವಣಾ ಪ್ರಮಾಣಪತ್ರ (ನಮೂನೆ-ಎಫ್) ದಾಖಲೆಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ವೆಬ್‌ಸೈಟ್ https://karbwwb.karnataka.gov.in ರಲ್ಲಿ ಪಡೆಯಬಹುದು ಎಂದು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಮತ್ತು ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಉಪನ್ಯಾಸಕರ ಸೇವೆ ಸಕ್ರಮಕ್ಕೆ ಆಗ್ರಹಿಸಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಹತ್ತಾರು ವರ್ಷಗಳಿಂದ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು ಸಕ್ರಮಗೊಳಿಸಲು ಆಗ್ರಹಿಸಿ ಗುರುವಾರ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಾದ ಮಂಜುಶ್ರೀ ಅವರಿಗೆ ಜಿಲ್ಲಾ ಅತಿಥಿ ಉಪನ್ಯಾಸಕರ ಸಂಘದಿಂದ ಮನವಿ ಸಲ್ಲಿಸಲಾಯಿತು. ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ನೀಡಿದ ಆಯುಕ್ತರಿಗೆ ಮನವಿ ಸಲ್ಲಿಸಿ ಮಾತನಾಡಿದ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಹನುಮಂತಗೌಡ ಕಲ್ಮನಿ, ಹಲವು ವರ್ಷಗಳಿಂದ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಅನೇಕರ ವಯೋಮಿತಿ ಮೀರಿದೆ. ಇನ್ನೂ ಹಲವರ ವಯೋಮಿತಿ ಮೀರುತ್ತಿದೆ. ಆದ್ದ-ರಿಂದ ಬರುವ ದಿನಗಳಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ಆಯ್ಕೆ ಮಾಡುವ ಬದಲು ಸೇವಾ ಹಿರಿತನದ ಆಧಾರದ ಮೇಲೆ ಅತಿಥಿ ಉಪನ್ಯಾಸಕರ ಸೇವಾ ಸಕ್ರಮಾತಿಗೊಳಿಸುವಂತೆ ಉಳಿದಂತೆ ಎಲ್ಲ ಅತಿಥಿ ಉಪನ್ಯಾಸಕರ ಸೇವೆಯನ್ನು ಪ್ರತಿ ವರ್ಷ ಮುಂದುವರಿಸಬೇಕು ಎಂದು ಆಗ್ರಹಿಸಿದರು.

ಅತಿಥಿ ಉಪನ್ಯಾಸಕರಿಗೆ ವರ್ಷದ ಹನ್ನೆರಡು ತಿಂಗಳು ಗೌರವಧನ ನೀಡಬೇಕು. ಈ ಮೊದಲು ಬೇಡಿಕೆ ಈಡೇರಿಸುವಂತೆ ಹಲವು ಹೋರಾಟ ನಡೆಸಿದರೂ ಪ್ರಯೋಜನವಾಗಿಲ್ಲ. ಈಗಾಗಲೇ ಕೌನ್ಸಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡವರನ್ನು ಪ್ರಥಮ ಆದ್ಯತೆ ಮೇರೆಗೆ ಸೇವೆಗೆ ಪರಿಗಣಿಸಬೇಕು. ಸೇವಾ ನಿವೃತ್ತಿ ಹೊಂದಿದ ಅತಿಥಿ ಉಪನ್ಯಾಸಕರ ಇಡುಗಂಟು ಹಣವನ್ನು ಕೂಡಲೇ ಮಂಜೂರು ಮಾಡುವಂತೆ ಅವರು ಒತ್ತಾಯಿಸಿದರು. ಈ ವೇಳೆ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಡಾ.ವೀರಣ್ಣ ಸಜ್ಜನರ, ಡಾ.ಸಣ್ಣದೇವೇಂದ್ರಸ್ವಾಮಿ, ಡಾ.ಪ್ರಕಾಶ ಬಳ್ಳಾರಿ, ಡಾ.ತುಕಾರಾಂ ನಾಯ್ಕ, ಡಾ.ಶಿವಬಸಪ್ಪ ಮಸ್ಕಿ, ಡಾ.ಮಹಾಂತೇಶ ನೆಲಾಗಣಿ, ಬಸವರಾಜ ಶಿಬಾ, ರಾಮಪ್ರಸಾದ ಟಿಕಾರೆ, ಬಸವರಾಜ ಕರುಗಲ್, ವಿಜಯಕುಮಾರ ತೋಟದ, ಗೀತಾ ಬನ್ನಿಕೊಪ್ಪ, ಗಿರಿಜಾ, ಉಷಾ, ಅಕ್ಕಮಹಾದೇವಿ ಸೇರಿದಂತೆ ಹಲವರು ಇದ್ದರು.

# ದಿ.7ರಂದು ಭಕ್ತ ಕನಕದಾಸರ ಜಯಂತಿ ಪ್ರಯುಕ್ತ ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಕಬ್ಬಡಿ ಪಂದ್ಯಾವಳಿ



ರಾಯಚೂರು, ನ.6– ವಿಶ್ವ ಚೇತನ ಭಕ್ತ ಕನಕದಾಸರ 538ನೇ ಜಯಂತಿಯ ಪ್ರಯುಕ್ತ ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಕಬಡ್ಡಿ, ಪಂದ್ಯಾವಳಿಯನ್ನು ದಿ. 7 ರಂದು ಸಂಜೆ 4.00ಗಂಟೆಗೆ ಜಿಲ್ಲೆಯ ಖಾಸಗಿ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರ ಸಂಘಟನೆಯ ವತಿಯಿಂದ ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಕಬಡಿ ಪಂದ್ಯಾವಳಿಯನ್ನು ರಾಯಚೂರು ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲಿ ಆಯೋಜಿಸಲಾಗಿದೆ ಎಂದು

ಖಾಸಗಿ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರ ಸಂಘಟನೆ ಅಧ್ಯಕ್ಷ ಕಾಶಿನಾಥ ಎಂ.ಹೇಳಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆಮಾತನಾಡಿ,ರಾಜ್ಯ ಮಟ್ಟದ ಈ ಕ್ರೀಡಾ ಉತ್ಸವದಲ್ಲಿ ಕರ್ನಾಟಕದ ವಿವಿಧ ಜಿಲ್ಲೆಗಳ ತಂಡಗಳು ಭಾಗವಹಿಸಲಿದ್ದು ಯುವ ಪ್ರತಿಭೆಗಳಿಗೆ ವೇದಿಕೆ ಒದಗಿಸುವ ಹಾಗೂ ಕ್ರೀಡಾಸ್ಪೂರ್ತಿ ಮತ್ತು ಸೌಹಾರ್ದತೆ ಬೆಳಸುವ ಉದ್ದೇಶದಿಂದ ಈ ಪಂದ್ಯಾವಳಿ ಹಮ್ಮಿಕೊಳ್ಳಲಾಗಿದೆ.

ಪ್ರಥಮ ಬಹುಮಾನ 30,ಸಾವಿರ ದ್ವಿತೀಯ ಬಹುಮಾನ 20,ಸಾವಿರ ಹಾಗೂ ತೃತೀಯ ಬಹುಮಾನ 10, ಸಾವಿರ ಹಾಗೂ ಆಕರ್ಷಕ ಟ್ರೋಫಿ ಹಾಗೂ ಪ್ರಶಸ್ತಿಗಳು ಪ್ರದಾನ ಮಾಡಲಾಗುತ್ತದೆ ಎಂದರು.

ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಕಬಡ್ಡಿ ಪಂದ್ಯಾವಳಿ ಉದ್ಘಾಟನೆಯನ್ನು . ಕೆ.ಸಿ. ಅಯ್ಯಣ್ಣ ವಡವಾಟಿ ಜಿಲ್ಲಾಧ್ಯಕ್ಷರು, ಶಫರ್ಡ್ ಇಂಟರ್ ನ್ಯಾಷನಲ್ ,ಡಿ. ಶ್ರೀನಿವಾಸ ಕಾರ್ಯಪರ್ಶಿ, ಶಫರ್ಡ್ ಇಂಟರ್ ನ್ಯಾಷನಲ್ ಹಾಗೂ ಹೊಟೇಲ್ ಉದ್ಯಮಿ ಹಾಗೂ ಶ್ರೀನಿವಾಸ್ ಏಗನೂರು ಅಧ್ಯಕ್ಷರು, ಗ್ರಾಮ ಪಂಚಾಯತಿ ಚಿಕ್ಕಸೂಗೂರು ನೆರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಕಾಶೀನಾಥ ಎಂ.ಗಿಲೇರಿ ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ಶಿಕ್ಷಣ ಸಂಸ್ಥೆಗಳು ನೌಕರರ ಸಂಘ.

ಮುಖ್ಯಅತಿಥಿಗಳಾಗಿನಾಗೇಂದ್ರಪ್ಪ ಮಟಮಾರಿಅಧ್ಯಕ್ಷರು,ಗಿಲ್ಲೆಸಗೂರು ಬ್ಲಾಕ್ ಕಾಂಗ್ರೆಸ್ ಶ್ರೀ ನಿವಾಸ ಎಎಸ್ ಐಕೆ. ಜಗದೀಶ್ ಶ್ರೀರಾಮ ಡೆಕೋರೆರ್ಟ್ಸ್, ರಾಯಚೂರು ಜಂಬಣ್ಣ ಮಂದಕಲ್ ಭಾಜತಾ ಮಾಜಿ ಯುವ ಮೋರ್ಚಾ ಅಧ್ಯಕ್ಷರು, ರಾಯಚೂರು ಶಂಕರ್ ಪಾಟೀಲ್ ಗುತ್ತಿಗೆದಾರರು ಹಾಗೂ ಕಾಂಗ್ರೆಸ್ ಮುಖಂಡರು, ದೇವಸೂಗೂರು.ನವೀನ್ ಕುಮಾರ್ ಅನಲಿಂಗೇಶ್ವರ ಟ್ರೆಂಡಿಂಗ್ ಕಂಪಾ ರಾಜೇಂದ್ರಗಂಜ್ ರಾಯಚೂರು ಆಗಮಿಸಲಿದ್ದಾರೆ.ವಿಶೇಷಆಹ್ವಾನಿತರಾಗಿ ವೀರೇಶ್ ನಾಯಕ,ರಂಗಸ್ವಾಮಿ ನಾಯಕ್ , ಪರಶುರಾಮ್ ಹುಜರತಿ,ಎನ್.ಹೆಚ್.ಹುಸೇನ್ ಭಾಷಾ ಆಗಮಿಸಲಿದ್ದಾರೆಂದರು.

ಈ ಸಂದರ್ಭದಲ್ಲಿ ಲಕ್ಷ್ಮಣ ಸಿಂಗ್,ಅಮೀರ್ ಭಾಹದು ರ್,ಉರಕುಂದಪ್ಪ,ಮಲೇಶ ನಾಯಕ,ರಮೇಶ ಸೇರಿದಂತೆ ಉಪಸ್ಥಿತರಿದ್ದರು.

# ನರೇಗಾ ಕಾಮಗಾರಿ ಕುರಿತು ಗ್ರಾಮ ಸಭೆ



ರಾಯಚೂರು,ನ.6–ತಾಲೂಕಿನ ಗಂಜಹಳ್ಳಿ ಗ್ರಾಮದಲ್ಲಿ 2025–26 ಸಾಲಿನ ಗ್ರಾಮ ಸಭೆಯನ್ನು ಗ್ರಾಮದ ಈಶ್ವರ ಆಂಜನೇಯ ದೇವಸ್ಥಾನದಲ್ಲಿ ಗುರುವಾರ ನಡೆಸಲಾಯಿತು.

ಯದ್ಲಾಪೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಗಂಜಹಳ್ಳಿ ಗ್ರಾಮದಲ್ಲಿ 2025–26 ಸಾಲಿನಲ್ಲಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೈಗೊಳ್ಳಬೇಕಾದ ಕೃಷಿ ಹೊಂಡ ದನದ ಶೆಡ್ಡ್ ಸೇರಿದಂತೆ ಇನ್ನಿತರ ಕಾಮಗಾರಿಗಳ ಬಗ್ಗೆ ಗ್ರಾಮಸ್ಥರಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಚನ್ನಮ್ಮ ಅವರು ಸವಿಸ್ತಾರವಾಗಿ ತಿಳಿಸಿದರು. ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿಗಳ ಪ್ರಾರಂಭಕ್ಕೆ ಗ್ರಾಮಸ್ಥರಿಂದ ಹೆಸರು ನೋಂದಣಿ ಮಾಡಿಕೊಳ್ಳಲಾಯಿತು. ಗ್ರಾಮಸ್ಥರ ಮೂಲಭೂತ ಸಮಸ್ಯೆಗಳ ಬಗ್ಗೆ ಪಿಡಿಒ ಅವರು ಸ್ಥಳದಲ್ಲಿ ಅಲಿಸಿದರು. ಕುಡಿಯುವ ನೀರು ಸರಬರಾಜು ಮಾಡುವ ವಿಚಾರದಲ್ಲಿ ಸಕಾರಾತ್ಮಕ ಸ್ಪಂದಿಸುವ ಮೂಲಕ ಮೂಲಭೂತ ಸೌಕರ್ಯ ಕಲ್ಪಿಸಲು ಭರವಸೆ ನೀಡಿದರು.ಗ್ರಾಮ ಸಭೆ ಅತ್ಯಂತ ಶಾಂತಿಯುತವಾಗಿ ನಡೆಸಲಾಯಿತು. ಗ್ರಾಮ ಸಭೆಯ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯತ್ ಸದ್ಯಸರಾದ ಜಿ. ಎಲ್ ಆನಂದ ಅವರು ವಹಿಸಿದ್ದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಜಂಬಣ್ಣ,ಸದಸ್ಯರಾದ ಸುಭಾಷ ಗೌಡ,ರವಿ,ಜನಾರ್ಧನ ಸೇರಿದಂತೆ ಗ್ರಾಮಸ್ಥರು ಅನೇಕರು ಉಪಸ್ಥಿತರಿದ್ದರು.

### ರಾಯಚೂರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ವಿಶೇಷ ಕಾರ್ಯಕ್ರಮ

# ಬೇಡವಾದ ಎರಡು ಕಂದಮ್ಮಗಳಿಗೆ ಸಂಭ್ರಮದಿಂದ ಶಾಸ್ತ್ರೋಕ್ತವಾಗಿ ನಾಮಕರಣ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 06 (ಕರ್ನಾಟಕ ವಾರ್ತೆ): ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳ ಸಹಯೋಗದಲ್ಲಿ ಸರ್ಕಾರಿ ದತ್ತು ಸಂಸ್ಥೆಯ ಎರಡು ಕಂದಮ್ಮಗಳಿಗೆ ನಾಮಕರಣ ಕಾರ್ಯಕ್ರಮವು ನವೆಂಬರ್ 06ರಂದು ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು. ಎರಡು ತಿಂಗಳ ಹಿಂದೆ ಕಲ್ಮಲ ಗ್ರಾಮದ ಹತ್ತಿರ ರಸ್ತೆ ಪಕ್ಕದಲ್ಲಿ ಸಿಕ್ಕಿದ್ದ ಪರಿತ್ಯಕ್ತ ಗಂಡು ಮಗುವನ್ನು ಹಾಗೂ ದೇವದುರ್ಗ ತಾಲೂಕಿನ ಗೋಪಾಲಪುರ ಗ್ರಾಮದ ಹತ್ತಿರ ಸಿಕ್ಕಿದ್ದ ಪರಿತ್ಯಕ್ತ ಹೆಣ್ಣು ಹೆಣ್ಣು ಮಗುವನ್ನು ಸಾರ್ವಜನಿಕರ ಸಹಕಾರದಿಂದ ರಕ್ಷಿಸಿ ಸದ್ಯಕ್ಕೆ ಸರ್ಕಾರಿ ದತ್ತು ಸ್ವೀಕಾರ ಕೇಂದ್ರದಲ್ಲಿ ಮಕ್ಕಳು ಪಾಲನೆ ಮತ್ತು ಪೋಷಣೆ ಮಾಡಲಾಗುತ್ತಿದ್ದು, ಈ ಎರಡು ಮಕ್ಕಳಿಗೆ ನಾಮಕರಣ ಕಾರ್ಯಕ್ರಮವನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಕ್ಕಳ ಪಾಲನಾ ಕೇಂದ್ರಗಳ ಅಧೀಕ್ಷಕರು ಮತ್ತು ಸಿಬ್ಬಂದಿ ಅತ್ಯಂತ ಸಂಭ್ರಮದಿಂದ ನೆರವೇರಿಸಿದರು.ಎಲ್ಲಾ ಸಿಬ್ಬಂದಿಯು ತಮ್ಮ ಮನೆಯ ಕಾರ್ಯಕ್ರಮದಂತೆ ಹಬ್ಬದ ರೀತಿಯಲ್ಲಿ ಹೊಸ ಉಡುಗೆ ಧರಿಸಿ ಆಗಮಿಸಿದ್ದರು. ದತ್ತು ಕೇಂದ್ರವನ್ನು ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು. ಸಿಬ್ಬಂದಿಯು ನಾಮಕರಣದ ಹಾಡುಗಳನ್ನು ಹೇಳಿದರು.ಈ ವೇಳೆ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ ಅವರು ಮಕ್ಕಳಿಗೆ ನಾಮಕರಣ ಮಾಡಿದರು. ಯಾರೇ ಸಾರ್ವಜನಿಕರು ಮಕ್ಕಳು ತಮಗೆ ಬೇಡವದಲ್ಲಿ ಅಂತ ಮಕ್ಕಳನ್ನು ಮಕ್ಕಳ ಸಹಾಯವಾಣಿ 1098 ಗೆ ಕರೆ ಮಾಡುವ ಮೂಲಕ ಅಥವಾ ಮಕ್ಕಳನ್ನು ಮಮತೆಯ ತೊಟ್ಟಿಲಿಗೆ ಹಾಕುವ ಮೂಲಕ ಮಕ್ಕಳನ್ನು ದತ್ತು ಸಂಸ್ಥೆಗೆ ಒಪ್ಪಿಸಬೇಕು. ಯಾವುದೇ ಕಾರಣಕ್ಕೂ ಮಕ್ಕಳನ್ನು ಬಿಸಾಡಬಾರದು ಎಂದು ಸಾರ್ವಜನಿಕರಿಗೆ ಸಲಹೆ ಮಾಡಿದರು.ಮತ್ತು ಮಕ್ಕಳನ್ನು ಕಾನೂನು ಪ್ರಕಾರ ಮಾತ್ರ ದತ್ತು ಪಡೆಯಬೇಕು. ಮಕ್ಕಳ ಅಕ್ರಮ ಮಾರಾಟ ಮತ್ತು ಅಕ್ರಮವಾಗಿ ದತ್ತು ಪಡೆಯುವದು ಕಾನೂನು ಬಾಹಿರ ಅಪರಾಧವಾಗಿದ್ದು ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸುದರ್ಶನ ಹಾಗೂ ನಿಕಟಪೂರ್ವ ಅಧ್ಯಕ್ಷರಾದ ಮಂಗಳಾ ಹೆಗಡೆ ಹಾಗೂ ಸದಸ್ಯರು ಹಾಗೂ ಬಾಲಕಿಯರ ಬಾಲಮಂದಿರದ ಅಧೀಕ್ಷಕಿ ಭಾರತಿ ನಾಯಕ, ರಾಧಾಬಾಯಿ, ಬಾಲಕರ ಬಾಲ ಮಂದಿರದ ಅಧೀಕ್ಷಕ ನಾಗರಾಜ್, ಶೇಖ್ ಮಾಹೇಬೂಬ್ ಹಾಗೂ ಸಿಬ್ಬಂದಿ ಇದ್ದರು.

# ದೇವದುರ್ಗದಲ್ಲಿ ಕಿರುಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ದೇವದುರ್ಗ:ಕೇಂದ್ರಸರ್ಕಾರದ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ (ಕಬ ಖಗಿಂಓಜ಼ು) ಯೋಜನೆ ವಿಸ್ತರಿಸಲ್ಪಟ್ಟಿದ್ದು, ದೇವದುರ್ಗ ನಗರ ಹಾಗೂ ಮಾನ್ವಿ ಪ್ರದೇಶದ ಬೀದಿ ಬದಿ ವ್ಯಾಪಾರಿಗಳು ಮತ್ತು ಸಣ್ಣ ಪುಟ್ಟ ಉದ್ಯಮಿಗಳು ಅರ್ಜಿ ಸಲ್ಲಿಸಬಹುದು ಎಂದು ಪುರಸಭೆಯ ಮುಖ್ಯಾಧಿಕಾರಿ ಕೆ. ಹಂಪಯ್ಯ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಅವರು ತಿಳಿಸಿದಂತೆ, ಮಾರುಕಟ್ಟೆ ಪ್ರದೇಶ, ರಸ್ತೆ ಪಕ್ಕ, ನೆಲದ ಮೇಲೆ ವ್ಯಾಪಾರ ಮಾಡುವವರು, ತಳ್ಳುಬಂಡಿ, ಹೊತ್ತುಕೊಂಡು ಮಾರಾಟ ಮಾಡುವವರು ಹಾಗೂ ಹೊಸದಾಗಿ ಬೀದಿ ವ್ಯಾಪಾರ ಆರಂಭಿಸುವವರು ಈ ವಿಶೇಷ ಕಿರುಸಾಲಕ್ಕೆ ಅರ್ಹರಾಗಿರುತ್ತಾರೆ.

ಯೋಜನೆಯಡಿ:

– ಮೊದಲ ಹಂತದಲ್ಲಿ 15 ಸಾವಿರ ರೂ.
– ದ್ವಿತೀಯ ಹಂತದಲ್ಲಿ 25 ಸಾವಿರ ರೂ.
– ತೃತೀಯ ಹಂತದಲ್ಲಿ 50 ಸಾವಿರ ರೂ.

ಇವುಗಳನ್ನು ಬ್ಯಾಂಕುಗಳ ಮೂಲಕ ನೀಡಲಾಗುತ್ತದೆ.

ಅರ್ಜಿಗೆ ಅಗತ್ಯ ದಾಖಲೆಗಳು: ಗುರುತಿನ ಚೀಟಿ, ರೇಷನ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ವೈಯಕ್ತಿಕ ಭಾವಚಿತ್ರ, ಕುಟುಂಬದ ಫೋಟೋ, ವ್ಯಾಪಾರದ ಫೋಟೋ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸೇರಿದಂತೆ ಇತರ ಅಗತ್ಯ ದಾಖಲೆಗಳು.

ಸಾಲ ಪಡೆದು ನಿಗದಿತ ಅವಧಿಯಲ್ಲಿ ಕಂತುಗಳನ್ನು ಪಾವತಿಸಿದಲ್ಲಿ ಬಡ್ಡಿ ಸಹಾಯಧನ ಹಾಗೂ ಡಿಜಿಟಲ್ ಪಾವತಿ ಮಾಡುವವರಿಗೆ ಕ್ಯಾಶ್‌ಬ್ಯಾಕ್ ಪ್ರಯೋಜನಗಳು ದೊರಕಲಿವೆ. ಎರಡನೇ ಹಂತದ ಸಾಲವನ್ನು ಸರಿಯಾಗಿ ಮರುಪಾವತಿಸಿದ ನಂತರ 30 ಸಾವಿರ ರೂ.ಗಳವರೆಗೆ ಕ್ರೆಡಿಟ್ ಮಿತಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಡೇ–ನಲ್ಮ್ ಶಾಖೆಯ ಸಮುದಾಯ ಸಂಘಟನಾಧಿಕಾರಿ ತಿಮ್ಮಪ್ಪ ಜಗಲಿ ಅವರನ್ನು ಸಂಪರ್ಕಿಸಲು ಮುಖ್ಯಾಧಿಕಾರಿ ತಿಳಿಸಿದ್ದಾರೆ.

# ಸಚಿವರಾದ ಎನ್.ಎಸ್.ಬೋಸರಾಜು ರಾಯಚೂರು ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 06 (ಕರ್ನಾಟಕ ವಾರ್ತೆ): ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ನವೆಂಬರ್ 7 ಹಾಗೂ 8 ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನವೆಂಬರ್ 7ರ ಬೆಳಿಗ್ಗೆ 11.30ಕ್ಕೆ ಜಿಲ್ಲೆಯ ಮಾನವಿ ತಾಲೂಕಿನ ಸುಕ್ಷೇತ್ರ ಕರೆಗುಡ್ಡದ ಶ್ರೀಮಹಾಂತೇಶ್ವರ ಸಂಸ್ಥಾನ ಮಠದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.

ಮಧ್ಯಾಹ್ನ 1.15ಕ್ಕೆ ಮಾನವಿ ಶಾಸಕರೊಂದಿಗೆ ಮಾನವಿ ವಿಧಾನಸಭಾ ಕ್ಷೇತ್ರದ ಬಾಗಲವಾಡ ಮತ್ತು ನಡುಗಡ್ಡೆ ಕ್ಯಾಂಪ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಹಾಗೂ ಉದ್ಘಾಟನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.

ಮಧ್ಯಾಹ್ನ 3 ಗಂಟೆಗೆ ರಾಜ್ಯ ಹೆದ್ದಾರಿ–128ಕ್ಕೆ ಸೇರುವ ಕರೇಗುಡ್ಡ ಕ್ರಾಸ್‌ನಿಂದ 76 ವಿತರಣಾ ಕಾಲುವೆಯವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮಾನವಿ ಶಾಸಕರೊಂದಿಗೆ ಭಾಗಿಯಾಗಿಯಾಗುವರು.

ಸಂಜೆ 4 ಗಂಟೆಗೆ ಮಾನವಿ ಶಾಸಕರೊಂದಿಗೆ ಮಾನವಿ ಪಟ್ಟಣದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ಹಾಗೂ ಉದ್ಘಾಟನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಸಂಜೆ 6 ಗಂಟೆಗೆ ರಾಯಚೂರಿನ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ.

ನವೆಂಬರ್ 8ರ ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿರುವ ಸಂತಕವಿ ಶ್ರೀ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವವರು. ಬೆಳಿಗ್ಗೆ 11 ಗಂಟೆಗೆ ಅತ್ತನೂರು–ಮಾನವಿ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ–127, ಯರಗೇರಾ (ಅತ್ತನೂರು ಬೊಮ್ಮನಾಳ) ರಸ್ತೆಯವರೆಗೆ ಮರುಡಾಂಬರೀಕರಣ ಕಾಮಗಾರಿಗೆ ಭೂಮಿಪೂಜೆಯಲ್ಲಿ ಭಾಗಿಯಾಗುವರು. ಬೆಳಿಗ್ಗೆ 11.30ಕ್ಕೆ ಮಾನವಿ ವಿಧಾನಸಭಾ ಕ್ಷೇತ್ರದ ಸಿರವಾರ ಪಟ್ಟಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ಹಾಗೂ ಉದ್ಘಾಟನೆ ಕಾರ್ಯಕ್ರಮಗಳಲ್ಲಿ ಮಾನವಿ ಶಾಸಕರೊಂದಿಗೆ ಭಾಗಿಯಾಗುವರು. ಮಧ್ಯಾಹ್ನ 1 ಗಂಟೆಗೆ ಕವಿತಾಳ ಪಟ್ಟಣದ 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವನ್ನು 50 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಹಾಗೂ ಮಾನವಿ ವಿಧಾನಸಭಾ ಕ್ಷೇತ್ರದ ರಾಜ್ಯ ಹೆದ್ದಾರಿ–20 ಕವಿತಾಳದಿಂದ ಬಸ್ಸಾಪೂರುವರೆಗೆ ರಸ್ತೆ ಡಾಂಬರೀಕರಣ ಕಾಮಗಾರಿಗೆ ಭೂಮಿಪೂಜೆ ಕಾರ್ಯಕ್ರಮಗಳಲ್ಲಿ ಮಾನವಿ ಶಾಸಕರೊಂದಿಗೆ ಭಾಗವಹಿಸುವರು.

ಬಳಿಕ ಪೋತ್ನಾಳ, ಸಿಂಧನೂರು ಹಾಗೂ ಗಂಗಾವತಿ ಮಾರ್ಗವಾಗಿ ಹೊಸಪೇಟೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬುಡ್ಗ ಜಂಗಮ ಸಮುದಾಯದ ಜನರಿಗೆ ಮೂಲಭೂತ ಸೌಕರ್ಯ ಒದಗಿಸಲು ಆಗ್ರಹ




ರಾಯಚೂರು,ನ.6–ಅಲೆಮಾರಿ ಜನಾಂಗದ ಬುಡ್ಗ ಜಂಗಮ ಸಮುದಾಯದವರಿಗೆ ಅಗತ್ಯ ಮೂಲಭೂತ ಸೌಕರ್ಯ ಕುಡಿಯುವ ನೀರು ರಸ್ತೆ ಸೇರಿ ಇನ್ನಿತರ ಮೂಲಭೂತ ಸೌಲಭ್ಯ ಒದಗಿಸಬೇಕು ಎಂದು ಆಗ್ರಹಿಸಿ ಎಐಡಿವೈಒ ಮುಖಂಡರು ಇಂದು ತಹಸೀಲ್ದಾರ್ ಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ. ತಾಲೂಕಿನ ಮಮದಾಪುರ ಗ್ರಾಮಕ್ಕೆ ಹೊಂದಿಕೊಂಡಿರುವ ಹೊಸೂರು ಗ್ರಾಮದ ಸೀಮಾಂತರ ವ್ಯಾಪ್ತಿಗೆ ಒಳಪಟ್ಟ ಸಿ.ಎನ್ ಕಾಲೋನಿಯ ಪ್ರದೇಶದಲ್ಲಿ ವಾಸಿಸುತ್ತಿರುವ ಬುಡ್ಗ ಜಂಗಮ ಅಲೆಮಾರಿ ಜನರು ಅನೇಕ ವರ್ಷಗಳಿಂದ ಮೂಲಭೂತ ಸೌಕರ್ಯದಿಂದ ವಂಚಿತರಾಗಿದ್ದು,ಕೂಡಲೇ ಮೂಲಭೂತ ಸೌಕರ್ಯಗಳನ್ನು ಒದಗಸಬೇಕು ಎಂದು ಆಗ್ರಹಿಸಲಾಯಿತು.ಕಳೆದ ಐದಾರು ವರ್ಷಗಳಿಂದ ಈ ಪ್ರದೇಶದಲ್ಲಿ ನೆಲೆಸಿದ್ದೇವೆ.ಇಂದಿಗೂ ಸರ್ಕಾರದಿಂದ ದೊರೆಯಬೇಕಾದ ಮೂಲಭೂತ ನಾಗರಿಕ ಸೌಲಭ್ಯಗಳು ದೊರೆತಿಲ್ಲ. ಸದಸ್ಯರೆಲ್ಲರೂ ಒಂದುಗೂಡಿ ಹೇಗೋ ಕಷ್ಟಪಟ್ಟು ದುಡಿದು ಸಾಲ ಮಾಡಿಕೊಂಡು ಒದಷ್ಟು ನೆಲೆ ಕಂಡುಕೊಳ್ಳಲು ಬದುಕಲು ಜಾಗ ಮಾಡಿಕೊಂಡಿದ್ದಾರೆ. ಆ ಜಾಗದಲ್ಲಿ ಗುಡಿಸಲು ಅಥವಾ ಶೆಡ್ಗಳನ್ನು ನಿರ್ಮಾಣ ಮಾಡಿಕೊಂಡು ಜೀವನ ನಿರ್ವಹಿಸುತ್ತಿದ್ದಾರೆ.ಆದರೆ ಶುದ್ಧ ಕುಡಿಯುವ ನೀರು, ವಿದ್ಯುತ್, ರಸ್ತೆ, ಆರೋಗ್ಯ ಸೌಲಭ್ಯಗಳು, ಶಿಕ್ಷಣದ ಸೌಲಭ್ಯಗಳು ಸೇರಿದಂತೆ ಅಗತ್ಯ ಸೌಲಭ್ಯಗಳು ಇಲ್ಲದೇ ವಂಚಿತರಾಗಿದ್ದಾರೆ.ಸರ್ಕಾರವು ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗಗಳ ಪುನರ್ವಸತಿ ಮತ್ತು ಅಭಿವೃದ್ಧಿಗೆ ವಿವಿಧ ಯೋಜನೆಗಳನ್ನು ರೂಪಿಸಿದೆ. ಈ ಮನವಿಯನ್ನು ಅತ್ಯಂತ ಸಹಾನುಭೂತಿಯಿಂದ ಪರಿಗಣಿಸಿ, ನಮ್ಮ ಅಲೆಮಾರಿ ಸಮುದಾಯದವರಿಗೆ ಯೋಜನೆ ಅಡಿಯಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಲು ಶೀಘ್ರದಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು.ವಾಸಿಸುವ ಸ್ಥಳವನ್ನು ಪಂಚಾಯಿತಿ ವ್ಯಾಪ್ತಿ ಅಥವಾ ಮಹಾನಗರ ಪಾಲಿಕೆಯ ವ್ಯಾಪ್ತಿಗೆ ತಂದು ನಾಗರಿಕ ಸೌಲಭ್ಯಗಳನ್ನು ನೀಡಬೇಕು. ಕೂಡಲೇ ಕುಡಿಯುವ ನೀರು ಮತ್ತು ರಸ್ತೆ ಸೌಲಭ್ಯ ಕಲ್ಪಿಸಬೇಕು. ವಿದ್ಯುತ್ ಕಂಬಗಳನ್ನು ಹಾಕಿ ಮನೆ ಮನೆಗೂ ವಿದ್ಯುತ್ ಸೌಕರ್ಯ ಒದಗಿಸಲು ಕ್ರಮಕೈಗೊಳ್ಳಬೇಕು.ಮಕ್ಕಳಿಗೆ ಉಚಿತ ಶಿಕ್ಷಣ ಮತ್ತು ವಿದ್ಯಾರ್ಥಿವೇತನ ಸೌಲಭ್ಯ ಒದಗಿಸಬೇಕು. ಹಿರಿಯರಿಗೆ ಪಿಂಚಣಿ ಹಾಗೂ ಆರೋಗ್ಯ ಸೌಲಭ್ಯ ನೀಡಬೇಕು.

ಈ ಸಂದರ್ಭದಲ್ಲಿ ಚನ್ನಬಸವ ಜಾನೇಕಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶ್ರೀ ಸಾಯಿ ವಂಶಿ ಡಾನ್ಸ್ ಅಕಾಡೆಮಿಯಿಂದ ಮಕ್ಕಳಿಗೆ ನ.9ರಂದು ನೃತ್ಯ ಸ್ಪರ್ಧೆ–ಅಮರೇಗೌಡ



ರಾಯಚೂರು.ನ.6–ನಗರದ ಶ್ರೀ ಸಾಯಿ ವಂಶಿ ಡಾನ್ಸ್ ಆಕಾಡೆಮಿ ವತಿಯಿಂದ ಮಕ್ಕಳಿಗೆ ನ.9 ರಂದು ನೃತ್ಯ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಕಲಾವಿದ ಅಮರೇಗೌಡ ಹೇಳಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,

ಅಂದು ಪಂ.ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಸಂಜೆ 6 ಗಂಟೆಗೆ ಮಕ್ಕಳ ನೃತ್ಯಸ್ಪರ್ಧೆ ಏರ್ಪಡಿಸಲಾಗಿದೆ ಎಂದರು.ಸುಮಾರು 20 ವರ್ಷಗಳಿಂದ ನಗರದ ಮಕ್ಕಳಿಗೆ ನೃತ್ಯ ಕಲಿಸಿ ಮಕ್ಕಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಬೆಳೆಯುವಂತೆ ಕಾರ್ಯವನ್ನು ಸಂಸ್ಥೆ ಮಾಡುತ್ತಿದೆ. ಸಂಸ್ಥೆಯ ಅಧ್ಯಕ್ಷ ನಾಗೇಂದ್ರ (ವಂಶಿ) 2006ರಲ್ಲಿ ಜೆಮಿನಿ ಟ.ವಿ.ಯಲ್ಲಿ ಮತ್ತು 2008

ಈ ಟಿ.ವಿ.ಕನ್ನಡದಲ್ಲಿ ಬರುತ್ತಿದ್ದ ದಿ, ಕರ್ನಾಟಕ ಡ್ಯಾನ್ಸ್ ಲಿಗ್ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಇವರು ರನ್ನರ್ ಆಫ್ ಆಗಿದ್ದರು.2015 ರಲ್ಲಿ ಸಂಸ್ಥೆಯ ವಿದ್ಯಾರ್ಥಿ ವೇಣು ಪುನಿತ್ ರಾಜಕುಮಾರ ನಡೆಸುತ್ತಿದ್ದ 78ಪಿ ಡ್ಯಾನ್ಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. 2016 ರಲ್ಲಿ ರಕ್ಷಾ ಈ ಟಿವಿ ತೆಲಗು ಚಾನಲ್‌ನಲ್ಲಿ ಸೆಮಿಫೈನಲ್‌ವರೆಗೆ ಹೋಗಿದ್ದರು. ಸಂಸ್ಥೆಯ ವಾರ್ಷಿಕೋತ್ಸವದ ಅಂಗವಾಗಿ ಈ ಸ್ಪರ್ಧೆಯನ್ನು ಏರ್ಪಡಿಲಾಗಿದೆ ಎಂದರು.

ಸ್ಪರ್ಧೆಯಲ್ಲಿ ಕಲಾಕರರಾದ ಮಕ್ಕಳು ಭಾಗವಹಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ನಾಗೇಂದ್ರವಂಶಿ,ವೆಂಕಟೇಶ ಕೋಲಾರ,ಚಿನ್ನಿ ಕಲಾವಿದ,ಪ್ರವೀಣ ಉಪನ್ಯಾಸಕ, ರಾಮು, ವಿರೇಶ ತಲ್ವಾರ್ ಉಪಸ್ಥಿತರಿದ್ದರು.

# ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 06 (ಕರ್ನಾಟಕ ವಾರ್ತೆ): ಕರ್ನಾಟಕ ಮಿದುಳಿನ ಆರೋಗ್ಯ ಉಪಕ್ರಮ (ಕೆ.ಎ.ಬಿ.ಹೆಚ್.ಐ) ಕಾರ್ಯಕ್ರಮದಡಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ಎರಡು ವಿವಿಧ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ಪೀಚ್ ಥೆರಪಿಸ್ಟ್ (ಸ್ಪೀಚ್ ಲ್ಯಾಂಗ್ವೇಜ್ ಪ್ಯಾಥಾಲೋಜಿಸ್ಟ್) 01 ಹುದ್ದೆಗೆ ಬ್ಯಾಚುಲರ್ ಇನ್ ಆಡಿಯೋಲಾಜಿ ಮತ್ತು ಸ್ಪೀಚ್ ಲ್ಯಾಂಗ್ವೇಜ್ ಪ್ಯಾಥಾಲೋಜಿ ವಿದ್ಯಾರ್ಹತೆ ಹೊಂದಿರಬೇಕು. ಅಲ್ಲದೆ ಅರ್ಜಿದಾರರು ಸರಳವಾಗಿ ಕನ್ನಡ ಭಾಷೆಯನ್ನು ಓದುವುದು, ಬರೆಯುವುದು ಮತ್ತು ಮಾತನಾಡಬೇಕು. ನ್ಯೂರಾಲಾಜಿಕಲ್ ಡಿಸ್ ಆರ್ಡರ್ ರೋಗಿಗಳ ಮೌಲ್ಯಮಾಪನ ಹಾಗೂ ಸಮಾಲೋಚನೆಯಲ್ಲಿ ಒಂದು ವರ್ಷದ ಅನುಭವ ಇರುವ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ವಯೋಮಿತಿ 45 ವರ್ಷದೊಳಗಿರಬೇಕು. 30 ಸಾವಿರ ರೂ.ಗಳ ಮಾಸಿಕ ಸಂಭಾವನೆ ನೀಡಲಾಗುವುದು.

ಹಾಗೂ ಅರ್ಜಿದಾರರು ಸರಳವಾಗಿ ಕನ್ನಡ ಭಾಷೆಯನ್ನು ಓದುವುದು, ಬರೆಯುವುದು ಮತ್ತು ಮಾತನಾಡಬೇಕು. ನ್ಯೂರಾಲಾಜಿಕಲ್ ಡಿಸ್ ಆರ್ಡರ್ ರೋಗಿಗಳ ಮೌಲ್ಯಮಾಪನ ಹಾಗೂ ಸಮಾಲೋಚನೆಯಲ್ಲಿ ಒಂದು ವರ್ಷದ ಅನುಭವ ಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು 45 ವರ್ಷದೊಳಗಿರಬೇಕು. 26,250 ರೂ.ಗಳನ್ನು ಮಾಸಿಕ ಸಂಭಾವನೆ ನೀಡಲಾಗುವುದು.

ಈ ಎರಡು ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ನವೆಂಬರ್ 12ರ ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಗಳ ಕಚೇರಿ, ಜಿಲ್ಲಾ ಕುಷ್ಠರೋಗ ನಿವಾರಣ ಅಧಿಕಾರಿಗಳ ಕಾರ್ಯಾಲಯ ವಿಭಾಗ ರಾಯಚೂರು ಇಲ್ಲಿ ನೇರ ಸಂದರ್ಶನ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕ ಮಾಡಬಹುದಾಗಿದೆ. ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 06 (ಕರ್ನಾಟಕ ವಾರ್ತೆ): ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ನವೆಂಬರ್ 15 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಇಲಾಖೆಯಿಂದ ಆಧಾರ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಚಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ–ಸಲಕರಣೆ ಯೋಜನೆ ಹಾಗೂ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಯಡಿ ಸೌಲಭ್ಯ ಒದಗಿಸಲಾಗುತ್ತಿದ್ದು, ಆಸಕ್ತರು ಅರ್ಜಿಯನ್ನು ನವೆಂಬರ್ 15ರೊಳಗಾಗಿ ಫಲಾನುಭವಿಗಳು ಆನ್‌ಲೈನ್ ಸೇವಾ–ಸಿಂಧು ತಂತ್ರಾಂಶದಡಿ ಮೂಲಕ ಗ್ರಾಮ–ಓನ್, ಕರ್ನಾಟಕ–ಓನ್, ಬೆಂಗಳೂರು–ಓನ್ ವಿಳಾಸÀ:https//sevasindhanur.karnatak.gov.insevasindhu/Kannadaನಲ್ಲಿ ಸಲ್ಲಿಸಬಹುದಾಗಿದೆ.

# ವಿಕಲಚೇತನರ ಕ್ಷೇತ್ರದಲ್ಲಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ನವೆಂಬರ್ 10 ಕೊನೆಯ ದಿನ

ರಾಯಚೂರು ನವೆಂಬರ್ 06 (ಕರ್ನಾಟಕ ವಾರ್ತೆ): ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2025ನೇ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧನೆ ಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ ಶಿಕ್ಷಕರಿಗೆ ರಾಜ್ಯ ಪ್ರಶಸಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ನವೆಂಬರ್ 10 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಅರ್ಜಿ ನಮೂನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಆಜಾದ ನಗರ, ರಾಯಚೂರು ಇವರ ಕಚೇರಿ ದೂರವಾಣಿ ಸಂಖ್ಯೆ:–08532–200992 ಇಲ್ಲಿ ಪಡೆಯಬಹುದಾಗಿದೆ. ತಡವಾಗಿ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.08 ರಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಬಳ್ಳಾರಿಗೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.06 ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ನವೆಂಬರ್ 08 ರಂದು ಬಳ್ಳಾರಿಗೆ ಆಗಮಿಸಲಿದ್ದಾರೆ.

ಅಂದು ಬೆಳಿಗ್ಗೆ 09 ಗಂಟೆಗೆ ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ 10 ಗಂಟೆಗೆ ತೋರಣಗಲ್ಲಿನ ಜಿಂದಾಲ್ ಏರ್‌ಸ್ಟ್ರಿಪ್ ಗೆ ಆಗಮಿಸುವರು.

ಅಲ್ಲಿಂದ ಬೆಳಿಗ್ಗೆ 10.15 ಕ್ಕೆ ಹೊರಟು, ಬೆಳಿಗ್ಗೆ 11 ಗಂಟೆಗೆ ಕೃಷಿ ಇಲಾಖೆ ವತಿಯಿಂದ ಬಳ್ಳಾರಿ ನಗರದ ಹಳೆಯ ತಾಲ್ಲೂಕು ಕಚೇರಿಯ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಕೃಷಿಕ ಸಮಾಜ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಮಧ್ಯಾಹ್ನ 12 ಗಂಟೆಗೆ ಬಳ್ಳಾರಿಯಿಂದ ತೋರಣಗಲ್ಲಿನ ಜಿಂದಾಲ್ ಏರ್‌ಸ್ಟ್ರಿಪ್ ಗೆ ಆಗಮಿಸಿ, ನಂತರ ಮಧ್ಯಾಹ್ನ 01 ಗಂಟೆಗೆ ವಿಶೇಷ ವಿಮಾನದ ಮೂಲಕ ಕಲಬುರಗಿ ಜಿಲ್ಲೆಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

---

# ಇಂಡಿಯಾ ಮೆರಿಟೈಮ್ ವೀಕ್ 2025ರಲ್ಲಿ ಕರ್ನಾಟಕ ಜಲಸಾರಿಗೆ ಮಂಡಳಿಯಿಂದ ವಿವಿಧ ಒಪ್ಪಂದ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.06: ಇಂಡಿಯಾ ಮೇರಿಟೈಮ್ ವೀಕ್–2025ರ ಸಂದರ್ಭದಲ್ಲಿ ಮುಂಬೈನಲ್ಲಿ ಇತ್ತೀಚೆಗೆ ನಡೆದ ರಾಜ್ಯ ಅಧಿವೇಶನವನ್ನು ಕರ್ನಾಟಕ ಯಶಸ್ವಿಯಾಗಿ ಪೂರ್ಣಗೊಳಿಸಿ ಕರ್ನಾಟಕ ರಾಜ್ಯ ಜಲಸಾರಿಗೆ ಮಂಡಳಿಯು ವಿವಿಧ ಒಪ್ಪಂದ ಮಾಡಿಕೊಂಡಿದೆ.

ಇಂಡಿಯಾ ಮೇರಿಟೈಮ್ ವೀಕ್ ದೇಶದ ಅಗ್ರಮಟ್ಟದ ಜಾಗತಿಕ ವೇದಿಕೆ ಆಗಿದ್ದು, ಭಾರತವನ್ನು ಜಾಗತಿಕ ಸಾಗರ ಜಲಸಾರಿಗೆಯ ಕೇಂದ್ರವಾಗಿ ಮತ್ತು ಬ್ಲೂ ಎಕಾನಮಿ ಕ್ಷೇತ್ರದಲ್ಲಿ ಮುಂಚೂಣಿಯ ರಾಷ್ಟ್ರವನ್ನಾಗಿ ರೂಪಿಸುವ ದಿಶೆಯ ಮುನ್ನೋಟವನ್ನು ಅಧಿವೇಶನದಲ್ಲಿ ಪ್ರದರ್ಶಿಸಲಾಯಿತು. ರಾಜ್ಯ ಸರ್ಕಾರದ ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಮಂಕಾಳ ಎಸ್.ವೈದ್ಯ ಅವರು ಅಧಿವೇಶನದ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕದ ರಾಜ್ಯ ಅಧಿವೇಶನವು 'ಸುಸ್ಥಿರ ನೀಲಿ ಆರ್ಥಿಕತೆಗಾಗಿ ಪಿಪಿಪಿ ಸಿನರ್ಜಿಗಳನ್ನು ಅನ್ವೇಷಿಸುವುದು' (Exploring PPP Synergies for a Sustainable Blue Economy) ಎಂಬ ವಿಷಯದ ಮೇಲೆ ಕೇಂದ್ರೀಕೃತವಾಗಿತ್ತು. ಈ ಅಧಿವೇಶನವು ಸುಮಾರು 4,500 ಕೋಟಿ ಮೌಲ್ಯದ ಪ್ರಮುಖ ಒಪ್ಪಂದ ಪತ್ರಗಳ ವಿನಿಮಯದೊಂದಿಗೆ ಯಶಸ್ವಿಯಾಗಿ ಮುಕ್ತಾಯವಾಯಿತು. ಸಂಪರ್ಕತೆ ವೃದ್ಧಿ, ಮೂಲಸೌಕರ್ಯ ಅಭಿವೃದ್ಧಿ, ಮತ್ತು ನವೀಕೃತ ಮಾನವ ಸಂಪನ್ಮೂಲ ನಿರ್ಮಾಣಕ್ಕೆ ಕೇಂದ್ರೀಕೃತ ಒಪ್ಪಂದಗಳ ವಿನಿಮಯದ ಪ್ರಮುಖ ಅಂಶಗಳಾಗಿದ್ದವು. ಅದರಲ್ಲಿ ಜೆಎಸ್‌ಡಬ್ಲ್ಯೂ ಇನ್‌ಫ್ರಾ–ಸ್ಟ್ರಕ್ಚರ್ ಲಿಮಿಟೆಡ್ ಕಂಪನಿಯೊಂದಿಗೆ ಕೆನಿಯಲ್ಲಿ ಪಿಪಿಪಿ ಆಧಾರದ ಮೇಲೆ ನಿರ್ಮಿಸಲ್ಪಡುವ ಸರ್ವಋತು ಡೀಪ್ ವಾಟರ್ ಗ್ರೀನ್‌ಫೀಲ್ಡ್ ಬಂದರು ಅಭಿವೃದ್ಧಿಗೆ ಸಂಬಂಧಿಸಿದಂತೆ ರೂ.4,118 ಕೋಟಿ ಮೌಲ್ಯದ ಕನ್ಸೆಶನ್ ಒಪ್ಪಂದ ಮಾಡಿಕೊಳ್ಳಲಾಯಿತು.

ಕೊಂಕಣ ರೈಲ್ವೆ ಕಾರ್ಪೊರೇಶನ್ ಲಿಮಿಟೆಡ್ ಸಂಸ್ಥೆಯೊಂದಿಗೆ ಅಮದಳ್ಳಿ ರೈಲು ಸೈಡಿಂಗ್ ಅಭಿವೃದ್ಧಿಗೆ ಸಂಬಂಧಿಸಿದಂತೆ ರೂ.45.88 ಕೋಟಿ ಮೌಲ್ಯದ ಒಪ್ಪಂದ, ಭಾರತ ಆಂತರಿಕ ಜಲಮಾರ್ಗ ಪ್ರಾಧಿಕಾರದೊಂದಿಗೆ ರಾಜ್ಯದ ರಾಷ್ಟ್ರೀಯ ಜಲಮಾರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ರೂ.300 ಕೋಟಿ ಮೌಲ್ಯದ ಒಪ್ಪಂದ ಮಾಡಿಕೊಳ್ಳಲಾಯಿತು. ನ್ಯಾಷನಲ್ ಇನ್‌ಲ್ಯಾಂಡ್ ನ್ಯಾವಿಗೇಶನ್ ಇನ್ಸ್ಟಿಟ್ಯೂಟ್, ಪಾಟ್ನಾದೊಂದಿಗೆ ಮಂಗಳೂರು ನಗರದಲ್ಲಿ ಇನ್‌ಲ್ಯಾಂಡ್ ವಾಟರ್ ಟ್ರಾನ್ಸ್‌ಪೋರ್ಟ್ ಮತ್ತು ನ್ಯಾವಿಗೇಶನ್‌ನಲ್ಲಿ ಶ್ರೇಷ್ಠತೆ ಕೇಂದ್ರ ಸ್ಥಾಪನೆಗೆ ರೂ.50 ಕೋಟಿ ಮೌಲ್ಯದ ಒಪ್ಪಂದ, ಕರ್ನಾಟಕ ಸರ್ಕಾರದ ಮೀನುಗಾರಿಕೆ ಇಲಾಖೆಯೊಂದಿಗೆ ಬಳ್ಳಾರಿ ಜಿಲ್ಲೆಯಲ್ಲಿ ತಂಪು ಸಂಗ್ರಹಣೆ, ಸಂಸ್ಕರಣಾ ಘಟಕಗಳು ಮತ್ತು ಪರೀಕ್ಷಾ ಪ್ರಯೋಗಾಲಯ ಸ್ಥಾಪನೆ ಸೇರಿದಂತೆ ವಿವಿಧ ಯೋಜನೆಗಳಿಗಾಗಿ ರೂ.12 ಕೋಟಿ ಮೌಲ್ಯದ ಒಪ್ಪಂದ ಮಾಡಿಕೊಂಡು ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಸಮುದ್ರ ಮತ್ತು ಜಲಮಾರ್ಗ ಮಾಸ್ಟರ್ ಪ್ಲಾನ್ ಕುರಿತಾಗಿ ಸುದೀರ್ಘವಾಗಿ ಚರ್ಚಿಸಲಾಯಿತು.

ಈ ಯೋಜನೆ ಒಟ್ಟು ರೂ.23,000 ಕೋಟಿ ಮೌಲ್ಯದ 126 ಯೋಜನೆಗಳನ್ನು ಒಳಗೊಂಡಿದ್ದು, ರಾಜ್ಯದ ಸಮುದ್ರ ಮತ್ತು ಜಲಮಾರ್ಗ ಅಭಿವೃದ್ಧಿಗೆ ಸಮಗ್ರ ದೃಷ್ಟಿಕೋನ ನೀಡಲಿದೆ.

ಈ ಪೈಕಿ ರೂ.7,500 ಕೋಟಿಗೂ ಹೆಚ್ಚು ಮೌಲ್ಯದ 10 ಪ್ರಮುಖ ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಯೋಜನೆಗಳು ತಕ್ಷಣದ ಪ್ರಾರಂಭಕ್ಕೆ ಸಿದ್ಧವಾಗಿವೆ. ಇವುಗಳಲ್ಲಿ ಮಂಗಳೂರು ವಾಟರ್ ಮೆಟ್ರೋ ಮತ್ತು ರಾಜ್ಯದ ಮೊದಲ ಸಮುದ್ರ ಸಂಗ್ರಹಾಲಯವು ಮಂಗಳೂರು ನಗರದಲ್ಲಿ ಸ್ಥಾಪನೆಯಾಗುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಈ ಅಧಿವೇಶನದಲ್ಲಿ ಕರ್ನಾಟಕ ಸರ್ಕಾರದ ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯದರ್ಶಿ ಡಾ.ಮಂಜುಳ ಎನ್., ನ್ಯೂ ಮಂಗಳೂರು ಪೋರ್ಟ್ ಅಥಾರಿಟಿಯ ಅಧ್ಯಕ್ಷ ಡಾ. ಎ.ವಿ.ರಮಣ, ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಾಲಚಂದ್ರ ಹೆಚ್.ಸಿ., ಕರ್ನಾಟಕ ಜಲಸಾರಿಗೆ ಮಂಡಳಿಯ ನಿರ್ದೇಶಕ ದಿವಾಕರ್ ನಾಯಕ್ ಹಾಜರಿದ್ದರು.

# ಎಲ್ಲರೊಂದಿಗೆ ಬೆರೆತು ಬಾಳುವ ವ್ಯಕ್ತಿ ಜಗದೀಶ ಶುಕ್ಲಾ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ನ 6 ಎಲ್ಲರೊಂದಿಗೆ ಬೆರೆತು ಬಾಳುವ ವ್ಯಕ್ತಿ ಜಗದೀಶ ಶುಕ್ಲಾರಾಗಿದ್ದಾರೆ ಎಂದು ಅಲಗೂಡ ಸರಕಾರಿ ಪ್ರೌಢ ಶಾಲೆಯ ಮುಖ್ಯಗುರುಗಳಾದ ರಮೇಶ್ ರಾಜೋಳೆ ಹೇಳಿದರು. ತಾಲೂಕಿನ ಕೋಹಿನೂರ ಪಹಾಡ ಸರ್ಕಾರಿ ಪ್ರೌಢ ಶಾಲೆಯಲ್ಲಿ ಮುಖ್ಯಗುರುಗಳಾಗಿ ಸೇವೆ ಸಲ್ಲಿಸಿ ನಿವೃತ್ತಿರಾದ ಜಗದೀಶ ಶುಕ್ಲಾ ಅವರ ಬಿಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಮುಖ್ಯಗುರುಗಳಾದ ಸದಾನಂದ ಹಂಡರಗಲ. ವಿಜಯಲಕ್ಷ್ಮಿ ಹುಡಗೆ. ಅಲ್ಲದೆ ನಿವೃತ್ತ ಮುಖ್ಯ ಗುರು ತಾಜೋದಿನ್ ಖುರೇಷಿ ಸಹ ಮಾತನಾಡಿ ಜಗದೀಶ ಶುಕ್ಲಾರವರ ಸೇವಾ ಮನೋಭಾವನೆ ಬಗ್ಗೆ ಪ್ರಶಂಸಿಸಿದರು. ಸನ್ಮಾನಗೊಂಡ್ ನಿವೃತ್ತಮುಖ್ಯಗುರು ಜಗದೀಶ ಶುಕ್ಲಾ ಮಾತನಾಡಿ ಎಲ್ಲರ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಿದ ತೃಪ್ತಿ ನನ್ನಗಿದೆ ಸೇವೆಯಲ್ಲಿ ಅಹ್ಂ ಭಾವನೆ ಬರಬಾರದು ತಾಳ್ಮೆಯಿಂದ ಕಾರ್ಯನಿರ್ವಾಹಿಸಿದೇನೆ ಎಂದರು. ಅಧ್ಯಕ್ಷತೆಯನ್ನು ಶಾಲಾ ಪ್ರಭಾರಿ ಮುಖ್ಯಗುರುಗಳಾದ ಅಫಶಾನ್ ನಿಖತ್ ಮಾತನಾಡಿ ಶುಕ್ಲಾ ಸರ ಅವರಿಂದ ನಮಗೆ ಸಾಕಷ್ಟು ಅನುಭವ ಸಿಕ್ಕಿದೆ ಎಂದರು. ಪ್ರೌಢಶಾಲೆ ಎಸ್. ಡಿ. ಎಮ್. ಸಿ. ಅಧ್ಯಕ್ಷರಾದ ಅಸ್ಫಾಕ ಬಾಬಾ. ಪ್ರಾಥಮಿಕ ಶಾಲಾ ಎಸ್. ಡಿ. ಎಮ್. ಸಿ. ಅಧ್ಯಕ್ಷರಾದ ಅಲ್ಲಿಮೊದಿನ್. ಮುಖ್ಯ ಗುರುಗಳಾದ ಅಬ್ದುಲ್ ರಬ್ ಸೇರಿದಂತೆ ಸುತ್ತಮುತ್ತಲಿನ ಶಾಲೆಯ ಮುಖ್ಯ ಗುರುಗಳು. ಶಾಲಾ ಸಮಿತಿಯ ಸದಸ್ಯರು. ಗ್ರಾ. ಪಂ. ಸದಸ್ಯರು.

ಶಿಕ್ಷಕ ಸಿಬ್ಬಂದಿ ವರ್ಗ. ಅಭಿಮಾನಿಗಳು. ಮಕ್ಕಳು ಸೇರಿದಂತೆ ಅನೇಕರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಶಿಕ್ಷಕರಾದ ನಾಗಪ್ಪಾ ನಿಣ್ಣೆಯವರಿಗೆ ವಿಶೇಷ ಸನ್ಮಾನಿಸಲಾಯಿತು

. ಪ್ರಾಸ್ತಾವಿಕ ಮಾತುಗಳನ್ನು ಶಿಕ್ಷಕ ರೇವಣಸಿದ್ದಪ್ಪ ಹೊಳಿಕೇರಿ ಪ್ರಾಮಾಣಿಕ ನಿಷ್ಠೆಯಿಂದ ಶುಕ್ಲಾ ಸರ ಸೇವೆಸಲಿಸಿದ್ದಾರೆ ಎಂದರು. ಸ್ವಾಗತ ಶಿಕ್ಷಕರಾದ ಸಂಗಮೇಶ ಮಹಾಜನ್ ಸಂಚಾಲನೆ ಶಿಕ್ಷಕಿ ಬದುಣಟಿಜಜಜುಟಿಜಜನ್ನಿಸ್ ಬೇಗಂ. ಶಿಕ್ಷಕಿ ಅಫಶಾನ್ ರಾಹತ್ ವಂದಿಸಿದರು.

# ಗುರುನಾನಕ ದೇವ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಸಿಖ್ ಧರ್ಮದ ಸಂಸ್ಥಾಪಕ ಗುರುನಾನಕ ದೇವ ಅವರ 556ನೇ ಜಯಂತಿಯನ್ನು ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ಶ್ರದ್ಧಾ ಭಕ್ತಿ ಹಾಗೂ ಸಡಗರದಿಂದ ಆಚರಿಸಲಾಯಿತು.

ಶಾಲೆಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಅವರು ಗುರುನಾನಕ ದೇವಜೀ ಅವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಮಾಲಾರ್ಪಣೆ ಮಾಡುವ ಮೂಲಕ ಗೌರವಿಸಿದ ನಂತರ ಮಾತನಾಡಿದರು.

ವಿಜ್ಞಾನ ಹೆಓಡಿ ಶೀತಲ ಹಂಗರಗೆ ಅವರು ಗುರುಗ್ರಂಥ ಸಾಹಿಬ್ ಪಠಣ ಮಹತ್ವ ಕುರಿತು ಸವಿಸ್ತಾರವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ರಾಜವೀರ ಸಿಂಗ್, ಪ್ರಥ್ವಿರಾಜ ಸಿಂಗ್, ಶಿಕ್ಷಕಿ ಶ್ರೀದೇವಿ ಸೋನಕಾಂಬಳೆ, ಸಂಗೀತಾ ಕಾಂಬಳೆ, ರಾಜಶ್ರೀ, ದೀಪಮಾಲಾ, ಅಂಬಿಕಾ, ಅಂಜಲಿ ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

# ಕಳಪೆ ರಸ್ತೆ ನಿರ್ಮಾಣ; ಕಾರ್ಯನಿರ್ವಾಹಕ ಅಭಿಯಂತರು ಶಿವಶಂಕರ ಕಾಮಶೆಟ್ಟಿಯ ವರ್ಗಾವಣೆಗೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬೀದರ ತಾಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಲೋಕೋಪಯೋಗಿ ಇಲಾಖೆಯಡಿಯಲ್ಲಿ ನಡೆದಿರುವ ಡಾಂಬರೀಕರಣ ರಸ್ತೆ ಕಾಮಗಾರಿ ಕಳಪೆಯಾಗಿದೆ. ಕೆಲಸದ ಗುಣಮಟ್ಟ ಪರಿಶೀಲನೆ ಮಾಡದೆ, ಗುತ್ತಿಗೆದಾರರಿಗೆ ಬೆಂಬಲ ನೀಡುತ್ತಿರುವ ಆರೋಪ ಕಾರ್ಯನಿರ್ವಾಹಕ ಅಭಿಯಂತರು ಶಿವಶಂಕರ ಕಾಮಶೆಟ್ಟಿ ವಿರುದ್ಧ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ, ಅವರು ಬೀದರ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ವರ್ಗಾವಣೆ ಆಗಬೇಕೆಂದು ಕರ್ನಾಟಕ ಪ್ರಜಾ ಶಕ್ತಿ ಸಮಿತಿ (ರಿ), ಬೀದರ ಜಿಲ್ಲಾ ಘಟಕ ಸರ್ಕಾರವನ್ನು ಒತ್ತಾಯಿಸಿದೆ.

ಅಷ್ಟೂರ ಗ್ರಾಮದಿಂದ ಮಲ್ಕಾಪೂರವರೆಗೆ ಹಾಗೂ ಅಲ್ಮಾಸಪುರದಿಂದ ಅಲ್ಮಾಸಪುರ ಕ್ರಾಸ್‌ವರೆಗೆ ನಿರ್ಮಿಸಲಾದ ರಸ್ತೆಗಳು ಸಂಪೂರ್ಣವಾಗಿ ಕಳಪೆ ಗುಣಮಟ್ಟದಲ್ಲಿದ್ದು, ಗ್ರಾಮಸ್ಥರು ಮತ್ತು ಸಂಘಟನೆ ಅನೇಕ ಬಾರಿ ದೂರು ನೀಡಿದರೂ, ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳಲಿಲ್ಲವೆಂದು ಮನವಿಯಲ್ಲಿ ಹೇಳಲಾಗಿದೆ. ಈ ಸಂದರ್ಭದಲ್ಲಿ ಕರ್ನಾಟಕ ಪ್ರಜಾ ಶಕ್ತಿ ಸಮಿತಿಯ ಜಿಲ್ಲಾ ಅಧ್ಯಕ್ಷ ಸಾಯಿ ಶಿಂಧೆ, ಉಪಾಧ್ಯಕ್ಷ ಮಹೇಂದ್ರಕುಮಾರ ಹೊಸಮನಿ, ಜಿಲ್ಲಾ ಖಜಾಂಚಿ ರಾಜಕುಮಾರ ಹೊನ್ನಿಕೇರೆ ಹಾಗೂ ಇತರ ಹುದ್ದಾಧಿಕಾರಿಗಳು ಪತ್ರಿಕಾ ಹೇಳಿಕೆ ನೀಡಿದ್ದು, "ದೂರುಗಳನ್ನು ಗಂಭೀರವಾಗಿ ಪರಿಗಣಿಸದೆ, ಗುತ್ತಿಗೆದಾರರಿಗೆ ಕುಮ್ಮಕ್ಕು ನೀಡುವ ನಿಲುವು ಸಾರ್ವಜನಿಕ ಹಿತಕ್ಕೆ ವಿರುದ್ಧ. \ಇಂತಹ ಅಧಿಕಾರಿಗಳು ಜನರ ಹಣವನ್ನು ವ್ಯರ್ಥ ಮಾಡುತ್ತಿರುವುದು ಸ್ಪಷ್ಟ," ಎಂದು ಹೇಳಿದರು.

ಒಂದು ವಾರದೊಳಗೆ ಸರ್ಕಾರ ಕ್ರಮ ಕೈಗೊಳ್ಳದಿದ್ದರೆ, ಲೋಕೋಪಯೋಗಿ ಇಲಾಖೆ ಬೀದರ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸುವುದಾಗಿ ಸಂಘಟನೆ ಎಚ್ಚರಿಸಿದೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.06 ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕಾನೂನು ಪದವೀಧರರ ವೃತ್ತಿ ತರಬೇತಿ ಶಿಷ್ಯವೇತನ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ನವೆಂಬರ್ 21 ರವರೆಗೆ ವಿಸ್ತರಿಸಲಾಗಿದೆ.

ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನಾ ಆಜಾದ್ ಭವನದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು.

**ಸೂಚನೆ:**

ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 3.50 ಲಕ್ಷ ಮೀರಿರಬಾರದು. ಬಾರ್ ಕೌನ್ಸಿಲ್‌ನಲ್ಲಿ ಅಭ್ಯರ್ಥಿಗಳ ಹೆಸರು ನೋಂದಾಯಿಸಿರಬೇಕು.

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ 2 ವರ್ಷಗಳ ಅವಧಿಯೊಳಗೆ ಕಾನೂನು ಪದವಿ ಪರೀಕ್ಷೆಯನ್ನು ಉತ್ತೀರ್ಣರಾದ ಅಭ್ಯರ್ಥಿಗಳು ಮಾತ್ರ ತರಬೇತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 30 ವರ್ಷಗಳೊಳಗೆ ಇರಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ದೂ.08392–200215, ಮೊ.8310321101, ಸಿರುಗುಪ್ಪ–9148889975, ಸಂಡೂರು–9036925966 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರುಗೋಡು ಪುರಸಭೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಿ

ಬಳ್ಳಾರಿ,ನ.06(ಕರ್ನಾಟಕ ವಾರ್ತೆ):

ಕುರುಗೋಡು ಪಟ್ಟಣದ ಮುಖ್ಯ ವೃತ್ತದಲ್ಲಿನ ಈಶ್ವರ ಪಾರ್ಕ್ ಕುರುಗೋಡು ಪುರಸಭೆ ಖಾತೆಯ ಕೆಎಮ್‌ಎಫ್–24 ಡಿಮ್ಯಾಂಡ್ ಪುಸ್ತಕದಲ್ಲಿ ನೋಂದಣಿ ಇರುವುದನ್ನು ತಿದ್ದುಪಡಿ ಮಾಡು ಪುರಸಭೆಯ ಖಾಲಿ ನಿವೇಶನ ಎಂದು ನಮೂದಿಸಿ ಈಶ್ವರ ಪಾರ್ಕ್ ಅನ್ನು ಬಸ್ ತಂಗುದಾಣವಾಗಿ ನಿರ್ಮಿಸಲು ಮತ್ತು ಈ ಜಾಗವನ್ನು ಕೆಕೆಆರ್‌ಟಿಸಿ ಇಲಾಖೆಗೆ ಹಸ್ತಾಂತರಿಸಲಾಗುತ್ತಿದ್ದು, ಈ ಆಸ್ತಿಯ ಕುರಿತು ಕುರುಗೋಡು ಪಟ್ಟಣದ ಸಾರ್ವಜನಿಕರಿಂದ ಯಾವುದೇ ರೀತಿಯ ತಂಟೆ–ತಕರಾರು ಇದ್ದಲ್ಲಿ ನ.10 ರೊಳಗಾಗಿ ಕುರುಗೋಡು ಪುರಸಭೆ ಕಚೇರಿಗೆ ಅರ್ಜಿಯ ಮೂಲಕ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಕುರುಗೋಡು ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನ ಪೀಠಿಕೆ ಫಲಕ ಅಳವಡಿಕೆ:ಸಂಗೊಳ್ಳಿಸೋಮಣ್ಣ

ಕಲಬುರಗಿ; ರಾಜ್ಯಾದ್ಯಂತ ಸಹಕಾರ ಇಲಾಖೆ ಅಡಿಯಲ್ಲಿ ಬರುವ ಎಲ್ಲಾ ಸಹಕಾರ ಸಂಘಗಳಲ್ಲಿ ಮತ್ತು ಸರ್ಕಾರಿ ಕಚೇರಿಗಳಲ್ಲಿ ಸರ್ಕಾರದ ಆದೇಶದಂತೆ ಸಂವಿಧಾನ ಪೀಠಿಕೆ ಭಾವಚಿತ್ರವನ್ನು ಅಳವಡಿಸುವ ಅಭಿಯಾನವನ್ನು ಕಲ್ಬುರ್ಗಿ ಜಿಲ್ಲೆ ಸುಭಾಷ್ ಚಂದ್ರ ಬೋಸ್ ಸೇವಾ ಸಂಸ್ಥೆ ವತಿಯಿಂದ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ

ರಾಜ್ಯ ಕಾರ್ಯದರ್ಶಿ ಸಂಗೊಳ್ಳಿ ಸೋಮಣ್ಣ ತಿಳಿಸಿದರು.

ಅವರು ನಗರದ ಪತ್ರಿಕಾ ಭವನದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ ಒಂದು ವರ್ಷದಿಂದ ಆರಂಭವಾದ ಈ ಅಭಿಯಾನ ಈಗಾಗಲೇ 27 ಜಿಲ್ಲೆಗಳನ್ನು ಪೂರ್ಣಗೊಳಿಸಲಾಗಿದ್ದು, ಇಂದಿನಿಂದ ಕಲಬುರ್ಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೂ ಭೇಟಿನೀಡಿ

ಸಂವಿಧಾನ ಪೀಠಿಕೆ ಫಲಕವನ್ನು ಅಳವಡಿಸುವುದಾಗಿ ತಿಳಿಸಿದರು.

ಕಲ್ಬುರ್ಗಿ ಜಿಲ್ಲಾಧಿಕಾರಿಗಳು ಅವರು ಸಂವಿಧಾನ ಪೀಠಿಕೆ–ಯ ಫಲಕವನ್ನು ಅನಾವರ ಣಗೊಳಿಸಿದ್ದು, 2020 ರಿಂದಲೇ ಕೇಂದ್ರಸರ್ಕಾರ ನಮ್ಮ ಸೇವಾ ಸಂಸ್ಥೆಗಳಿಗೆ ಸಂವಿಧಾನದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಸಂವಿಧಾನ ಪೀಠಿಕೆ ಅಳವಡಿಸಲು ಆದೇಶಿಸಿದ್ದು, ಈಗ ರಾಜ್ಯ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆದೇಶ ಪತ್ರವನ್ನು ನೀಡಿದ್ದಾರೆ ಎಂದರು.

ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಅಭಿಯಾನಕ್ಕೆ ಚಾಲನೆ ನೀಡಿಲಾಗುವುದು. 1400 ಪೀಠಿಕೆಗಳನ್ನು ನೀಡಲು ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸುರೇಶ ಕೆ ಮೈಸೂರ, ಜೆಡಿಎಸ್ ಮುಖಂಡ ತಿಪ್ಪಣ್ಣ ಸರಡಗಿ, ಲಕ್ಷ್ಮಣ ಆನೂರ್, ಅಶೋಕ ಕೆರಕ್ನಳ್ಳಿ, ಜೈ ಭೀಮ ಉಪಸ್ಥಿತರಿದ್ದರು.



ಬಸವಕಲ್ಯಾಣ :– ತಾಲೂಕಿನ ಸಸ್ತಾಪೂರ ಗ್ರಾಮದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮದಲ್ಲಿ ಶಾಸಕ ಶರಣು ಸಲಗರ. ತಿಪುರಾಂತಿನ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ಪೂಜ್ಯ ಶ್ರೀ ರತ್ನಕಾಂತ ಸ್ವಾಮಿಜಿ. ಕೌಡಿಯಾಳ ಭ್ಯಾಗವಂತಿ ತಾಯಿ. ಪೂಜ್ಯ ಶ್ರೀ ಮಹಾದೇವಿ ತಾಯಿ. ತಾಲ್ಲೂಕು ಟೋಕರಿ ಕೋಲಿ ಸಮಾಜದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಚನ್ನವೀರ ಜಮಾದರ. ತುಕಾರಾಮ ರೊಡ್ಡೆ. ನಾಗನಾಥ ಚಾಮಲೆ. ಕಮಲಾಕರ ಮೆಕಾಲೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಇಪಿಎಫ್‌ಓ: ನ.13 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.06:ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ನವೆಂಬರ್ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ. ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ನವೆಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತಾಳಿಕೋಟಿ ತಾಲೂಕಿನ ಗೊಟಖಿಂಡಕಿ ಗ್ರಾಮದಲ್ಲಿ ಶ್ರೀಮನ್ ಮಹಾದೇವಿ ಅವರ ಜಾತ್ರೋತ್ಸವ ಅಂಗವಾಗಿ ಹಮ್ಮಿಕೊಂಡ ಶ್ರೀಮನ್ ದೇವಿಯ ಭಕ್ತಿ ಪ್ರಧಾನ ಗೀತೆಗಳ ಧ್ವನಿ ಸುರುಳಿ ಬಿಡುಗಡೆ ಸಮಾರಂಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಅವರು ಸೋಮವಾರ ಧ್ವನಿಸುರುಳಿ ಬಿಡುಗಡೆ ಗೊಳಿಸಿದರು. ಕಾರ್ಯಕ್ರಮದಲ್ಲಿ ಮುಖಂಡರಾದ ಸುರೇಶಬಾಬುಗೌಡ ಬಿರಾದಾರ(ಪೀರಾಪೂರ), ಗ್ರಾಮದ ಗಣ್ಯರು ಹಾಗೂ ಹಿರಿಯರು ಉಪಸ್ಥಿತರಿದ್ದರು.

# ಗುಡ್ಡಗಾಡು ಓಟ–ಬಾಗಲಕೋಟೆ ವಿವಿ ತಂಡಗಳ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಜಿಲ್ಲೆಯ ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯದ ಗುಡ್ಡಗಾಡು ಓಟ ತಂಡದ ಆಯ್ಕೆ ತಾಲೂಕಿನ ಶಿರೂರ ಸಿದ್ದಲಿಂಗೇಶ್ವರ ಗ್ರಾಮೀಣ ಕಲಾ ಮಹಾವಿದ್ಯಾಲಯದಲ್ಲಿ ಈಚೆಗೆ ನಡೆಯಿತು.

ಪುರುಷರ ವಿಭಾಗದಲ್ಲಿ ಬಾಗಲಕೋಟೆಯ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಬಿಪಿಎಡ್ ಕಾಲೇಜಿನ ಸಂಗಮೇಶ ಹಳ್ಳಿ, ಹುನ್ನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರತೀಕ ದೇಗಾಂವಿ, ಜಮಖಂಡಿಯ ಬಿ.ಎಲ್.ಡಿ.ಇ ಕಾಲೇಜಿನ ಚೇತನ ಕನ್ನಾಗರ, ಕುಮಾರ ಬಲಗನೆ ಹಾಗೂ ಅಜೀತ ದಾಮದಿ ಮತ್ತು ಹುನಗುಂದದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಹುಲ್ಲಪ್ಪ ತಮ್ಮಣ್ಣವರ ಆಯ್ಕೆಯಾಗಿದ್ದಾರೆ. ಬಾದಾಮಿ ಕಾಳಿದಾಸ ಕಾಲೇಜಿನ ರಮೇಶ ಎಚ್., ಬೀಳಗಿಯ ರುದ್ರಗೌಡ ಪಾಟೀಲ ಸರ್ಕಾರಿ ಕಾಲೇಜಿನ ನೀಲಪ್ಪ ಪಟ್ಟೇದ ಹಾಗೂ ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಮೇಶ ಕರಡಿಗುಡ್ಡ ಕಾಯ್ದಿಟ್ಟ ಆಟಗಾರರಾಗಿ ಆಯ್ಕೆಯಾಗಿದ್ದಾರೆ.

ಮಹಿಳೆಯರ ವಿಭಾಗದಲ್ಲಿ ಬನಹಟ್ಟಿಯ ಎಸ್.ಟಿ.ಸಿ ಕಾಲೇಜಿನ ರಾಧಿಕಾ ಪೂಜಾರಿ, ಜಮಖಂಡಿಯ ಬಿ.ಎಲ್.ಡಿ.ಇ ಕಾಲೇಜಿನ ಸುಮಂಗಲಾ ತೇಲಿ ಹಾಗೂ ಮಹಾಲಕ್ಷ್ಮೀ ಬಸಕಾಳೆ, ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮೀನಾಕ್ಷಿ ಚಲವನ್ನವರ, ಬೀಳಗಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪೂಜಾ ಬಂಗಾರಿ ಮತ್ತು ಬನಹಟ್ಟಿ ಎಸ್.ಟಿ.ಸಿ ಕಾಲೇಜಿನ ಪೂಜಾ ಉಳ್ಳಾಗಡ್ಡಿ ಆಯ್ಕೆಯಾಗಿದ್ದಾರೆ. ಹುನಗುಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಾವಿತ್ರಿ ತೊಂಡಿಹಾಳ, ಬನಹಟ್ಟಿಯ ಎಸ್.ಟಿ.ಸಿ ಕಾಲೇಜಿನ ಸಂಗೀತಾ ಪುರಾಣಿಕಮಠ ಮತ್ತು ಮಹಾಲಿಂಗಪೂರದ ಕೆ.ಎಲ್.ಇ ಕಾಲೇಜಿನ ಬೋರಮ್ಮ ದಡ್ಡಿಮನಿ ಕಾಯ್ದಿಟ್ಟ ಆಟಗಾರರಾಗಿ ಆಯ್ಕೆಯಾಗಿದ್ದಾರೆ ಎಂದು ಬಾಗಲಕೋಟೆ ವಿವಿಯ ಕ್ರೀಡಾ ಸಂಯೋಜನಾಧಿಕಾರಿ ಡಾ.ಕೆ.ಎಂ.ಶಿರಹಟ್ಟಿ ತಿಳಿಸಿದ್ದಾರೆ.

# ಕನ್ನಡ ಸಾಹಿತ್ಯಕ್ಕೆ ಬಾಗಲಕೋಟೆ ಜಿಲ್ಲೆಯ ಕೊಡುಗೆ ಅಪಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಕನ್ನಡಿಗ ಕರ್ನಾಟಕ ಕನ್ನಡ ತತ್ವದಡಿಯಲ್ಲಿ ನಾಡವರನ್ನು ಒಂದುಗೂಡಿಸಿಕೊಂಡು ಮುನ್ನಡೆಯುವ ಶಕ್ತಿ ಕನ್ನಡ ಸಾಹಿತ್ಯ ಪರಿಷತ್ತಿಗೆ ಇದೆ. ಇಂತಹ ಕಾರ್ಯವನ್ನು ಬಾಗಲಕೋಟೆ ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತು ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಶ್ರೀಮತಿ ಲಕ್ಷ್ಮಿ ಗೌಡರ ಹೇಳಿದರು.



ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಜಾನಪದ ಪರಿಷತ್ತು ಜಿಲ್ಲಾ ಘಟಕ ಬಾಗಲಕೋಟೆ ಇವರ ಸಹಯೋಗದಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಹಮ್ಮಿಕೊಂಡ ಕನ್ನಡ ಶೋಭಾನೆ ಹಾಡುಗಳ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನಿವೃತ್ತ ಶಿಕ್ಷಣಾಧಿಕಾರಿ ವ್ಹಿ.ಬಿ.ಗೋವಿಂದಪ್ಪನವರ, ವಿಜಯಲಕ್ಷ್ಮಿ ಮೂರನಾಳ, ಸುಮಂಗಲಾ ಬದಾಮಿ, ಆನಂದ ಹಲಕುರ್ಕಿ ಮುಖ್ಯ ಅತಿಥಿಗಳಾಗಿದ್ದರು. ಇದೇ ಸಂದರ್ಭದಲ್ಲಿ ಸಂಶೋದಕಿ ಸಾಹಿತಿ ಡಾ. ಉಮಾ ಅಕ್ಕಿ, ಶ್ರೀಮತಿ ರೇಣುಕಾ ಮಾದರ, ಶ್ರೀಮತಿ ಲಕ್ಷ್ಮೀ ಗೌಡರ ಅವರನ್ನು ಪರಿಷತ್ತಿನ ಪರವಾಗಿ ಸನ್ಮಾನಿಸಲಾಯಿತು. ಜಿಲ್ಲೆಯ ಅನವಾಲ, ಯಂಡಿಗೇರಿ ಕರಡಿಗುಡ್ಡ, ಕೆರೂರ ಹಾಗೂ ಭಗವತಿ, ಶಾರದಾಳ, ಗಲಗಲಿ ಇತರ ಭಾಗಗಳಿಂದ ಶೋಭಾನೆ ಪದ ಹಾಡುವ 15 ತಂಡಗಳು ಭಾಗವಹಿಸಿ ತಮ್ಮ ಕಲಾ ಪ್ರದರ್ಶನ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯ ಕಲೆ, ಸಾಹಿತ್ಯದ ಬೆಳವಣಿಗೆಗೆ ಕಸಾಪ ಹಾಗೂ ಕಜಾಪಗಳು ಯಾವತ್ತೂ ಕಲಾವಿದರ ಜೊತೆಗಿರುತ್ತವೆ. ತಾವು ಕಲಾ ಸೇವೆಯನ್ನು ಮುಂದುವರೆಸಿ ಎಂದು ಕರೆ ಕೊಟ್ಟರು.

ನಾರಾಯಣ ಪತ್ತಾರ, ಶಶಿಕಾಂತ ಬಡಿಗೇರ ಮುಂತಾದ ಕಲಾವಿದರು, ಸಾಹಿತಿಗಳು ಉಪಸ್ಥಿತರಿದ್ದರು. ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶಂಕರ ಹೂಲಿ ಸ್ವಾಗತಿಸಿದರು. ಸಿ.ಎಸ್.ನಾಗನೂರ ನಿರೂಪಿಸಿದರು. ಈಶ್ವರ ಮುದ್ದಾಪುರ ವಂದಿಸಿದರು.

ಬೆಳಗ್ಗೆ 7:30ಕ್ಕೆ ನಿವೃತ್ತ ಪ್ರಾಚಾರ್ಯರಾದ ಶ್ರೀ ಜಿಎಸ್ ಬಿಜಾಪುರ್ ದ್ವಜಾರೋಹಣ ನೆರವೇರಿಸಿಕೊಟ್ಟರು ಪ್ರಾಚಾರ್ಯರಾದ ಡಾ. ಸಿದ್ದರಾಮ ಬಂಗಾರಿ ಅತಿಥಿಗಳಾಗಿ ಮಾತನಾಡಿದರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶಿವಾನಂದ್ ಶೆಲ್ಲಿಕೇರಿ ಜಿಲ್ಲಾ ಪದಾಧಿಕಾರಿಗಳಾದ ಶಂಕರ ಹೂಲಿ ಸಿ ಎಸ್ ನಾಗನೂರ ವಿಜಯಲಕ್ಷ್ಮಿ ಮೂರನಾಳ ಶ್ರೀಮತಿ ಲಕ್ಷ್ಮಿ ಗೌಡರ ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು

# ಯುವಕನ ಕೊಲೆಗೈದವರ ಬಂಧನಕ್ಕೆ ಚಿಮ್ಮಲಗಿ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಜಿಲ್ಲೆಯ ಇಲಕಲ್ಲ ತಾಲೂಕಿನ ತುಂಬ ಗ್ರಾಮದ ದಲಿತ ಯುವಕ ಪ್ರಜ್ವಲಕುಮಾರ ಮಹಾಂತೇಶ ಮಾದರ ಕೊಲೆ ಮಾಡಿ ಮರಳು ಅಗೆದು ಹಳ್ಳದ ನೀರಿನ ಹೊಂಡದಲ್ಲಿ ಹಾಕಿದ್ದಾರೆ ಎಂದು ಕುಟುಂಬದವರು ದೂರು ದಾಖಲೆ ಮಾಡಿದ್ದರೂ ಪೋಲಿಸರು ಆರೋಪಿಗಳನ್ನು ಬಂಧಿಸುವಲ್ಲಿ ಹಿಂದೇಟು ಹಾಕಿದ್ದಾರೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಆರೋಪಿಸಿದೆ.

ಘಟನೆಯನ್ನು ಖಂಡಿಸಿರುವ ಸಂಘಟನೆಯ ಬೆಳಗಾವಿ ವಿಭಾಗೀಯ ಸಂಘಟನಾ ಸಂಚಾಲಕ ಹನಮಂತ ಚಿಮ್ಮಲಗಿ, ದೂರು ದಾಖಲಾಗಿ 4–5 ದಿನಗಳು ಕಳೆದರು ಇಲ್ಲಿವರೆಗೂ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸ್ ಇಲಾಖೆ ವಿಫಲವಾಗಿದೆ ಎಂದಿದ್ದು, ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು ಕೂಡಲೇ ಆರೋಪಿಗಳನ್ನು ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕೊಲೆ ಮಾಡಿದವರು ಆರ್ಥಿಕವಾಗಿ ಹಾಗೂ ರಾಜಕೀಯವಾಗಿ ಎಷ್ಟೇ ಬಲಿಷ್ಟ ಇದ್ದರೂ, ಯಾವುದೇ ಸಮುದಾಯದವರಿರಲಿ ಅಪರಾಧಿಗಳಿಗೆ ಉಗ್ರವಾದ ಶಿಕ್ಷೆಯಾಗಬೇಕು. ಕೊಲೆಯಾದ ಕುಟುಂಬಕ್ಕೆ ಸರ್ಕಾರ 25 ಲಕ್ಷ ಪರಿಹಾರ ಘೋಷಣೆ ಮಾಡಬೇಕು. ಆ ಕುಟುಂಬಕ್ಕೆ ನಾಲ್ಕು ಎಕರೆ ಜಮೀನು ಕೊಡಬೇಕು ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ಒದಗಿಸಬೇಕು ಎಂದು ತಾವು ರಾಜ್ಯ ಸರ್ಕಾರವನ್ನು ಒತ್ತಾಯಿಸುವುದಾಗಿ ಪತ್ರಿಕಾ ಹೇಳಿಕೆಯಲ್ಲಿ ಹನಮಂತ ಚಿಮ್ಮಲಗಿ ತಿಳಿಸಿದ್ದಾರೆ.

ಅಪರಾಧಿಗಳನ್ನು ಬಂಧಿಸುವಲ್ಲಿ ವಿಳಂಬ ಮಾಡಿದರೆ ಉಗ್ರವಾದ ಪ್ರತಿಭಟನೆ ಮಾಡಲಾಗುವುದೆಂದು ಎಂದು ಹೇಳಿದ್ದಾರೆ. ಘಟನೆಯನ್ನು ಖಂಡಿಸಿರುವ ಸಂಘಟನೆಯ ಜಿಲ್ಲಾ ಸಂಚಾಲಕ ಮುತ್ತಣ್ಣ ಮೇತ್ರಿ, ಜಿಲ್ಲಾ ಸಮಿತಿಯ ಆನಂದ ದೊಡಮನಿ, ಕೃಷ್ಣಮೂರ್ತಿ ನಾಯ್ಕರ, ಸಂಗಣ್ಣ ಮಡ್ಡಿ, ಮಾರುತಿ ಮರೆಗುದ್ದಿ, ಪ್ರಭು ದೊಡಮನಿ, ಚಂದ್ರು ಹರಿಜನ, ಲಕ್ಷ್ಮಣ ಹರಿಜನ ಕೂಡಲೇ ತಪ್ಪಿತಸ್ಥರನ್ನು ಬಂಧಿಸುವಂತೆ ಪೋಲಿಸ್ ಇಲಾಖೆಗೆ ಒತ್ತಾಯಿಸಿದ್ದಾರೆ.

# ಕಲಾಪ್ರತಿಭೋತ್ಸವದಲ್ಲಿ ಭಾಗವಹಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಕ್ಕಳ ಮತ್ತು ಯುವಜನರ ಕಲಾಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಲಾ ಪ್ರತಿಭೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಕಲಾವಿದರು ಹಾಗೂ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಾಲ ಪ್ರತಿಭೆ ಸ್ಪರ್ಧೆಗಳಲ್ಲಿ 8 ರಿಂದ 14 ವರ್ಷಕ್ಕಿಂತ ಕಡಿಮೆಯಿರಬೇಕು. ಕಿಶೋರ ಪ್ರತಿಭೆ ಸ್ಪರ್ಧೆಗೆ 14 ರಿಂದ 18 ವರ್ಷದೊಳಗಿರಬೇಕು. ಏಕವ್ಯಕ್ತಿ ಸ್ಪರ್ಧೆಗಳಲ್ಲಿ ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಹಿಂದೂಸ್ಥಾನಿ, ಕರ್ನಾಟಕ ವಾದ್ಯ ಸಂಗೀತ ಹಾಗೂ ಹಿಂದೂಸ್ಥಾನಿ, ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಶಾಲೆಯಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು ಅಲ್ಲದೇ ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯಿತಿ, ನಗರಸಭೆ, ಪುರಸಭೆ, ಪಾಲಿಕೆ ಕಚೇರಿಯಿಂದ ದೃಢೀಕರಣ ಪತ್ರಪಡೆದು ಸಲ್ಲಿಸಬೇಕು.

ಯುವ ಪ್ರತಿಭೆಗಳು 18 ರಿಂದ 30 ವರ್ಷಕ್ಕಿಂತ ಕಡಿಮೆಯಿರಬೇಕು. ಏಕವ್ಯಕ್ತಿ ಸ್ಪರ್ಧೆಗಳಲ್ಲಿ ಯುವಪ್ರತಿಭೆ ವಿಭಾಗದಲ್ಲಿ ನನ್ನ ಮೆಚ್ಚಿನ ಸಾಹಿತಿ (ಆಶುಭಾಷಣ), ಶಾಸ್ತ್ರೀಯನೃತ್ಯ, ಸುಗಮಸಂಗೀತ, ಹಿಂದೂಸ್ಥಾನಿ, ಕರ್ನಾಟಕ ಶಾಸ್ತ್ರೀಯ ಸಂಗೀತ, ಚಿತ್ರಕಲೆ ಹಾಗೂ ಹಿಂದೂಸ್ಥಾನಿ, ಕರ್ನಾಟಕವಾದ್ಯ ಸಂಗೀತ ಹಾಗೂ ನಾಟಕ ಸ್ಪರ್ಧೆ ಹಮ್ಮಿಕೊಳ್ಳಲಗಿದೆ.

ಬಾಲಪ್ರತಿಭೆ, ಕಿಶೋರಪ್ರತಿಭೆ, ಯುವಪ್ರತಿಭೆ ವಿಭಾಗದ ಎಲ್ಲ ಸ್ಪರ್ಧಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ಹಾಗೂ ವಲಯ ಮಟ್ಟದಲ್ಲಿ ಯಾವುದೇ ನಗದು ಬಹುಮಾನ ಇರುವುದಿಲ್ಲ. ರಾಜ್ಯಮಟ್ಟದಲ್ಲಿ ಪ್ರಥಮ 15 ಸಾವಿರ ರೂ, ದ್ವಿತಿಯ 10 ಸಾವಿರ ರೂ, ತೃತೀಯ 7500 ರೂ.ಗಳ ನಗದು ಬಹುಮಾನವನ್ನು ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

ಸಮೂಹ ಪ್ರಕಾರಗಳಲ್ಲಿ ಭಾಗವಹಿಸುವ ತಂಡದ ಸದಸ್ಯರು ಸಂಖ್ಯೆ ಕನಿಷ್ಟ 10 ಗರಿಷ್ಟ 15 ಇದ್ದು, ವಲಯ ಹಾಗೂ ರಾಜ್ಯ ಮಟ್ಟದಲ್ಲಿ ಸ್ಪರ್ಧೆಗಳೊಂದಿಗೆ ಆಗಮಿಸುವ ನಾಟಕ ನಿರ್ದೇಶಕ, ಪಕ್ಕವಾದ, ಸಹಕಲಾವಿದರಿಗೆ ವಾಸ್ತವಿಕ ಪ್ರಯಾಣ ವೆಚ್ಚ ಊಟ, ವಸತಿ ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುವುದು.

ರಾಜ್ಯ ಮಟ್ಟದಲ್ಲಿ ಪ್ರಥಮ 50 ಸಾವಿರ ರೂ, ದ್ವಿತೀಯ 40 ಸಾವಿರ ರೂ, ತೃತೀಯ 30 ಸಾವಿರ ರೂ.ಗಳ ನಗದು ಬಹುಮಾನವನ್ನು ನೀಡಲಾಗುವುದು. ಕಲಾ ಪ್ರತಿಭೋತ್ಸವದಲ್ಲಿ ಒಬ್ಬ ಸ್ಪರ್ಧಿಯು ಒಂದಕ್ಕಿಂತ ಹೆಚ್ಚಿನ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಕಲಾವಿದರು, ಅಭ್ಯರ್ಥಿಗಳು ತಮ್ಮ ಸ್ವವಿವರಗಳೊಂದಿಗೆ ಅರ್ಜಿಯಲ್ಲಿ ಕಲಾಪ್ರಕಾರದ ವಿವರವನ್ನು ಸ್ಪಷ್ಟವಾಗಿ ನಮೂದಿಸಿ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಚೇರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಾಭವನ ಸಾಂಸ್ಕೃತಿಕ ಸಮುಚ್ಚಯ ಸೆಕ್ಟರ ನಂ.19, 6ನೇ ರಸ್ತೆ, ನವನಗರ–ಬಾಗಲಕೋಟೆ ಇಲ್ಲಿಗೆ ಖುದ್ದಾಗಿ ನವೆಂಬರ 14 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

# ದೈಹಿಕ, ಮಾನಸಿಕ ಸಮತೋಲನಕ್ಕೆ ಕ್ರೀಡೆ ಸಹಕಾರಿ: ಡಾ.ಭೋಜನ್ನವರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಮಾನವನ ದೈಹಿಕ ಹಾಗೂ ಮಾನಸಿಕ ಸಮತೋಲನಕ್ಕೆ ಕ್ರೀಡೆಗಳು ಸಹಕಾರಿಯಾಗಿವೆ ಎಂದು ಸೈಬರ್ ಕ್ರೈಮ್ ವಿಭಾಗದ ಡಿ.ವಾಯ್.ಎಸ್.ಪಿ ಡಾ.ಗಿರೀಶ ಭೋಜನ್ನವರ ಹೇಳಿದರು.




ನಗರದ ಬಸವೇಶ್ವರ ಕಾಲೇಜು ಮೈದಾನದಲ್ಲಿ ಬಿ.ವ್ಹಿ.ವ್ಹಿ.ಎಸ್. ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ 4 ದಿನಗಳ ವಾರ್ಷಿಕ ಕ್ರೀಡಾ–ಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ "ಉತ್ಸಾಹ–25 ಕ್ಕೆ ಕ್ರೀಡಾ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ವೈದ್ಯ ವಿದ್ಯಾರ್ಥಿಗಳು ಪಠ್ಯಚಟುವಟಿಕೆಯ ಜತೆಯಲ್ಲಿ ಕ್ರೀಡೆ, ಸಾಂಸ್ಕೃತಿಕ ಪ್ರತಿಭಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಅಗತ್ಯವಿದೆ. ಪಠ್ಯ ಶಿಕ್ಷಣ, ಕ್ರೀಡೆ ಹಾಗೂ ಕಲೆ ಮತ್ತು ಸಂಸ್ಕೃತಿ ವಿಭಾಗಳು ಶಿಕ್ಷಣದ ಅವಿಭಾಜ್ಯ ಅಂಗವಾಗಿರುವುದನ್ನು ವಿದ್ಯಾರ್ಥಿಗಳು ಮತ್ತು ಪೋಷಕರು ಅರಿತುಕೊಳ್ಳಬೇಕು. ಇಂದು ಶಿಕ್ಷಣ ಕ್ಷೇತ್ರ ಅಭಿವೃದ್ಧಿ ಹೊಂದಿದಷ್ಟೆ, ಕ್ರೀಡಾ ಮತ್ತು ಕಲೆ–ಸಂಸ್ಕೃತಿ ಕ್ಷೇತ್ರ ಅಭಿವೃದ್ಧಿ ಸಾಧಿಸುತ್ತದೆ. ಈ ಎರಡು ಕ್ಷೇತ್ರಗಳು ಬೆಳವಣಿಗೆಯಾಗಬೇಕಾದರೆ ಶಾಲಾ–ಕಾಲೇಜುಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆ, ಕಲೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು.

ಬವಿವ ಸಂಘದ ಆಯುಷ್ ಹಾಗೂ ಫಾರ್ಮಾಸಿ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಪೋಷಕರು ಕೇವಲ ಪಠ್ಯ ಶಿಕ್ಷಣಕ್ಕೆ ಆದ್ಯತೆ ನೀಡುತ್ತಿದ್ದಾರೆ. ಇಂದು ರಾಜ್ಯದ್ಯಂತ ವಿದ್ಯಾಸಂಸ್ಥೆಗಳು ಹೆಚ್ಚಾಗಿ ಸ್ಥಾಪನೆಯಾಗುತ್ತಿದ್ದು, ಇಂತಹ ಶಿಕ್ಷಣ ಸಂಸ್ಥೆಗಳು ಕೇವಲ ವ್ಯವಹಾರಿಕ ಮತ್ತು ಪ್ರತಿಷ್ಠೆಯ ಶಿಕ್ಷಣ ಸಂಸ್ಥೆಗಳಾಗಿ ಕಾರ್ಯ ನಿರ್ವಹಿಸುತ್ತಿವೆ. ಇದರಿಂದ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಆಟದ ಮೈದಾನ, ಮತ್ತು ಕಲೆ–ಸಂಸ್ಕೃತಿಯನ್ನು ಪ್ರದರ್ಶಿಸಲು ಸೂಕ್ತ ವೇದಿಕೆಯ ವ್ಯವಸ್ಥೆ ಇರುವುದಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಆಸಕ್ತಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಹೀಗಾಗಬಾರದು. ಕ್ರೀಡೆಗಳಿಗೆ ವ್ಯವಸ್ಥೆ ಇರಬೇಕು ಎಂದರು.

ಪ್ರಾಚಾರ್ಯ ಡಾ.ಆರುಣ ಹೂಲಿ ಮಾತನಾಡಿ, ವಿದ್ಯಾರ್ಥಿಗಳು ಕಲಿಕೆಯೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಾಗ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿ ಸಾಧ್ಯವಾಗುತ್ತದೆ ಮತ್ತು ಸ್ಪರ್ದೆಯಲ್ಲಿ ಸೋಲು ಗೆಲುವು ಸಾಮಾನ್ಯ ಇದನ್ನು ಸೇಡು ಇಟ್ಟುಕೊಳ್ಳದೆ ಸೋತಾಗ ಕುಗ್ಗದೆ, ಗೆದ್ದಾಗ ಹಿಗ್ಗದೆ ಒಂದೇ ರೀತಿಯಲ್ಲಿ ಎರಡನ್ನೂ ಸ್ವೀಕರಿಸಿ ಎಂದು ಕಿವಿ ಮಾತು ಹೇಳಿದರು.

ಇದೇ ಸಮಯದಲ್ಲಿ ಮುಖ್ಯ ಅತಿಥಿಗಳು ಕ್ರೀಡಾ ಧ್ವಜಾರೋಹಣ ನೆರವೇರಿಸಿ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು. ಸಮಾರಂಭದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸಂಯೋಜ–ಕರಾದ ಡಾ.ಮಂಜುನಾಥ ಪಾಟೀಲ, ಡಾ.ವಿ.ಎಸ್.ಸಂಕೇಶ್ವರಿ, ಡಾ.ತೃಪ್ತಿ ಶಿಂದೆ, ಡಾ.ರುದ್ರೇಶ ಕೊಪ್ಪಳ, ಡಾ.ಅಮರೇಶ ಬಳಗಾನೂರ, ಡಾ.ರತ್ನಪ್ರಿಯದರ್ಶಿನಿ, ಡಾ.ಹಾಜಿಮಲಂಗ ತಾಂಬೋಲಿ, ಡಾ.ಲಕ್ಷ್ಮಿ. ಪ್ರಾಧ್ಯಾಪಕರುಗಳಾದ ಡಾ.ರವಿ.ಕೋಟೆಣ್ಣವರ, ಡಾ.ಸುಧೀರ ಬೆಟಗೇರಿ.. ಡಾ.ಅಖಿಲಾ ಹುಲ್ಲೂರ. ಡಾ.ಫಾತಿಮಾ ಬಾಲಸಿಂಗ. ಡಾ.ಶಮಶಾದ. ಡಾ.ಪ್ರದೀಪ. ಡಾ.ದೀಪಕ ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಅಪೂರ್ವ ಪಾಟೀಲ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರಜ್ಞಾನಾಯಿಕ ಸ್ವಾಗತಿಸಿದರು. ಅನ್ನಪೂರ್ಣ ಲೋಹಾರ ಪರಿಚಯಿಸಿದರು. ಭಾಗ್ಯ ಗಂಗಶಟ್ಟಿ ವಂದಿಸಿದರು. ಕ್ರೀಡಾ ಹಾಗೂ ಸಾಂಸ್ಕೃತಿಕ ವಿದ್ಯಾರ್ಥಿ ಪ್ರತಿನಿಧಿಗಳಾದ ರಿಷಿಕೇಶ. ನಿತೇಶಾಮ ಖಾನ. ಶ್ರೇಯಸ್ಸ. ಆದಿತ್ಯ. ಪ್ರಿಯಾಂಕಾ ಕಾರ್ಯಕ್ರಮ ಅಚ್ಚು ಕಟ್ಟಾಗಿ ಆಯೋಜಿಸಿದರು.

# ಎಂಎ ಪರೀಕ್ಷೆ-ವಿದ್ಯಾರ್ಥಿಗಳ ಸಾಧನೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ನ.6–ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಇತಿಹಾಸ ಹಾಗೂ ಪ್ರಾಚ್ಯಶಾಸ್ತ್ರ ಸ್ನಾತಕೋತ್ತರ ಅಧ್ಯಯನ ವಿಭಾಗದ ವಿದ್ಯಾರ್ಥಿಗಳು ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯ ನಡೆಸಿದ ಎಂಎ 2ನೇ ಸೆಮೆಸ್ಟರ್ ಹಾಗೂ 4ನೇ ಸೆಮೆಸ್ಟರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. 2ನೇ ಸೆಮೆಸ್ಟರನಲ್ಲಿ ಒಟ್ಟು ಫಲಿತಾಂಶ 100 ರಷ್ಟಾಗಿದ್ದು, 8 ವಿದ್ಯಾರ್ಥಿಗಳು ಡಿಸ್ಟಿಂಕಶನ್‌ದಲ್ಲಿ ಹಾಗೂ 4 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ. ಜ್ಯೋತಿ ಬಿಳಿಜಾಡರ(ಶೇ.78.83) ಪ್ರಥಮ, ಮಹಾದೇವ ದಾಸರ (ಶೇ.73.83) ದ್ವಿತೀಯ ಹಾಗೂ ಈರಣ್ಣ ಅಕ್ಕರಗಲ್ (ಶೇ.71) ತೃತೀಯ ಸ್ಥಾನ ಪಡೆದಿದ್ದಾರೆ.4ನೇ ಸೆಮೆಸ್ಟರನಲ್ಲಿ ಒಟ್ಟು ಫಲಿತಾಂಶ 100 ರಷ್ಟಾಗಿದ್ದು, 5 ವಿದ್ಯಾರ್ಥಿಗಳು ಡಿಸ್ಟಿಂಕಶನ್‌ದಲ್ಲಿ ಹಾಗೂ 13 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ. ಶ್ರುತಿ ನಾಯಕ (ಶೇ.77.66) ಪ್ರಥಮ, ಯಲ್ಲಕ್ಕ ಕೆಂಪಣ್ಣವರ (ಶೇ.74.16) ದ್ವಿತೀಯ ಹಾಗೂ ಕಾವೇರಿ ಬಡಿಗೇರ (ಶೇ.72.66) ತೃತೀಯ ಸ್ಥಾನವನ್ನು ಪಡೆದಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಶ್ರೀನಿವಾಸ ನರಗುಂದ ತಿಳಿಸಿದ್ದಾರೆ. ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ್, ಗೌರವ ಕಾರ್ಯದರ್ಶಿ ಡಾ. ಗಿರೀಶ ಮಸೂರಕರ, ಕಾಲೇಜು ಉಪವಿಭಾಗ ಅಧ್ಯಕ್ಷ ಡಾ.ಪಿ.ಆರ್. ಜೋಶಿ, ಸಂಯೋಜಕ ಎಂ.ಡಿ. ಕೋರವಾರ ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ

# ಹಾಲು ಉತ್ಪಾದಕ ಸಹಕಾರ ಸಂಘಗಳ ಸಮಾಪಣೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ನ.6–ಬದಾಮಿ, ಬಾಗಲಕೋಟ, ಹುನಗುಂದ ತಾಲೂಕಿನ ಹಾಲು ಉತ್ಪಾದಕ ಸಹಕಾರಿ ಸಂಘಗಳಾದ ಹುಲ್ಲಿಕೇರಿ, ಯರಕೊಪ್ಪ, ಬಾಚಿನಗುಡ್ಡ, ಕಿತ್ತಲಿ, ಯಂಡಿಗೇರಿ, ಹುಲಸಗೇರಿ, ಹಲಕುರ್ಕಿ, ಹಳದೂರ, ನೆಲವಗಿ, ಗೋವನಕಿ, ಶಿರಬಡಗಿ, ದೇವನಾಳ, ಬೆನಕಟ್ಟಿ, ಹೊನ್ನಾಕಟ್ಟಿ, ನಿಂಬಲಗುಂದಿ, ರಾಮನಾಥ, ಬೂದಿಹಾಳ ಸಹಕಾರಿ ಸಂಘಗಳು ಉದ್ದೇಶಿತ ಕಾರ್ಯ ನಿರ್ವಹಿಸದೇ ಸ್ಥಗಿತಗೊಂಡಿದ್ದರಿಂದ ಈ ಸಹಕಾರ ಸಂಘಗಳನ್ನು ಕರ್ನಾಟಕ ಸಹಕಾರಿ ಸಂಘಗಳ ಕಾಯ್ದೆ 1959 ಕಲಂ 72 ರ ಮೇರೆಗೆ ಸಮಾಪಣೆಗೊಳಿಸುವ ಕುರಿತಂತೆ ಏನಾದರೂ ತಕರಾರುಗಳಿದ್ದಲ್ಲಿ ಅಥವಾ ಸಂಘದ ವ್ಯವಹಾರಗಳನ್ನು ಸಂಘದ ಉಪನಿಯಮದ ಮೇರೆಗೆ ಮುಂದುವರೆಸಿಕೊಂಡು ಹೋಗುವ ಬಗ್ಗೆ ತಮ್ಮ ಅಭಿಪ್ರಾಯ ಏನಾದರೂ ಇದ್ದಲ್ಲಿ ಈ ನೋಟಿಸು ಪ್ರಕಟಣೆಯ ದಿನಾಂಕದಿಂದ 7 ದಿನಗಳೊಳಗಾಗಿ ಲಿಖಿತ ಹೇಳಿಕೆಯನ್ನು ಸಹಕಾರ ಸಂಘಗಳ ಉಪನಿಬಂಧಕರ ಕಛೇರಿ ಜಿಲ್ಲಾ ಆಡಳಿತ ಭವನ ಕೊಠಡಿ ಸಂಖ್ಯೆ 138 ಸಲ್ಲಿಸಲು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವೇಕಾನಂದ ಶಾಲೆ ವಿದ್ಯಾರ್ಥಿಗಳ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ನಗರದ ಹೇಮ–ವೇಮ ಸಂಸ್ಥೆಯ ವಿವೇಕಾನಂದ ವಿದ್ಯಾಲಯದ ವಿದ್ಯಾರ್ಥಿಗಳು ಶಿಕ್ಷಣ ಇಲಾಖೆಯ ವಿವಿಧ ಕ್ರೀಡೆಗಳಾದ ಶಟಲ್ ಬ್ಯಾಟ್ಮಿಂಟನ್, ಯೋಗಾಸನ, ಚೆಸ್, ಟೇಬಲ್ ಟೆನಿಸ್, ಕರಾಟೆ ಕ್ರೀಡೆಗಳಲ್ಲಿ ಜಿಲ್ಲಾಮಟ್ಟದಲ್ಲಿ ಭಾಗವಹಿಸಿ ವಿಭಾಗ ಮಟ್ಟ ಮತ್ತು ರಾಜ್ಯಮಟ್ಟಗಳ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹತೆ ಪಡೆದಿದ್ದಾರೆ.

ಟೇಬಲ್ ಟೆನಿಸ್ ಹಾಗೂ ಚದುರಂಗ ಸ್ಪರ್ಧೆಯಲ್ಲಿ ಕೀರ್ತನಾ ಕಾಂಬಳೆ ಹಾಗೂ ಪ್ರವಲ್ಲಿಕಾ ಕೊಂಗತಿ ಇವರು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಯೋಗಾಸನದಲ್ಲಿ ಪ್ರಥಮ್ ಹಿರೇಮಠ್ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿರುತ್ತಾನೆ . ಆಯ್ಕೆಯಾದ ಕ್ರೀಡಾಪಟುಗಳನ್ನು ಸಂಸ್ಥೆಯ ಕಾರ್ಯದರ್ಶಿಗಳಾದ ವಿ.ಎಂ.ಕೇರಿ ಮತ್ತು ಶಂಕರ ಯಡಹಳ್ಳಿ ಹಾಗೂ ಸರ್ವ ಸದಸ್ಯರು ಹಾಗೂ ಮುಖ್ಯ ಗುರುಗಳು ಶಿಕ್ಷಕವೃಂದ ಅಭಿನಂದಿಸಿದ್ದಾರೆ.

# ಅಂಗನವಾಡಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.6–ಜಿಲ್ಲಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಅ.31 ರಂದು ಜರುಗಿದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ನೇಮಕಾತಿ ಕುರಿತ ಜಿಲ್ಲಾ ಮಟ್ಟದ ಸಭೆಯಲ್ಲಿ 01 ಅಂಗನವಾಡಿ ಕಾರ್ಯಕರ್ತೆ ಹಾಗೂ 05 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅಭ್ಯರ್ಥಿಗಳ ಆಯ್ಕೆಯನ್ನು ಅಂತಿಮಗೊಳಿಸಲಾಗಿರುತ್ತದೆ. 02 ಅಂಗನವಾಡಿ ಕಾರ್ಯಕರ್ತೆ ಹಾಗೂ 03 ಸಹಾಯಕಿಯರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿದ್ದು, ಈ ಹುದ್ದೆಗಳಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ ಈ ಹುದ್ದೆಗಳಿಗೆ ಆಕ್ಷೇಪಣೆ ಸಲ್ಲಿಸಬಯಸುವವರು ಸೂಕ್ತ ದಾಖಲೆಗಳೊಂದಿಗೆ ನವೆಂಬರ್ 14 ಒಳಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಹುನಗುಂದ ಹಾಗೂ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬಾಗಲಕೋಟೆ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹುನಗುಂದ ಇವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಬಕ್ಕಚೌಡಿ ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ನೇ. 06 :– ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಬಕ್ಕಚೌಡಿ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,




ಶಕ್ತಿ ಯೋಜನೆ: ಮಹಿಳೆಯರಿಗೆ ಉಚಿತ ಪ್ರಾಮಾಣದ ಸೌಲಭ್ಯ ಕಲ್ಪಿಸುವುದು. ಮತ್ತು ಮಹಿಳೆಯರಿಗೆ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣ ನೀಡುವುದು.

ಗೃಹ ಲಕ್ಷ್ಮಿ: ಕುಟುಂಬದ ಮಹಿಳಾ ಮುಖ್ಯಸ್ಥರಿಗೆ ಆರ್ಥಿಕ ನೆರವು ನೀಡಿ, ಅವರ ಸಬಲೀಕರಣ ಮಾಡುವುದು,

ಗೃಹ ಜ್ಯೋತಿ: ರಾಜ್ಯದ ಪ್ರತಿ ಮನೆಗೆ ಉಚಿತ ವಿದ್ಯುತ್ ಒದಗಿಸಿ, ವಿದ್ಯುತ್ ಬಿಲ್ ಹೊರೆಯಿಂದ ಮುಕ್ತಿ ನೀಡುವುದು.

ಮತ್ತು ಯುವನಿಧಿ, ಅನ್ನಭಾಗ್ಯ ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷರಾದ ಮೋಹಿನ್ ಪಾಠಣ್, ಮುಖಂಡರಾದ ಶಾಮರಾವ್ ಪಾಟೀಲ್, ಸಂಜು ಬಿರಾದಾರ್, ಪವನ ಬಾಪೂರೆ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಅಲ್ಪಸಂಖ್ಯಾತರ ಸಾಮೂಹಿಕ ವಿವಾಹ: ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

ಬೀದರ, ನವೆಂಬರ್.06 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ಸಮುದಾಯದ ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50000 ರೂ. ಹಾಗೂ ಸಾಮೂಹಿಕ ವಿವಾಹವನ್ನು ಏರ್ಪಡಿಸುವ ಆಯೋಜಕರುಗಳಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು–ವೆಚ್ಚಗಳಿಗಾಗಿ ಪ್ರತಿ ಜೋಡಿಗಳಿಗೆ 5000 ರೂ. ನೀಡಲಾಗುತ್ತದೆ.ಸಾಮೂಹಿಕ ವಿವಾಹ ಹಮ್ಮಿಕೊಳ್ಳುವ ಆಯೋಜಕರು ಕನಿಷ್ಠ 7 ದಿನ ಮುಂಚಿತವಾಗಿ ಸ್ವಂತ ಜಿಲ್ಲೆಯ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ, ವಿವಾಹ ನಡೆದ ಮೂರು ತಿಂಗಳ ಒಳಗಡೆ ವಧು–ವರರ ದಾಖಲಾತಿಗಳನ್ನು ಜಿಲ್ಲಾ ಕಛೇರಿಗೆ ಸಲ್ಲಿಸಬೇಕು. ಕನಿಷ್ಠ 5 ನವ ಜೋಡಿಗಳಿಗೆ ಸಾಮೂಹಿಕ ವಿವಾಹ ಏರ್ಪಡಿಸುವುದು, ಮೊದಲನೇ ವಿವಾಹವಾಗುತ್ತಿರುವ ನವ ಜೋಡಿಯಾಗಿರಬೇಕು, ವಧುವಿನ ವಯಸ್ಸು 18 ವರ್ಷದಿಂದ 42 ವರ್ಷ ಆಗಿರಬೇಕು, ವರನ ವಯಸ್ಸು 21 ವರ್ಷದಿಂದ 45 ವರ್ಷದೊಳಗಿನ ಆಗಿರಬೇಕು, ವಾರ್ಷಿಕ ಆದಾಯ 2.50 ಲಕ್ಷ ಮತ್ತು ಮಧು–ವರರ ಒಟ್ಟು ಆದಾಯ 5 ಲಕ್ಷ ರೂ. ಮೀರತಕ್ಕದ್ದಲ್ಲ. ಜೀವನದಲ್ಲಿ ಒಮ್ಮೆ ಮತ್ತು ಕುಟುಂಬದಲ್ಲಿ ಒಬ್ಬರು ಮಾತ್ರ ಈ ಸೌಲಭ್ಯ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೀದರ, ಮೌಲಾನಾ ಆಜಾದ ಭವನ, ಗುರುನಾನಕ ಝಿರಾ ದಿಂದ ಚಿಕ್‌ಪೇಟ ರಿಂಗ್ ರಸ್ತೆ, ಬೀದರಗೆ ಕಛೇರಿಗೆ ಅಥವಾ ದೂರವಾಣಿ ಸಂಖ್ಯೆ: 80482–295210, 8951391061 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಿಟಗುಪ್ಪ :ತಾಲೂಕಿನ ಚಾಂಗಲೇರಾ ಶ್ರೀ ವೀರಭದ್ರೇಶ್ವರ್ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಶಿವನುಭಾವ ಗೋಷ್ಠಿ ಮತ್ತು ಸಂಗೀತ ದರ್ಬಾರ್ ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್, ಹುಮನಾಬಾದ ಹಿರೇಮಠ ಸಂಸ್ಥಾನದ ರೇಣುಕಾ ಗಂಗಾಧರ ಶಿವಾಚಾರ್ಯರು, ತ್ರಿಪುರಾಂತ ಗವಿ ಮಠದ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಹಲಬರ್ಗಾ ಮಠದ ಹಾವಗಿಲಿಂಗೇಶ್ವರ ಶಿವಾಚಾರ್ಯರು, ಶಿವಕುಮಾರ್ ಸ್ವಾಮಿಗಳು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆ ಓದುತ್ತಿರುವ ದೃಶ್ಯ ಕಾಣಬಹದು. ಮಲ್ಲಮ್ಮ ನುಡಿ ಚಿತ್ರ

# ಲೋಕೇಶ ಉಡಬಾಳೆ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಕರ್ನಾಟಕರಾಜ್ಯೋತ್ಸವದ ಅಂಗವಾಗಿಬೀದರಜಿಲ್ಲೆಯಭಾಲ್ಕಿ ತಾಲೂಕಿನಮಾವಿನಹಳ್ಳಿಗ್ರಾಮದ ಲೋಕೇಶಉಡಬಾಳೆಅವರುಕನ್ನಡ ಸೇವಾ ಕ್ಷೇತ್ರದಲ್ಲಿ ನೀಡಿದ ವಿಶಿಷ್ಟ ಸೇವೆಯನ್ನು ಪರಿಗಣಿಸಿ, ಜಿಲ್ಲಾ ಉಸ್ತುವಾರಿಸಚಿವರಾದಸನ್ಮಾನ್ಯ ಈಶ್ವರಬಿ.ಖಂಡ್ರೆಅವರುಜಿಲ್ಲಾಮಟ್ಟದ ಕನ್ನಡರಾಜ್ಯೋತ್ಸವಪ್ರಶಸ್ತಿಯನ್ನು ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ,ಜಿಲ್ಲಾಪಂಚಾಯಿತಿಸಿಇಓ ಗಿರೀಶಬದೋಲೆ,ಹಾಗೂಇನ್ನಿತರ ಗಣ್ಯರು ಉಪಸ್ಥಿತರಿದ್ದರು.



ಲೋಕೇಶ ಉಡಬಾಳೆ ಅವರಿಗೆ ದೊರೆತಈಗೌರವವನ್ನುಸ್ವಾಗತಿಸುತ್ತಾ, ಅನುಭವ ಮಂಟಪ ಟ್ರಸ್ಟ್ ನ ಅಧ್ಯಕ್ಷರಾದ ಪರಮಪೂಜ್ಯ ಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದೇವರು,ಹಿರೇಮಠಸಂಸ್ಥಾನದ ಪೀಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ಗುರುಬಸವ ಪಟ್ಟದೇವರು, ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ ಕಾರ್ಯದರ್ಶಿಗಳಾದ ಮಹಾಲಿಂಗಸ್ವಾಮಿಗಳು,ಬೀದರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಸುರೇಶ ಚನ್ನಶೆಟ್ಟಿ

ಚನ್ನಬಸವೇಶ್ವರ ಗುರುಕುಲ ವಿಜ್ಞಾನಪದವಿಪೂರ್ವಕಾಲೇಜಿನ ಪ್ರಾಚಾರ್ಯಬಸವರಾಜಮೊಳಕೇರೆ, ಹಿರೇಮಠಸಂಸ್ಥಾನವಿದ್ಯಾಪೀಠಟ್ರಸ್ಟ್ ನಆಡಳಿತಾಧಿಕಾರಿಮೋಹನರೆಡ್ಡಿ, ಶಿವಶಂಕರ ಟೋಕರೆ, ಬಸವರಾಜ ಬಲ್ಲೂರ,ಚನ್ನಬಸವಹೆಡೆ,ಸಂಗಮೇಶ ಜ್ಯಾಂತೆ,ಉಮೇಶಜಾಬಾ,ಅಶೋಕ ದೀಡಿಗೆ, ಸಿದ್ಧಾರೂಢ

ಭಾಲ್ಕೆ,ಬಸವರಾಜಬಶೆಟ್ಟಿ,ವೀರಶೆಟ್ಟಿ ಚನ್ನಶೆಟ್ಟಿ,ಆನಂದಪಾಟೀಲ,ಸಂಜು ಅಲ್ಲೂರೆ,ಸಾಯಿನಾಥಬಿರಾದಾರ, ವಿಶಾಲ ಕನಕಟ್ಟೆ,ಗೋವಿಂದ ತಾಂದಳೆಮುಂತಾದ'ವರುಹರ್ಷ ವ್ಯಕ್ತಪಡಿಸಿದ್ದಾರೆ.

# ಟಿ20 ಟೂರ್ನಿ 2026 ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಫೈನಲ್



ಮುಂಬೈ:2026ರಟಿ20ವಿಶ್ವಕಪ್ ಟೂರ್ನಿ ಆಯೋಜನೆಗೆ ಬಿಸಿಸಿಐ ಸಕಲ ಸಿದ್ಧತೆ ನಡೆಸಿದ್ದು, ಟೂರ್ನಿ ಆಯೋಜನೆಗೆ ದೇಶದ ಐದು ನಗರಗಳನ್ನು ಆಯ್ಕೆ ಮಾಡಿದೆ ಎಂದು ಮೂಲಗಳು ತಿಳಿಸಿವೆ.

ಭಾರತವು ಶ್ರೀಲಂಕಾಜೊತೆಗೆ2026 ರಪುರುಷರ ಟಿ20 ವಿಶ್ವಕಪ್ ಅನ್ನು ಸಹ-ಆತಿಥ್ಯವಹಿಸಲುಸಜ್ಜಾಗಿದೆ.

2025 ರ ಮಹಿಳಾ ಏಕದಿನ ವಿಶ್ವಕಪ್‌ನಂತೆಯೇ, ಎರಡೂ ದೇಶಗಳ ನಡುವಿನ ರಾಜಕೀಯ ಉದ್ವಿಗ್ನತೆಯಿಂದಾಗಿ ಪಾಕಿಸ್ತಾನ ಭಾರತಕ್ಕೆ ಪ್ರಯಾಣಿಸುವುದಿಲ್ಲ.

ಪಾಕಿಸ್ತಾನದ ಪಂದ್ಯಗಳು ಶ್ರೀಲಂಕಾದಲ್ಲಿನಡೆಯಸಲಿದೆ.ಪಾಕಿಸ್ತಾನ ತಂಡ ಶ್ರೀಲಂಕಾದಲ್ಲಿತಮ್ಮ ಎಲ್ಲಾ ಪಂದ್ಯಗಳನ್ನು ಆಡಲಿದೆ.

ಅದರಂತೆಪಾಕಿಸ್ತಾನದಪಂದ್ಯಗಳು ಶ್ರೀಲಂಕಾದಲ್ಲಿ ನಡೆಯಸಲಿದೆ. ಪಾಕಿಸ್ತಾನ ತಂಡ ಶ್ರೀಲಂಕಾದಲ್ಲಿ ತಮ್ಮ ಎಲ್ಲಾಪಂದ್ಯಗಳನ್ನುಆಡಲಿದೆ. ಈ ಆಕರ್ಷಕ ಟಿ 20 ಪಂದ್ಯಾವಳಿ ಮುಂದಿನವರ್ಷಮಾರ್ಚ್‌ಮತ್ತು ಏಪ್ರಿಲ್ ನಡುವೆ ನಡೆಯುವ ಸಾಧ್ಯತೆಯಿದೆ.

# ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ 9 ಘಟಿಕೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ06:ಕಲಬುರಗಿಯಕರ್ನಾಟಕಕೇಂದ್ರೀಯವಿಶ್ವವಿದ್ಯಾಲಯದ ಒಂಬತ್ತನೇ ಘಟಿಕೋತ್ಸವವನ್ನು ಶನಿವಾರ ನವೆಂಬರ್ 8 ರಂದು ಬೆಳಿಗ್ಗೆ 10 ಗಂಟೆಗೆಕಲಬುರಗಿಯಸಿ.ಯು.ಕೆ. ವಿವಿಧೋದ್ದೇಶ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತದ ಕಾನೂನು ಆಯೋಗದ ಅಧ್ಯಕ್ಷರು ಮತ್ತು ಭಾರತದ ಸುಪ್ರೀಂ ಕೋರ್ಟ್‌ನ ವಿಶ್ರಾಂತ ಗೌರವಾನ್ವಿತ ನ್ಯಾಯಮೂರ್ತಿಗಳಾದ ದಿನೇಶಮಹೇಶ್ವರಿಅವರುಮುಖ್ಯಅತಿಥಿಗಳಾಗಿಘಟಿಕೋತ್ಸವಭಾಷಣ ಮಾಡುವರು.

ಕರ್ನಾಟಕಕೇಂದ್ರೀಯ ವಿಶ್ವವಿದ್ಯಾಲಯದಕುಲಪತಿಗಳಾದ ಪ್ರೊ. ಬಟ್ಟುಸತ್ಯನಾರಾಯಣಕಾರ್ಯಕ್ರಮದಅಧ್ಯಕ್ಷತೆವಹಿಸುವರು. ಪರೀಕ್ಷಾ ನಿಯಂತ್ರಣಾಧಿಕಾರಿ ಡಾ. ಕೋಟಾ ಸಾಯಿ ಕೃಷ್ಣ ಮತ್ತು ಕುಲಸಚಿವ ಪ್ರೋ.ಆರ್.ಆರ್. ಬಿರಾದಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

# ಇಮೇಲ್ ಮೂಲಕ ಶಾಲೆಗೆ ಬಾಂಬ್ ಬೆದರಿಕೆ ಹಾಕಿದ್ದ ಮಹಿಳಾ ಟೆಕ್ಕಿ ಅರೆಸ್ಟ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ನ.6- ಇಮೇಲ್ ಐಡಿ ಮುಖಾಂತರ ಶಾಲೆಯೊಂದಕ್ಕೆ ಬಾಂಬ್ ಹಾಕ್ಸ್ ಬೆದರಿಕೆ ಸಂದೇಶ ಕಳುಹಿಸಿದ್ದ ಮಹಿಳಾ ಟೆಕ್ಕಿಯನ್ನು ಉತ್ತರ ವಿಭಾಗದ ಸೈಬರ್ ಕ್ರೈಂ ಪೊಲೀಸರು ಬಂಧಿಸಿದ್ದಾರೆ.

ರೆನೆಜೋಶಿಲ್ಡಾ ಬಂಧಿತ ಸಾಫ್ಟ್ ವೇರ್ ಇಂಜಿನಿಯರ್.ಕಲಾಸಿಪಾಳ್ಯ ಪೊಲೀಸ್‌ಠಾಣೆ ವ್ಯಾಪ್ತಿಯಲ್ಲಿರುವ ಪಬ್ಲಿಕ್ ಶಾಲೆಯೊಂದರ ಇಮೇಲ್ ಐಡಿಗೆಜೂ.14ರಂದು ರಾತ್ರಿ 10.15ರಸುಮಾರಿನಲ್ಲಿಇಮೇಲ್ ಸಂದೇಶ ಬಂದಿತ್ತು.

ಶಾಲಾ ಪ್ರಾಂಶುಪಾಲರು ಸಂದೇಶ ಗಮನಿಸಿ ಈ ಸಂಬಂಧ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಕೈಗೊಂಡಿದ್ದರು.ನಗರದಲ್ಲಿದಾಖಲಾಗಿರುವ ಇತರೆಹುಸಿಬಾಂಬ್ ಕರೆಗಳ ಪ್ರಕರಣಗಳನ್ನು ಉತ್ತರ ವಿಭಾಗದ ಸೈಬರ್ ಕ್ರೈಂನ ಸಹಾಯಕ ಪೊಲೀಸ್ ಆಯುಕ್ತರನ್ನುಮುಖ್ಯತನಿಖಾಧಿಕಾರಿಯಾಗಿಮತ್ತುಸೈಬರ್‌ಕ್ರೈಂಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಅವರನ್ನು ಸಹಾಯಕ ತನಿಖಾಧಿಕಾರಿಯಾಗಿ ಪ್ರಕರಣಗಳನ್ನು ಸೈಬರ್ ಕ್ರೈಂಗೆ ವರ್ಗಾಯಿಸಿ ತನಿಖೆ ಕೈಗೊಳ್ಳಲು ನಗರ ಪೊಲೀಸ್ ಆಯುಕ್ತರು ಸೂಚಿಸಿದ್ದರು.

ತನಿಖೆಮುಂದುವರೆಸಿದ್ದಸೈಬರ್‌ಕ್ರೈಂಪೊಲೀಸರುಇಮೇಲ್ ಐಡಿಮೂಲಕ ಬೆದರಿಕೆವೊಡ್ಡಿದ್ದ ಮಹಿಳೆಯನ್ನು ಗುಜರಾತ್ ರಾಜ್ಯದ ಅಹಮದಾಬಾದ್ ನಗರದ ಕೇಂದ್ರ ಕಾರಾಗೃಹದಿಂದ ಬಾಡಿವಾರಂಟ್ ಮೂಲಕ ವಶಕ್ಕೆ ಪಡೆದುಕೊಂಡು ವಿಚಾರಣೆ ಮಾಡಿದಾಗ, ಈ ಪ್ರಕರಣವೂ ಸೇರಿದಂತೆ ನಗರದ ಇತರೆ 6 ಪ್ರಕರಣಗಳಲ್ಲಿ ಭಾಗಿಯಾಗಿರುವುದು ಗೊತ್ತಾಗಿದೆ.

ಆರೋಪಿತೆಸಾಫ್ಟ್‌ವೇರ್‌ಇಂಜಿನಿಯರ್‌ಉದ್ಯೋಗಿಯಾಗಿದ್ದು,ಈಗಾಗಲೇ ಈಕೆ ವಿರುದ್ಧ ಗುಜರಾತ್, ಮೈಸೂರು, ತಮಿಳುನಾಡಿನ ಚೆನ್ನೈನಲ್ಲಿಯೂ ಹುಸಿಬಾಂಬ್ ಕರೆಗಳ ಪ್ರಕರಣಗಳು ದಾಖಲಾಗಿರುವ ಬಗ್ಗೆ ತನಿಖೆಯಿಂದ ತಿಳಿದುಬಂದಿರುತ್ತದೆ.

ಈಕೆ ತನ್ನ ಡಿವೈಎಸ್‌ಗಳಿಗೆ ವಿಪಿಎನ್ ಇಂಟರ್‌ನೆಟ್ ಬಳಕೆಮಾಡುತ್ತಿದ್ದು, ಗೇಟ್‌ಕೋಡ್ ಎಂಬ ಅಪ್ಲಿಕೇಷನ್ ಮೂಲಕ ವರ್ಚ್ಯೂಯಲ್ ಮೊಬೈಲ್ ನಂಬರ್‌ಗಳನ್ನು ಪಡೆದುಕೊಂಡು ಸುಮಾರು ಆರೇಳು ವಾಟ್ಸಾಪ್ ಖಾತೆಗಳನ್ನು ಬಳಕೆಮಾಡುತ್ತಿರುವ ಬಗ್ಗೆ ತನಿಖೆಯಿಂದ ತಿಳಿದುಬರುತ್ತದೆ.



ಬೆಂಗಳೂರು: ಕಾರವಾರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಂಟಿಗ್ ಕಮ್ಯೂನಿಕೇಷನ್ ಲಿಮಿಟೆಡ್‌ನ ಮಾನ್ಯ ಅಧ್ಯಕ್ಷರೂ ಆದ ಶ್ರೀ ಸತೀಶ ಕೃಷ್ಣ ಸೈಲ್ ಇವರನ್ನು ಕೆನರಾ ಡಿಸ್ಟ್ರಿಕ್ಟ್ ಸೆಂಟ್ರಲ್ ಕೋ-ಆಪರೇಟಿವ್ ಬ್ಯಾಂಕ್ ಲಿ. (ಕೆಡಿಸಿಸಿ) ಗೆ ಅಧಿಕಾರೇತರ ಸದಸ್ಯರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರವು ನಾಮನಿರ್ದೇಶನ ಮಾಡಿರುವುದಕ್ಕೆ ಕೆಎಸ್‌ಎಂಸಿಎ ಸಂಸ್ಥೆಯು ಹರ್ಷಿಸುತ್ತದೆ ಹಾಗೂ ಸರ್ಕಾರಕ್ಕೆ ಗೌರವಪೂರ್ವಕ ವಂದನೆ ಸಲ್ಲಿಸುವುದರೊಂದಿಗೆ ಶ್ರೀಯುತರು ಬ್ಯಾಂಕಿನ ಅಧಿಕಾರೇತರ ಸದಸ್ಯರಾಗಿ ಶ್ಲಾಘನೀಯ ಕಾರ್ಯನಿರ್ವಹಿಸುವರೆಂದು ಆಶಿಸುತ್ತದೆ. ಮಲ್ಲಮ್ಮ ನುಡಿ ಚಿತ್ರ

# ವಾಯು ಮಾಲಿನ್ಯದಿಂದ ಆರೋಗ್ಯದ ಮೇಲೆ ದುಷ್ಪರಿಣಾಮ: ಜಾಫರ್ ಸಾಧಿಕ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ವಾಯು ಮಾಲಿನ್ಯವುಮಾನವನಆರೋಗ್ಯ ಮತ್ತುಪರಿಸರದಮೇಲೆಗಂಭೀರ ಪರಿಣಾಮಬೀರುತ್ತಿದೆಎಂದುಭಾಲ್ಕಿ ಸಹಾಯಕಸಾರಿಗೆಅಧಿಕಾರಿಜಾಫರ್ ಸಾಧಿಕ್ ತಾಲೂಕಿನ ಹಳ್ಳಿಖೇಡ್ ಬಿ ಪಟ್ಟಣದ ಮಾತೋಶ್ರೀ ಕಸ್ತೂರಬಾಯಿತಾಡಂಪಳ್ಳಿಪ್ರೌಢ ಶಾಲೆಯಲ್ಲಿಸಹಾಯಕಪ್ರಾದೇಶಿಕ ಸಾರಿಗೆಕಚೇರಿ ಭಾಲ್ಕಿ ವತಿಯಿಂದ ಹಮ್ಮಿಕೊಂಡಿದ್ದವಾಯುಮಾಲಿನ್ಯ ನಿಯಂತ್ರಣಜಾಗೃತಿಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿಮಾತನಾಡುತ್ತ ತಿಳಿಸಿದರು.ವಾಯುಮಾಲಿನ್ಯದಿಂದ ಅಸ್ತಮಾ,ಹೃದಯರೋಗಸೇರಿದಂತೆ ಹಲವಾರುರೋಗಗಳುಆವರಿಸಲಿವೆ ಎಂದುಎಚ್ಚರಿಕೆನೀಡಿದರು.ವಾಯು ಮಾಲಿನ್ಯ ಹೋಗಲಾಡಿಸಲು ಪ್ರತಿಯೊಬ್ಬರು ಗಿಡ ಮರಗಳು ಬೆಳೆಸಬೇಕುಎಂದುಸಲಹೆನೀಡಿದರು. ಇದೇ ಸಂದರ್ಭದಲ್ಲಿ ಈ ಜಾಗೃತಿ ಕಾರ್ಯಕ್ರಮ ಅಂಗವಾಗಿಶಾಲಾ ವಿದ್ಯಾರ್ಥಿಗಳಿಗೆಪ್ರಬಂದಸ್ಪರ್ಧೆಗಳು ಏರ್ಪಡಿಸಲಾಯಿತು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಅಧ್ಯಕ್ಷತೆಯನ್ನು ವಿಜ್ಞಾನ ಪರಿಷತ್ ಸದಸ್ಯರಾದ ಸುಭಾಷವಿ. ಗಂಗಾ ಮಾತನಾಡಿ, ವಾಯುಮಾಲಿನ್ಯ ತಡೆಗಟ್ಟಲು ವಾಹನಗಳಬಳಕೆಕಡಿಮೆಮಾಡಬೇಕು ಎಂದುಸಲಹೆನೀಡಿದರು. ಪರಿಸರ ಸ್ನೇಹಿಸೈಕಲ್‌ಹೆಚ್ಚಿನಪ್ರಮಾಣದಲ್ಲಿ ಬಳಸಬೇಕುಎಂದುಸಲಹೆನೀಡಿದರು. ಮಾತೋಶ್ರೀಕಸ್ತೂರಬಾಯಿತಾಡಂಪಳ್ಳಿ ಪ್ರೌಢ ಶಾಲೆ ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದರು. ಮಕ್ಕಳಲ್ಲಿಪರಿಸರಪ್ರಜ್ಞೆ ಒಡಮುಡಿಸಲುಶ್ರಮಿಸುತ್ತಿದೆಎಂದರು. ಮೋಟಾರ್ ವಾಹನ ನಿರೀಕ್ಷಕರ ವೀರಮ್ಮ ಸಿ. ಮಾತನಾಡಿದರು. ವೀರಭದ್ರೇಶ್ವರಮೋಟಾರ್‌ಸೈಕಲ್ ತರಬೇತಿ ಕೇಂದ್ರದ ಪರಮೇಶ್ವರ್ ಇಲ್ಲಾಳ,ಸರ್ಕಾರಿಪ್ರೌಢಶಾಲೆಯ ದತ್ತಾತ್ರಿ ಪಂಚಾಳ, ಜ್ಞಾನ ಭಾರತಿ ಎಜುಕೇಶನ್,ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಮಂಜುಳಾ ಎಸ್. ಗಂಗಾ ಕಾರ್ಯದರ್ಶಿ ಆದಿತ್ಯ ಗಂಗಾ,ರಾಜಕುಮಾರ್‌ಪರ್ಸನ್, ಪರಶುರಾಮಟಿ. ಅರ್ಕಿಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಗರಿ ನದಿಯಲ್ಲಿ ಮುಳುಗಿದ್ದ ಇಬ್ಬರಲ್ಲಿ ಓರ್ವ ಯುವಕನ ಶವ ಪತ್ತೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ:6ತಾಲೂಕಿನಹಗರಿ(ವೇದಾವತಿ)ನದಿಯಲ್ಲಿ ಮೊನ್ನೆ ನ 4 ರಂದು ಈಜಾಡಲು ಹೋಗಿದ್ದ ಇಬ್ಬರು ಯುವಕರು ಮುಳುಗಿ ನಾಪತ್ತೆಯಾಗಿದ್ದರು. ಇಬ್ಬರ ಪೈಕಿ ಓರ್ವ ಯುವಕನ ಶವ ಇಂದು ಪತ್ತೆಯಾಗಿದೆ.

ಪಿ.ಡಿ.ಹಳ್ಳಿ ಠಾಣೆಯ ಪೊಲೀಸರು ತಿಳಿಸಿದ್ದಾರೆ. ವೇದಾವತಿ ನದಿಯಲ್ಲಿ ಬುಧವಾರ ಬೆಳಗ್ಗೆಯಿಂದ ಸಂಜೆವರೆಗೆ ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಹಾಗೂ ಎನ್‌ಡಿಆರ್‌ಎಫ್ ತಂಡದ ಸಿಬ್ಬಂದಿ ದಿನವಿಡೀ ಕಾರ್ಯಾಚರಣೆ ನಡೆಸಿದ್ದಾರೆ.

ನದಿಯಲ್ಲಿಕಿಲೋಮಿಟರ್‌ಗಟ್ಟಲೇಹುಡುಕಲಾಗಿದೆ. ಆದರೂಕೊಚ್ಚಿಹೋಗಿರುವಬಾಲಕರಾದವಿಷ್ಣುಸಾಯಿ, ಕಿರಣ್‌ಪತ್ತೆಯಾಗಿಲ್ಲ.ಶೋಧಕಾರ್ಯಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಹಗರಿ ಗ್ರಾಮದ ಕಿರಣ್ (16), ಎಂಟನೇ ತರಗತಿ ಓದುತ್ತಿದ್ದ ವಿಷ್ಣುಸಾಯಿ (14) ಮೊನ್ನೆ ಸಂಜೆ ಈಜಲು ಹೋದಾಗನೀರಲ್ಲಿಸಿಲುಕಿಕೊಂಡುಮೇಲೆಬರಲಾಗದೆ ಸಾವನ್ನಪ್ಪಿದ್ದರು.

ಈವಿಷಯತಿಳಿದುನಿನ್ನೆಇಡೀದಿನಇವರಶವಗಳಿಗಾಗಿ ಪೊಲೀಸರು,ಅಗ್ನಿಶಾಮಕದಳದಸಿಬ್ಬಂದಿಹುಡುಕಾಟ ನಡೆಸಿದ್ದರು.

ಆದರೂ ದೊರೆತಿರಲಿಲ್ಲ.

ಇಂದು ಬೆಳಿಗ್ಗೆಮತ್ತೆ ಹುಡುಕಾಟ ನಡೆಸಿದಾಗ ಕಿರಣ್ ಶವ ಪತ್ತೆಯಾಗಿದೆ. ವಿಷ್ಣು ಸಾಯಿ ಶವಕ್ಕಾಗಿ ಹುಡುಕಾಟಮುಂದುವರೆದಿದೆ.ಈಬಗ್ಗೆಪಿಡಿಹಳ್ಳಿಠಾಣೆಯಲ್ಲಿ ಪ್ರಕರಣ ದಾಖಲಸಗಿದೆ.

# ಸೋಮಾಗ್ರಂಥಲೋಕಾರ್ಪಣೆಸೋಮಾಯಣದಾಖಲೆಯಗ್ರಂಥ:ಭಾಲ್ಕಿಶ್ರೀ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೋಮಾಯಣಗ್ರಂಥವು ದಾಖಲೆಸೃಷ್ಟಿಸುವಗ್ರಂಥವಾಗಿದೆಎಂದು ಬಸವಕಲ್ಯಾಣಅನುಭವಮಂಟಪ ಅಧ್ಯಕ್ಷನಾಡೋಜಡಾ.ಬಸವಲಿಂಗ ಪಟ್ಟದೇವರುಹೇಳಿದರು.ಪಟ್ಟಣದ ಚನ್ನಗಿರಿ ನಿವಾಸದಲ್ಲಿ ಗುರುವಾರ ಆಯೋಜಿಸಿದ ಸೋಮಾಯಣ ಗ್ರಂಥ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಜೀವನದಲ್ಲಿ ಬರುವ ಕಷ್ಟ, ನಷ್ಟಗಳಿಗೆ ಸ್ಪಂದಿಸುತ್ತಾ ನಾವು ಹೊಸ ಜೀವನಕ್ಕೆಹೊಂದಿಕೊಂಡುಹೋಗಲು ಕಲಿಯಬೇಕು.ದಾಖಲೆಗಾಗಿಗ್ರಂಥ ಮಹತ್ವದ್ದಾಗಿದೆ. ಈ ಗ್ರಂಥದಲ್ಲಿ ಸೋಮನಾಥನುಚ್ಚರವರಸಾಹಿತ್ಯದ ಮೇಲೆಬೆಳಕುಚೆಲ್ಲಲಾಗಿದೆ.ಎಲ್ಲರ ಆಶಯಗಳಿಗೆತಕ್ಕಂತೆಗ್ರಂಥಮೂಡಿ ಬಂದಿದೆ ಎಂದು ಹೇಳಿದರು

ಕಾರ್ಯಕ್ರಮಉದ್ಘಾಟಿಸಿಮಾತನಾಡಿದ ಶರಣಸಾಹಿತ್ಯಪರಿಷತ್‌ಜಿಲ್ಲಾಧ್ಯಕ್ಷ ಶಂಭುಲಿಂಗಕಾಮಣ್ಣ,ಪುಸ್ತಕಮಸ್ತಕ ಬೆಳೆಸುತ್ತವೆ.

ಸಮಾಜಕ್ಕಾಗಿ ತಮ್ಮ ಬದುಕು ಮೀಸಲಿಟ್ಟ ವ್ಯಕ್ತಿ ಸೋಮನಾಥ ನುಚ್ಚಾರವರು. ಅವರ ಬದುಕು ಕುರಿತುಮೂಡಿಬಂದಸೋಮಯಣ ಗ್ರಂಥದಲ್ಲಿಎಲ್ಲವನ್ನೂಅಳವಡಿಸಿರುವುದು ಓದುಗರಿಗೆಆಸಕ್ತಿತರುವಂತಹದ್ದು, ಸಂಪಾದಕಮಂಡಳಿಯಶ್ರಮದಿಂದ ಗ್ರಂಥಉತ್ತಮವಾಗಿಮೂಡಿಬಂದಿದೆ ಎಂದುಹೇಳಿದರು.ಗ್ರಂಥವಿಶ್ಲೇಷಣೆ ಮಾಡಿದ ಸಾಹಿತಿ ರಘುಶಂಖ ಭಾತಾಂಬ್ರ , ಮೈಯಲ್ಲಿ ಹರುಕು ಬಟ್ಟೆಇದ್ದರುಪರವಾಗಿಲ್ಲ,ಕೈಯಲ್ಲಿ ಒಂದುಪುಸ್ತವಿರಲಿ ಎಂದು ಚಿಂತಕ ಡಾಕ್ಟರ್‌ಬಿ.ಆರ್.ಅಂಬೇಡ್ಕರ್‌ಹೇಳಿದ ಹಾಗೆ ಪುಸ್ತಕ ನಮ್ಮಲಿಯ ಜ್ಞಾನ ಹೆಚ್ಚಿಸುವ ಸಾಧನ ವಾಗಿದೆ. ಈ ನಿಟ್ಟಿನಲ್ಲಿಸುಮಾರು7ಆಯಾಮಗಳಲ್ಲಿ ಸೋಮಾಯಣಗ್ರಂಥರಚಿಸಲಾಗಿದೆ ಎಂದು ಹೇಳಿದರು.

ಸಾಹಿತಿ ವೀರಶೆಟ್ಟಿ ಬಾವುಗೆ ಮಾತನಾಡಿ,ಆಹಾರನಮಗೆಬದುಕಿ ಉಳಿಯಲು ಬೇಕು. ಆದರೆ ಪುಸ್ತಕ ನಾವು ಹೇಗೆ ಬದುಕಬೇಕು ಎಂದು ಕಳಿಸಿಕೊಡುತ್ತವೆಎಂದುಹೇಳಿದರು. ಜನಪದತಜ್ಞರಾಜೇಂದ್ರ,ಎರನಾಳೆ ಮಾತನಾಡಿ, ಪುಸ್ತಕನಾವುತಲೆಯೆತ್ತಿ ಬದುಕುವಂತೆ ಮಾಡುತ್ತವೆ.

ಸೋಮನಾಥನುಚ್ಚಅವರುಜ್ವಲಂತ ಸಮಸ್ಯೆಗಳನ್ನು ಪ್ರತಿಬಿಂಬಿಸುವ ಕವಿಯಾಗಿದ್ದಾರೆ. ಇದ್ದಿದ್ದನ್ನುಇದ್ದಂಗೆ ಬರೆಯುವನೇರನುಡಿಯಸಾಹಿತಿ ಇವರಾಗಿದ್ದಾರೆಎಂದುಹೇಳಿದರು.

ಇತಿಹಾಸತಜ್ಞಡಾಕ್ಟರ್‌ವೈಜಿನಾಥ ಭಂಡೆ, ಸಾಹಿತಿ ಚಂದ್ರಶೇಖರ ಬಿರಾದಾರ, ಜಯಶ್ರೀ ಪ್ರಕಾಶ್ ಸುಕಾಳೆ,ಕಸಾಪಅಧ್ಯಕ್ಷನಾಗಭೂಷಣ ಮಾಮಡಿ,

ಓಂಕಾರ್‌ನುಚಾ,ಮಲ್ಲಿಕಾರ್ಜುನ ನುಚ್ಚಾ,ಚಂದ್ರಕಾಂತಬಿರಾದಾರ, ಜೈರಾಜ್ ದಾಬಶೆಟ್ಟಿ, ಅಶೋಕ ರಾಜೋಳೇ,ಗಣಪತಿಭುರೆ,ಬಸವರಾಜ್ ಬಲ್ಲೂರಉಪಸ್ಥಿತರಿದ್ದರು.ಸುಹಾಸಿನಿ ಸ್ವಾಗತಿಸಿದರು.

ನಾಗಭೂಷಣಮಾಮನಿರೂಪಿಸಿದರು. ಗಿರಿಜಾನಂದನುಚವಂದಿಸಿದರು.ಚಿತ್ರ 6ಬಿಎಲ್ಕೆ4 ಭಾಲ್ಕಿಪಟ್ಟಣದಚನ್ನಗಿರಿ ನಿವಾಸದಲ್ಲಿನಾಡೋಜಬಸವಲಿಂಗ ಪಟ್ಟದೇವರುಸೋಮಾಯಣಗ್ರಂಥ ಲೋಕಾರ್ಪಣೆ ಮಾಡಿದರು.

## ವಕ್ಫ್‌ನೋಂದಾಯಿತ ಮದರಸಾಗಳಲ್ಲಿ ಅತಿಥಿ ಶಿಕ್ಷಕರ ಹುದ್ದೆ

# ನ,10 ರಂದು ಸ್ಥಳ ಆಯ್ಕೆ ಮಾಡಲು ಕೌನ್ಸಿಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ06:2025-26ನೇಸಾಲಿಗೆಅಲ್ಪಸಂಖ್ಯಾತರನಿರ್ದೇಶನಾಲಯ ಹಾಗೂಅಜೀಂಪ್ರೇಮಜಿಫೌಂಡೇಷನ್‌ಸಂಸ್ಥೆಯವರಸಹಯೋಗದೊಂದಿಗೆ ವಕ್ಫ್‌ನೋಂದಾಯಿತಮದರಸಾಗಳಲ್ಲಿಗಣಿತ,ವಿಜ್ಞಾನಹಾಗೂಕನ್ನಡಮತ್ತು ಇಂಗ್ಲಿಷ್‌ಭಾಷಾವಿಷಯಗಳಲ್ಲಿಬೋಧಿಸಲುಅತಿಥಿಶಿಕ್ಷಕರನ್ನುತಾತ್ಕಾಲಿಕ ನೇಮಕಾತಿಗೆಸಂಬಂಧಿಸಿದಂತೆಈಗಾಗಲೇಸಾಮಾನ್ಯಪ್ರವೇಶಪರೀಕ್ಷೆಹಾಗೂ ಸಂದರ್ಶನ/ಡೆಮೊತರಗತಿಗಳನ್ನುಮೂಲಕಆಯ್ಕೆಯಾದಅಭ್ಯರ್ಥಿಗಳು ಬೋಧಿಸಲು ಇಚ್ಚಿಸುವ ಸ್ಥಳವನ್ನು ಆಯ್ಕೆ ಮಾಡಲು ಇದೇ ನವೆಂಬರ್ 10 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಸ್ಟೇಶನ್ ರಸ್ತೆಯ ಕಲಬುರಗಿ ನಗರಾಭಿವೃದ್ಧಿಪ್ರಾಧಿಕಾರದಕಚೇರಿಯಮೊದಲನೇಮಹಡಿಯಲ್ಲಿರುವ ಅಲ್ಪಸಂಖ್ಯಾತರಕಲ್ಯಾಣ ಇಲಾಖೆಯ ಜಿಲ್ಲಾಅಧಿಕಾರಿಗಳ ಕಚೇರಿಯಲ್ಲಿ ಕೌನ್ಸಲಿಂಗ್ ಆಯೋಜಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ. ಅರ್ಹ ಎಲ್ಲಾ ಅಭ್ಯರ್ಥಿಗಳು ಮೇಲ್ಕಂಡ ದಿನದಂದು ನಿಗದಿಪಡಿಸಿದ ಸಮಯಕ್ಕೆ ಸರಿಯಾಗಿ ಹಾಜರಾಗಿ ಕೌನ್ಸಲಿಂಗ್‌ನಲ್ಲಿ ಭಾಗವಹಿಸಿ ಬೋಧನೆಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಬೇಕು. ತಡವಾಗಿ ಬಂದ ಅಭ್ಯರ್ಥಿಗಳಿಗೆ ಇಚ್ಚಿಸುವ ಸ್ಥಳ ಲಭ್ಯವಾಗದೇ ಇದ್ದಲ್ಲಿ ಖಾಲಿ ಇರುವ ಸ್ಥಾನಗಳ ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಅತಿಥಿ ಶಿಕ್ಷಕರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಆಯ್ಕೆಯಾದ ಹುದ್ದೆಗೆ ಸಂಬಂಧಿಸಿದಂತೆ ಶೈಕ್ಷಣಿಕ ಮೂಲ ದಾಖಲಾತಿಗಳು (ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಡಿಗ್ರಿ, ಬಿ.ಇಡ್./ ಡಿ.ಇಡಿ.) ಹಾಗೂ ಯಾವುದೇ ಗುರುತಿನ ಚೀಟಿ (ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಹಾಗೂ ಮತ್ತಿತರ ದಾಖಲೆ) ಇದರ ಒಂದು ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕೆಂದು ಅವರು ತಿಳಿಸಿದ್ದಾರೆ.

# ಹಮ್ದ್ ಔರ್ ನಾಥ್ ಸ್ಪರ್ಧೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಪ್ರತಿಭಾವಂತ ಯುವಕರನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಹಮ್ದ್ ಔರ್ ನಾಥ್ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಸಾಲಿಡಾರಿಟಿ ಯೂಥ್ ಮೂವ್ ಮೆಂಟ್ ಬೆಂಗಳೂರು ಘಟಕದ ಅಧ್ಯಕ್ಷ ಸುಹೇಲ್ ಅಹ್ಮದ್ ತಿಳಿಸಿ ದ್ದಾರೆ.

ಇಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಷೀದ್ ಸ್ಪರ್ಧೆ ಹೆಸರಲ್ಲಿ ಯುವಕರನ್ನು, ಅವರಲ್ಲಿರುವ ಪ್ರತಿಭಾ ಪ್ರಗ್ನೆಯನ್ನು ಉತ್ತೇಜಿಸುವ ಗುರಿಯಿಂದ ಈ ಸ್ಪರ್ಧೆ ಏರ್ಪಡಿಸಲಾಗಿದೆ.

ಹೈಸ್ಕೂಲ್ ವಿದ್ಯಾರ್ಥಿಗಳಿಂದಕಾಲೇಜ್ ವಿದ್ಯಾರ್ಥಿಗಳವರೆಗೆಅಂದರೆ40 ವರ್ಷದವಯಸ್ಸಿನವರೆಗೆಇರುವಎಲ್ಲರೂಸ್ಪರ್ಧೆಯಲ್ಲಿಪಾಲ್ಗೊಳ್ಳಬಹುದು ಎಂದು ವಿವರಿಸಿದ್ದಾರೆ.

ಸ್ಪರ್ಧೆ ಯಲ್ಲಿ ಭಾಗವಹಿಸುವವರು ಇಲ್ಲಿರುವ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿದಾಗ ಅಪ್ಲಿಕೇಷನ್ ಬರುತ್ತದೆ. ಅದರಲ್ಲಿನ ವಿವರಗಳನ್ನು ಪೂರ್ಣಗೊಳಿಸಿ ಸಬ್ ಮಿಟ್ ಮಾಡಬೇಕು.ಮೂರು ನಿಮಿಷದ ವಾಯ್ಸ್ ರೆಕಾರ್ಡ್ ಮಾಡಿ ಕಳಿಸುವುದು ಕಡ್ಡಾಯ. ಹೆಚ್ಚಿನ ವಿವರಗಳಿಗೆ ನಂ: 9980906632 ಸಂಪರ್ಕಿಸಬೇಕು ಎಂದು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)